ಸಂಪುಟ: 11 ಸಂಚಿಕೆ: 182 ಪುಟ: 4+2 ಬೆಲೆ : 3.00 ಭಾನುವಾರ, ಆಗಸ್ಟ್ 23, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 182 Pages : 4+2 Rate : 3.00 Sunday, August 23, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

## ನೂತನ ವಿಧಾನಸಭಾಧ್ಯಕ್ಷ ಜಿ.ಎಸ್. ಪಾಟೀಲರಿಗೆ ಗಜೇಂದ್ರಗಡದಲ್ಲಿ ಅದ್ದೂರಿ ಸ್ವಾಗತ

# ಕ್ಷೇತ್ರದ ಕೆಲಸ ನಿಲ್ಲುವುದಿಲ್ಲ, ಹಿಂಜರಿಯಬೇಡಿ

**ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ರಾಜ್ಯ ವಿಧಾನಸಭೆಯ 18ನೇ ಸಭಾಧ್ಯಕ್ಷರಾಗಿ ಆಯ್ಕೆಯಾದ ಬಳಿಕ ಮೊದಲ ಬಾರಿಗೆ ಗಜೇಂದ್ರಗಡ ಪಟ್ಟಣಕ್ಕೆ ಆಗಮಿಸಿದ ನೂತನ ವಿಧಾನಸಭಾಧ್ಯಕ್ಷ ಜಿ.ಎಸ್. ಪಾಟೀಲ ಅವರಿಗೆ ಶನಿವಾರ ಅಭಿಮಾನಿಗಳು ಹಾಗೂ ಸಾರ್ವಜನಿಕರು ಅದ್ದೂರಿ ಸ್ವಾಗತ ನೀಡಿ, ಭವ್ಯ ಮೆರವಣಿಗೆ ನಡೆಸಿದರು. ಈ ವೇಳೆ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಯಾರೂ ಆತಂಕಪಡಬೇಕಿಲ್ಲ ಎಂದು ಜಿ.ಎಸ್. ಪಾಟೀಲ ಅಭಯ ನೀಡಿದರು.

ಯಲಬುರ್ಗಾ ಮಾರ್ಗವಾಗಿ ಪಟ್ಟಣಕ್ಕೆ ಆಗಮಿಸುವ ಮುನ್ನ ಹಿರೇಕೊಪ್ಪ, ರಾಮಾಪೂರ ಹಾಗೂ ಉಣಚಗೇರಿ ಗ್ರಾಮಗಳಲ್ಲಿ ಜಿ.ಎಸ್. ಪಾಟೀಲ ಅವರಿಗೆ ಸ್ವಾಗತ ಕೋರಲಾಯಿತು. ಬಳಿಕ ಚೆನ್ನಮ್ಮ ವೃತ್ತಕ್ಕೆ ಆಗಮಿಸುತ್ತಿದ್ದಂತೆ ನೂರಾರು ಸಂಖ್ಯೆಯಲ್ಲಿ ಸೇರಿದ್ದ ಅಭಿಮಾನಿಗಳು ಜೈಕಾರ ಹಾಕಿ, ಪುಷ್ಪವೃಷ್ಟಿ ಮಾಡಿ, ಹಾರ ಹಾಗೂ ಶಾಲು ಹೊದಿಸಿ ಅಭಿನಂದಿಸಿದರು. ಅಲ್ಲಿಂದ ಕಾಲಕಾಲೇಶ್ವರ ವೃತ್ತದವರೆಗೆ ಭವ್ಯ ಮೆರವಣಿಗೆ ನಡೆಯಿತು. ಮೆರವಣಿಗೆಯುದ್ದಕ್ಕೂ ರಸ್ತೆ ಬದಿಯಲ್ಲಿ ನಿಂತಿದ್ದ ಸಾರ್ವಜನಿಕರಿಗೆ ಕೈಮುಗಿದು ಅಭಿನಂದನೆ ಸ್ವೀಕರಿಸಿದ ಅವರು, ಈದ್ಗಾ ಮೈದಾನದ ಬಳಿ ಅಂಜುಮನ್ ಇಸ್ಲಾಂ ಕಮಿಟಿ ಹಾಗೂ ಎಸ್‌ಬಿಐ ಬಳಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ತಾಲೂಕು ಘಟಕದ ಪದಾಧಿಕಾರಿಗಳಿಂದ ಸನ್ಮಾನ ಸ್ವೀಕರಿಸಿದರು. ಕಾಲಕಾಲೇಶ್ವರ ವೃತ್ತದಲ್ಲಿ



ಅಭಿಮಾನಿಗಳು ಬೃಹತ್ ಸೇಬಿನ ಹಾರ ಹಾಕಿ ಗೌರವಿಸಿದರು. ನಂತರ ಕಾಲಕಾಲೇಶ್ವರ ವೃತ್ತದಲ್ಲಿ ಸಾರ್ವಜನಿಕರನ್ನುದ್ದೇಶಿಸಿ ಮಾತನಾಡಿದ ಜಿ.ಎಸ್. ಪಾಟೀಲ, ವಿಧಾನಸಭಾಧ್ಯಕ್ಷರ ಪೀಠ ಪಕ್ಷಾತೀತವಾಗಿದೆ. ಆದರೆ ಕ್ಷೇತ್ರದ ಜನರ ಆಶೋತ್ತರಗಳು, ವೈಯಕ್ತಿಕ ಕೆಲಸಗಳು ಹಾಗೂ ಗ್ರಾಮದ ಅಭಿವೃದ್ಧಿ ವಿಚಾರದಲ್ಲಿ ಯಾರೂ ಹಿಂಜರಿಯಬೇಕಿಲ್ಲ. ತಮಗೆ ದೊರೆತಿರುವ ಉನ್ನತ ಸ್ಥಾನವನ್ನು ಕ್ಷೇತ್ರದ ಸರ್ವಜನಾಂಗದ ಕಲ್ಯಾಣಕ್ಕೆ ಬಳಸುವುದಾಗಿ ಹೇಳಿದರು.

ಕ್ಷೇತ್ರದ ಜನರು ತಮ್ಮ ಮೇಲೆ ಇಟ್ಟಿರುವ ಪ್ರೀತಿ, ವಿಶ್ವಾಸ ಹಾಗೂ ಬೆಂಬಲಕ್ಕಿಂತ ದೊಡ್ಡ ಹುದ್ದೆ ಮತ್ತೊಂದಿಲ್ಲ. ತಮಗೆ ಉನ್ನತ ಸ್ಥಾನ ದೊರೆಯಲಿ ಎಂದು ಕಾಲಕಾಲೇಶ್ವರ ದೇವರು, ಪುಟ್ಟರಾಜರ ಮಠ ಸೇರಿದಂತೆ ವಿವಿಧ ಗ್ರಾಮಗಳ ಗ್ರಾಮ ದೇವತೆಗಳಿಗೆ ಪೂಜೆ, ಪುನಸ್ಕಾರ, ದೀಡ್ ನಮಸ್ಕಾರ ಸಲ್ಲಿಸಿ, ತುಮಕೂರಿನಿಂದ ಬೆಂಗಳೂರಿನವರೆಗೆ ಪಾದಯಾತ್ರೆ ನಡೆಸಿದ್ದನ್ನು ಸ್ಮರಿಸಿದರು. ನನ್ನನ್ನು ರಾಜ್ಯ ವಿಧಾನಸಭೆಯ ಸಭಾಧ್ಯಕ್ಷ ಸ್ಥಾನದಲ್ಲಿ ಕೂರಿಸಿರುವುದಕ್ಕೆ ಕ್ಷೇತ್ರದ ಜನರೇ ಕಾರಣ. ನಿಮ್ಮ ಪ್ರೀತಿ, ವಿಶ್ವಾಸ ಮತ್ತು ಆಶೀರ್ವಾದಕ್ಕೆ ನಾನು ಆಭಾರಿಯಾಗಿದ್ದೇನೆ. ನಿಮ್ಮ ಋಣ ತೀರಿಸುವ ಅವಕಾಶ ನನಗೆ ದೊರೆತಿದೆ ಎಂದು ಭಾವುಕರಾಗಿ ಹೇಳಿದರು.



ತಮ್ಮ ಭಾಷಣದ ಬಳಿಕ ಜಿ.ಎಸ್. ಪಾಟೀಲ ಅವರು ಕಾಲಕಾಲೇಶ್ವರ ವೃತ್ತದಲ್ಲಿನ ಕಾಲಕಾಲೇಶ್ವರ ದೇವರಿಗೆ ಹೂವಿನ ಹಾರ ಹಾಕಿ ನಮಸ್ಕರಿಸಿದರು.


ಮುಖಂಡ ಎಚ್.ಎಸ್. ಸೋಂಪುರ ಮಾತನಾಡಿ, ಜಿ.ಎಸ್. ಪಾಟೀಲ ಅವರನ್ನು ಸಚಿವ ಸ್ಥಾನದಲ್ಲಿ ನೋಡಬೇಕೆಂಬುದು ಅಭಿಮಾನಿಗಳ ಕನಸಾಗಿತ್ತು. ಆದರೆ ಕಾಲಕಾಲೇಶ್ವರನ ಆಶೀರ್ವಾದದಿಂದ ರಾಜ್ಯದ ಉನ್ನತ ಹುದ್ದೆಯಾದ ವಿಧಾನಸಭಾಧ್ಯಕ್ಷ ಸ್ಥಾನ ಅಲಂಕರಿಸಿದ್ದಾರೆ. ಸರಳ ವ್ಯಕ್ತಿತ್ವದ ಜಿ.ಎಸ್. ಪಾಟೀಲ ಅವರು ಸಭಾಧ್ಯಕ್ಷರಾಗಿ ಆಯ್ಕೆಯಾಗಿರುವುದು ರೋಣ ಕ್ಷೇತ್ರದ ಜನತೆಗೆ ಹೆಮ್ಮೆಯ ಸಂಗತಿಯಾಗಿದೆ ಎಂದರು.

ಸ್ವಾಗತ ಕಾರ್ಯಕ್ರಮದಲ್ಲಿ ಶಿವರಾಜ ಘೋರ್ಪಡೆ, ಅಶೋಕ ಬಾಗಮಾರ, ಸಿದ್ದಪ್ಪ ಬಂಡಿ, ಎ.ಡಿ. ಕೋಲಕಾರ, ಐ.ಎಸ್. ಪಾಟೀಲ, ಎಂ.ಎಚ್. ಕೋಲಕಾರ, ಮುರ್ತುಜಾ ಡಾಲಾಯತ್, ಶಶಿಧರ ಹೂಗಾರ, ಶ್ರೀಧರ ಬಿದರಳ್ಳಿ, ರಫೀಕ್ ತೋರಗಲ್, ಶರಣಪ್ಪ ಬೆಟಗೇರಿ, ಮಿಥುನ ಪಾಟೀಲ, ಅಕ್ಷಯ ಪಾಟೀಲ, ಸುಭಾಸ ಮ್ಯಾಗೇರಿ, ರಾಜು ಸಾಂಗ್ಲೀಕರ, ಅಪ್ಪು ಮತ್ತಿಕಟ್ಟಿ, ಅರಿಹಂತ ಬಾಗಮಾರ, ವೆಂಕಟೇಶ ಮುದಗಲ್, ಅಂದಪ್ಪ ಬಿಚ್ಚೂರ, ಶ್ರೀಕಾಂತ ಅವಧೂತ, ಮಾಬುಸಾಬ ಮ್ಯಾಗೇರಿ, ಚಿದಾನಂದ ಪಾಟೀಲ, ಸಂಗಪ್ಪ ತೇಜಿ, ಅರ್ಜುನ ರಾಠೋಡ, ಇಸ್ಮಾಯಿಲ್ ಹೊರಪೇಟಿ, ಮುತ್ತಣ್ಣ ಕೊಪ್ಪಳ, ಮಲ್ಲಿಕಾರ್ಜುನ ಗಾರಗಿ, ಶ್ರೀಧರ ಗಂಜಿಗೌಡರ, ಅಂದಪ್ಪ ರಾಠೋಡ, ಸಿದ್ದಪ್ಪ ಚೋಳಿನ, ಅಲ್ಲಾಭಕ್ಷಿ ನಧಾಪ, ಪರಶುರಾಮ ಕಲಾಲ, ಸಿದ್ದು ಗೊಂಗಡಶೆಟ್ಟಿಮಠ, ಬಾಲಚಂದ್ರ ವಾಲ್ಮೀಕಿ, ಆರ್.ಎಂ. ಜಾಧವ, ಐ.ಎಚ್. ಬಾಗವಾನ, ತುಳಸಿನಾಥ ಮಾಳೊತ್ತರ ಸೇರಿದಂತೆ ಗಜೇಂದ್ರಗಡ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಜನರು ಪಾಲ್ಗೊಂಡಿದ್ದರು. ಮೆರವಣಿಗೆಯ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಸುಗಮ ಸಂಚಾರಕ್ಕೆ ಪೊಲೀಸರು ಮುಂಜಾಗ್ರತಾ ಕ್ರಮ ಕೈಗೊಂಡಿದ್ದರು. ಡಿವೈಎಸ್‌ಪಿ ಪ್ರಭುಗೌಡ ಕೆ., ಸಿಪಿಐ ವಿಜಯಕುಮಾರ, ಪಿಎಸ್‌ಐ ಪ್ರಕಾಶ ಡಿ. ಪೊಲೀಸ್ ಸಿಬ್ಬಂದಿ ಬಂದೋಬಸ್ತ್ ವ್ಯವಸ್ಥೆ ಮಾಡಿದ್ದರು.

> **ನನ್ನ ಪೀಠ ಪಕ್ಷಾತೀತವಾಗಿದೆ. ಆದರೆ ನಿಮ್ಮ ಆಶೋತ್ತರಗಳಿಗೆ, ವೈಯಕ್ತಿಕ ಕೆಲಸ ಕಾರ್ಯಗಳಿಗೆ ಹಾಗೂ ಗ್ರಾಮದ ಅಭಿವೃದ್ಧಿಗೆ ಚಿಂತಿಸಬೇಡಿ. ನೀವು ನನಗೆ ಹೆಚ್ಚಿನ ಶಕ್ತಿಯನ್ನು ನೀಡಿದ್ದೀರಿ. ಕ್ಷೇತ್ರದ ಕೆಲಸಗಳು ಅಲ್ಲಿಯೇ ನಿಂತಿವೆ ಎಂದು ಯಾರೂ ಹಿಂಜರಿಯಬೇಡಿ. ನಿಮ್ಮ ಪ್ರೀತಿ, ವಿಶ್ವಾಸ ಹೀಗೆಯೇ ಇರಲಿ. ಕ್ಷೇತ್ರದ ಸರ್ವಜನಾಂಗದ ಕಲ್ಯಾಣಕ್ಕಾಗಿ ಈ ಪೀಠದಿಂದ ಕೆಲಸ ಮಾಡುವ ಶಕ್ತಿಯನ್ನು ಕಾಲಕಾಲೇಶ್ವರ ನೀಡಲಿ.**
>
> **- ಜಿ.ಎಸ್. ಪಾಟೀಲ,** ನೂತನ ವಿಧಾನಸಭಾಧ್ಯಕ್ಷರು

## ಲೀಗ್ ಹಂತದ ಮೂರು ಪಂದ್ಯ ಗೆದ್ದು ಫೈನಲ್‌ಗೇರಿದ ನೈಟ್ ರೈಡರ್ಸ್; ನಿರ್ಣಾಯಕ ಪಂದ್ಯದಲ್ಲಿ ವಿನ್ನರ್ಸ್ ಮಣಿಸಿ ರೂರಲ್ ಕಿಂಗ್ಸ್ ಪ್ರಶಸ್ತಿ ಸುತ್ತಿಗೆ

# ನೈಟ್ ರೈಡರ್ಸ್-ರೂರಲ್ ಕಿಂಗ್ಸ್ ನಡುವೆ ಇಂದು ಪ್ರಶಸ್ತಿ ಕದನ



**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ವತಿಯಿಂದ ಪತ್ರಿಕಾ ದಿನಾಚರಣೆ ಅಂಗವಾಗಿ ಆಯೋಜಿಸಿರುವ ಗದಗ ಮೀಡಿಯಾ ಕ್ರಿಕೆಟ್ ಲೀಗ್ ಅಂತಿಮ ಘಟ್ಟ ತಲುಪಿದ್ದು, ಆ. 23ರಂದು ನಡೆಯುವ ಫೈನಲ್ ಪಂದ್ಯದಲ್ಲಿ ನೈಟ್ ರೈಡರ್ಸ್ ಹಾಗೂ ರೂರಲ್ ಕಿಂಗ್ಸ್ ತಂಡಗಳು ಪ್ರಶಸ್ತಿಗಾಗಿ ಸೆಣಸಲಿವೆ. ಲೀಗ್ ಹಂತದಲ್ಲಿ ಆಡಿದ ಮೂರು ಪಂದ್ಯಗಳಲ್ಲೂ ಗೆಲುವು ದಾಖಲಿಸಿ ಅಗ್ರಸ್ಥಾನ ಪಡೆದ ನೈಟ್ ರೈಡರ್ಸ್ ತಂಡ ಫೈನಲ್‌ಗೆ ಲಗ್ಗೆ ಇಟ್ಟಿದೆ. ಮತ್ತೊಂದೆಡೆ, ನೈಟ್ ರೈಡರ್ಸ್ ವಿರುದ್ಧ ಸೋತರೂ ವಿನ್ನರ್ಸ್ ಹಾಗೂ ಆರ್‌ಸಿಬಿ ತಂಡಗಳನ್ನು ಮಣಿಸಿದ ರೂರಲ್ ಕಿಂಗ್ಸ್ ನಿರ್ಣಾಯಕ ಹಂತದಲ್ಲಿ ಸ್ಥಾನ ಗಿಟ್ಟಿಸಿಕೊಂಡಿದೆ.

ಇನ್ನು ಲೀಗ್ ಹಂತದ ಮೂರು ಪಂದ್ಯಗಳಲ್ಲೂ ಸೋಲು ಕಂಡ ಆರ್‌ಸಿಬಿ ಹಾಗೂ ಎರಡು ಪಂದ್ಯಗಳಲ್ಲಿ ಸೋಲನುಭವಿಸಿದ ವಿನ್ನರ್ಸ್ ತಂಡಗಳು ಪ್ರಶಸ್ತಿ ರೇಸ್‌ನಿಂದ ಹೊರಬಿದ್ದಿವೆ. ಹೀಗಾಗಿ ಚೊಚ್ಚಲ ಚಾಂಪಿಯನ್ ಪಟ್ಟಕ್ಕಾಗಿ ನೈಟ್ ರೈಡರ್ಸ್ ಹಾಗೂ ರೂರಲ್ ಕಿಂಗ್ಸ್ ನಡುವೆ ತೀವ್ರ ಪೈಪೋಟಿ ನಿರೀಕ್ಷಿಸಲಾಗಿದೆ.

**ಆರ್‌ಸಿಬಿ ವಿರುದ್ಧ ನೈಟ್ ರೈಡರ್ಸ್‌ಗೆ 27 ರನ್‌ಗಳ ಭರ್ಜರಿ ಗೆಲುವು**

ಶನಿವಾರ ನಡೆದ ಲೀಗ್ ಹಂತದ ಆರನೇ ಪಂದ್ಯದಲ್ಲಿ ನೈಟ್ ರೈಡರ್ಸ್ ತಂಡವು ಆರ್‌ಸಿಬಿ ವಿರುದ್ಧ 27 ರನ್‌ಗಳ ಭರ್ಜರಿ ಗೆಲುವು ದಾಖಲಿಸಿತು. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ನೈಟ್ ರೈಡರ್ಸ್ ನಿಗದಿತ 10 ಓವರ್‌ಗಳಲ್ಲಿ 4 ವಿಕೆಟ್ ಕಳೆದುಕೊಂಡು 98 ರನ್ ಗಳಿಸಿತು. ಪ್ರಭುಸ್ವಾಮಿ ಅರವಟಗಿಮಠ 30 ಎಸೆತಗಳಲ್ಲಿ 39 ರನ್ ಗಳಿಸಿ ತಂಡದ ಪರ ಗರಿಷ್ಠ ಸ್ಕೋರರ್ ಎನಿಸಿಕೊಂಡರೆ, ಮಂಜು ಪತ್ತಾರ 18 ಎಸೆತಗಳಲ್ಲಿ 35 ರನ್ ಗಳಿಸಿ ಸ್ಫೋಟಕ ಬ್ಯಾಟಿಂಗ್ ನಡೆಸಿದರು. ಆರ್‌ಸಿಬಿ ಪರ ಮಂಜು ಸಾಳೇರ ಹಾಗೂ ಗೌರೀಶ ತಲಾ ಒಂದು ವಿಕೆಟ್ ಪಡೆದರು. 99 ರನ್‌ಗಳ ಗುರಿ ಬೆನ್ನತ್ತಿದ ಆರ್‌ಸಿಬಿ ತಂಡವು ನಿಗದಿತ 10 ಓವರ್‌ಗಳಲ್ಲಿ 71 ರನ್ ಗಳಿಸಲಷ್ಟೇ ಶಕ್ತವಾಯಿತು. ವಿನಾಯ ಚೌಡಾಪೂರ 34 ಎಸೆತಗಳಲ್ಲಿ 43 ರನ್ ಗಳಿಸಿದರೆ, ಅಜಿತ ಹೊಂಬಾಳಿ 11 ರನ್ ಗಳಿಸಿದರು. ನೈಟ್ ರೈಡರ್ಸ್ ಪರ ಪ್ರಭುಸ್ವಾಮಿ ಅರವಟಗಿಮಠ ಹಾಗೂ ಸಂಗನಗೌಡ ಖಾನಪ್ಪಗೌಡ್ರ ತಲಾ ಒಂದು ವಿಕೆಟ್ ಪಡೆದರು. ಆಲ್‌ರೌಂಡ್ ಪ್ರದರ್ಶನ ನೀಡಿದ ಪ್ರಭುಸ್ವಾಮಿ ಅರವಟಗಿಮಠ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

**ವಿನ್ನರ್ಸ್ ಮಣಿಸಿ ಫೈನಲ್‌ಗೇರಿದ ರೂರಲ್ ಕಿಂಗ್ಸ್**

ಶನಿವಾರ ನಡೆದ ಐದನೇ ಪಂದ್ಯದಲ್ಲಿ ರೂರಲ್ ಕಿಂಗ್ಸ್ ತಂಡವು ವಿನ್ನರ್ಸ್ ವಿರುದ್ಧ 8 ವಿಕೆಟ್‌ಗಳ ಭರ್ಜರಿ ಗೆಲುವು ದಾಖಲಿಸಿ ಫೈನಲ್‌ಗೆ ಅರ್ಹತೆ ಪಡೆಯಿತು.

ಟಾಸ್ ಗೆದ್ದು ಫೀಲ್ಡಿಂಗ್ ಆಯ್ಕೆ ಮಾಡಿಕೊಂಡ ರೂರಲ್ ಕಿಂಗ್ಸ್, ವಿನ್ನರ್ಸ್ ತಂಡವನ್ನು 79 ರನ್‌ಗಳಿಗೆ ಕಟ್ಟಿಹಾಕಿತು. ಅಶೋಕ ಹೂಗಾರ 25, ಈಶ್ವರ ತಿಪ್ಪರಡ್ಡಿ 20 ಹಾಗೂ ಪರಮೇಶ ಲಮಾಣಿ 19 ರನ್ ಗಳಿಸಿದರು. ರೂರಲ್ ಕಿಂಗ್ಸ್ ಪರ ಶಿವಾನಂದ ಹಿರೇಮಠ, ಸಂಜೀವ ಪಾಂಡ್ರೆ, ಪ್ರಕಾಶ ಗುದ್ದಿನ, ನಿಂಗನಗೌಡ ಹನಮಗೌಡ್ರ ಹಾಗೂ ಸೂರಜ್ ಮಯೇಕರ ತಲಾ ಒಂದು ವಿಕೆಟ್ ಪಡೆದರು. 80 ರನ್‌ಗಳ ಗುರಿ ಬೆನ್ನತ್ತಿದ ರೂರಲ್ ಕಿಂಗ್ಸ್ ಕೇವಲ ಎರಡು ವಿಕೆಟ್ ಕಳೆದುಕೊಂಡು ಗೆಲುವಿನ ದಡ ಸೇರಿತು. ನಾಯಕ ನಿಂಗನಗೌಡ 27 ಎಸೆತಗಳಲ್ಲಿ 33 ರನ್ ಗಳಿಸಿದರೆ, ಸಂಜೀವ ಪಾಂಡ್ರೆ 26 ಎಸೆತಗಳಲ್ಲಿ 34 ರನ್ ಗಳಿಸಿ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರು. ವಿನ್ನರ್ಸ್ ತಂಡದ ಪರಮೇಶ ಲಮಾಣಿ 2 ವಿಕೆಟ್ ಪಡೆದರು. ಬ್ಯಾಟಿಂಗ್ ಹಾಗೂ ಬೌಲಿಂಗ್‌ನಲ್ಲಿ ಉತ್ತಮ ಪ್ರದರ್ಶನ ನೀಡಿದ ನಿಂಗನಗೌಡ ಹನಮಗೌಡ್ರ, ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು. ಪಂದ್ಯಶ್ರೇಷ್ಠ ಪ್ರಶಸ್ತಿ ವಿಜೇತರಿಗೆ ಕಾನಿಪ ಜಿಲ್ಲಾ ಘಟಕದ ಅಧ್ಯಕ್ಷ ರಾಜು ಎಂ. ಹೆಬ್ಬಳ್ಳಿ ಟ್ರೋಫಿ ವಿತರಿಸಿದರು.

ಈ ಸಂದರ್ಭದಲ್ಲಿ ಸಂಪಾದಕರ ಸಂಘದ ರಾಜ್ಯ ಉಪಾಧ್ಯಕ್ಷ ಮಂಜುನಾಥ ಅಬ್ಬಿಗೇರಿ, ಕಾನಿಪ ಮಾಜಿ ಅಧ್ಯಕ್ಷರಾದ ಅನಂತ ಕಾರ್ಕಳ, ಎಚ್.ಎಂ. ಶರೀಫನವರ, ವಿವಿಧ ತಂಡಗಳ ಮಾಲೀಕರಾದ ಸುನೀಲ ತೆಂಬದಮನಿ, ಟಿ.ಎನ್. ಭಾಂಡಗೆ, ಜಗದೀಶ ಪೂಜಾರ, ಅಜಿತ ಹೊಂಬಾಳಿ, ಆನಂದ ಸಾಲಿಗ್ರಾಮ, ಆನಂದಯ್ಯ ವಿರಕ್ತಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸಿಸಿ ರಸ್ತೆ ಕಾಮಗಾರಿಗೆ ಶಾಸಕ ಡಾ. ಚಂದ್ರು ಲಮಾಣಿ ಚಾಲನೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲ್ಲೂಕಿನ ಗೊಜನೂರು ಗ್ರಾಮದಲ್ಲಿ ಸುಮಾರು 20 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣವಾಗಲಿರುವ ಸಿಸಿ ರಸ್ತೆ ಕಾಮಗಾರಿಗೆ ಶನಿವಾರ ಶಾಸಕ ಡಾ. ಚಂದ್ರು ಲಮಾಣಿ ಭೂಮಿಪೂಜೆ ನೆರವೇರಿಸಿದರು.

ನಂತರ ಮಾತನಾಡಿದ ಅವರು, ಕಳೆದ ಮೂರು ವರ್ಷಗಳಿಂದ ಕ್ಷೇತ್ರದ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಲಾಗುತ್ತಿದ್ದು, ಕುಡಿಯುವ ನೀರು ಹಾಗೂ ರಸ್ತೆ ನಿರ್ಮಾಣಕ್ಕೆ ಹೆಚ್ಚಿನ ಮಹತ್ವ ನೀಡಲಾಗಿದೆ ಎಂದರು. ತಾಲ್ಲೂಕಿನ ಹಲವು ರಸ್ತೆಗಳು ಬಹುತೇಕ ಹದಗೆಟ್ಟಿದ್ದು, ಅವುಗಳ ಪುನರ್‌ನಿರ್ಮಾಣಕ್ಕೆ ಹೆಚ್ಚಿನ ಅನುದಾನದ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ನೀಡುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿದೆ. ಅನುದಾನ ಬಿಡುಗಡೆಯಾದ ತಕ್ಷಣ ಹಂತ ಹಂತವಾಗಿ ಹದಗೆಟ್ಟ ರಸ್ತೆಗಳನ್ನು ಪುನರ್ ನಿರ್ಮಿಸಲಾಗುವುದು ಎಂದು ಹೇಳಿದರು. ರಸ್ತೆ ನಿರ್ಮಾಣ ಕಾಮಗಾರಿ ಗುಣಮಟ್ಟ ದಿಂದ ನಡೆಯಬೇಕು. ಕಾಮಗಾರಿಗೆ ಸ್ಥಳೀಯ ರು ಸಹಕಾರ ನೀಡುವ ಮೂಲಕ ಉತ್ತಮ ಗುಣಮಟ್ಟದ ರಸ್ತೆ ನಿರ್ಮಾಣವಾಗುವಂತೆ ನೋಡಿಕೊಳ್ಳಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಮನವಿ ಮಾಡಿದರು. ಈ ಸಂದರ್ಭದಲ್ಲಿ ರಮೇಶ ದನದಮನಿ, ತಿಮ್ಮರೆಡ್ಡಿ ಮರಡ್ಡಿ, ಕುಮಾರಸ್ವಾಮಿ ಹಿರೇಮಠ, ಗಂಗಾಧರ ಮೆಣಸಿನಕಾಯಿ, ನಿಂಗನಗೌಡ ಪಾಟೀಲ, ನಿಂಗನಗೌಡ ಕಣವಿ, ಪ್ರವೀಣ ಮಾಡಳ್ಳಿ, ಶೇಕಣ್ಣ ಸೊರಟೂರ, ವೀರಭದ್ರಪ್ಪ ವಡಕಣ್ಣವರ, ಬಸವರಾಜ ಚಕ್ರಸಾಲಿ, ಎಸ್.ಡಿ. ಪಾಟೀಲ, ಎಂ.ಎಫ್. ಪಾಟೀಲ, ಫಕ್ಕೀರೇಶ ದನದಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಗುಣಮಟ್ಟದಲ್ಲಿ ರಾಜಿ ಬೇಡ; ಜನೋಪಯೋಗಿ ಯೋಜನೆಯಾಗಲಿ: ಶಾಸಕ ಎಚ್.ಕೆ. ಪಾಟೀಲ

# 35 ಎಕರೆ ಜಾಗದಲ್ಲಿ ಗದಗದ ಭವ್ಯ ಬ್ಯುಸಿನೆಸ್ ಸೆಂಟರ್



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದ ಹೃದಯ ಭಾಗದಲ್ಲಿರುವ ಸುಮಾರು 35 ಎಕರೆ ಪ್ರದೇಶದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಗದಗ-ಬೆಟಗೇರಿ ಬ್ಯುಸಿನೆಸ್ ಸೆಂಟರ್ ಯೋಜನೆಯ ಕಾಮಗಾರಿಗಳು ಅತ್ಯುತ್ತಮ ಗುಣಮಟ್ಟದಿಂದ ಕೂಡಿರಬೇಕು. ಗುಣಮಟ್ಟದಲ್ಲಿ ಯಾವುದೇ ಕಾರಣಕ್ಕೂ ರಾಜಿಯಾಗಬಾರದು. ಯೋಜನೆಯ ಪ್ರತಿಯೊಂದು ಕಾಮಗಾರಿಯೂ ಜನರಿಗೆ ದೀರ್ಘಕಾಲ ಉಪಯೋಗವಾಗುವಂತಿರಬೇಕು ಎಂದು ಶಾಸಕ ಡಾ. ಎಚ್.ಕೆ. ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಹಾಗೂ ವಸ್ತು ಪ್ರದರ್ಶನ ಪ್ರಾಧಿಕಾರದ ಆಶ್ರಯದಲ್ಲಿ ಶನಿವಾರ ಜಿಲ್ಲಾಡಳಿತ ಭವನದಲ್ಲಿ ಅವರ ಅಧ್ಯಕ್ಷತೆಯಲ್ಲಿ ನಡೆದ ದ್ವಿತೀಯ ಸಮಾಲೋಚನಾ ಸಭೆಯಲ್ಲಿ ಮಾತನಾಡಿದ ಅವರು, ಸಾರ್ವಜನಿಕ-ಖಾಸಗಿ ಸಹಭಾಗಿತ್ವದ (PPP) ಮಾದರಿಯಲ್ಲಿ ಅಭಿವೃದ್ಧಿಪಡಿಸಲು ಉದ್ದೇಶಿಸಿರುವ ಬ್ಯುಸಿನೆಸ್ ಸೆಂಟರ್ ಕುರಿತು ಬಿಡ್‌ದಾರರು, ಉದ್ಯಮಿಗಳು, ವ್ಯಾಪಾರಸ್ಥರು ಹಾಗೂ ಹೂಡಿಕೆದಾರರೊಂದಿಗೆ ಸಮಗ್ರ ಚರ್ಚೆ ನಡೆಸಿದರು.

ಯೋಜನೆಗೆ ರೂಪಿಸಿರುವ ವಿನ್ಯಾಸದಂತೆ ಅತ್ಯಾಕರ್ಷಕ ಹಾಗೂ ಜನೋಪಯೋಗಿ ಕಟ್ಟಡ ನಿರ್ಮಾಣವಾಗಬೇಕು. ಸಾರ್ವಜನಿಕರಿಗೆ ದೀರ್ಘಕಾಲಿಕವಾಗಿ ಸದ್ಬಳಕೆಯಾಗುವ ರೀತಿಯಲ್ಲಿ ಮೂಲಸೌಕರ್ಯ ಕಲ್ಪಿಸಬೇಕು. ಅಧಿಕಾರಿಗಳು ಹೆಚ್ಚಿನ ಮುತುವರ್ಜಿ ವಹಿಸಿ ಯೋಜನೆಯನ್ನು ಪರಿಣಾಮಕಾರಿಯಾಗಿ ಕಾರ್ಯರೂಪಕ್ಕೆ ತರಬೇಕು ಎಂದರು.

ಸಾರ್ವಜನಿಕ-ಖಾಸಗಿ ಸಹಭಾಗಿತ್ವದ ಮೂಲಕ ಯೋಜನೆ ಅನುಷ್ಠಾನಗೊಳ್ಳುತ್ತಿರುವುದರಿಂದ ಬಿಡ್‌ದಾರರು ಕೇವಲ ಲಾಭದ ದೃಷ್ಟಿಯಿಂದ ಮಾತ್ರ ಯೋಜನೆಯಲ್ಲಿ ಭಾಗವಹಿಸದೆ ಸೇವಾ ಮನೋಭಾವದಿಂದ ಪಾಲ್ಗೊಳ್ಳಬೇಕು. ಸರ್ಕಾರ, ಸಾರ್ವಜನಿಕರು ಹಾಗೂ ಖಾಸಗಿ ಸಂಘ-ಸಂಸ್ಥೆಗಳ ಸಹಭಾಗಿತ್ವದಲ್ಲಿ ರೂಪುಗೊಳ್ಳುತ್ತಿರುವ ಈ ಯೋಜನೆಯ ಮೂಲ ಉದ್ದೇಶ ಜನಸಾಮಾನ್ಯರಿಗೆ ಅತ್ಯುತ್ತಮ ಸೌಲಭ್ಯಗಳನ್ನು ಒದಗಿಸುವುದಾಗಿದೆ ಎಂದು ಹೇಳಿದರು.

ಯೋಜನೆ ಕುರಿತು ಈಗಾಗಲೇ ಬೆಂಗಳೂರಿನಲ್ಲಿ ಸಭೆ ನಡೆಸಲಾಗಿದೆ. ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಹಾಗೂ ವಸ್ತು ಪ್ರದರ್ಶನ ಪ್ರಾಧಿಕಾರವು ಸರ್ಕಾರದ ಅಧಿಕೃತ ಸಂಸ್ಥೆಯಾಗಿದ್ದು, ನಗರದ ಹೃದಯ ಭಾಗದಲ್ಲಿರುವ ಸುಮಾರು 35 ಎಕರೆ ಭೂಮಿಯನ್ನು ಪ್ರಾಧಿಕಾರದ ಹೆಸರಿಗೆ ವರ್ಗಾಯಿಸಲಾಗಿದೆ. ಈ ಪ್ರದೇಶದಲ್ಲಿ ಅತ್ಯುತ್ತಮ ವಾಣಿಜ್ಯ ಕೇಂದ್ರ ನಿರ್ಮಿಸುವ ಉದ್ದೇಶ ಹೊಂದಲಾಗಿದೆ ಎಂದು ಡಾ. ಎಚ್.ಕೆ. ಪಾಟೀಲ ವಿವರಿಸಿದರು.

ಹೂಡಿಕೆದಾರರು ಹಾಗೂ ಖಾಸಗಿ ಸಂಸ್ಥೆಗಳನ್ನು ಆಕರ್ಷಿಸುವ ಉದ್ದೇಶದಿಂದ Expression of Interest (EOI) ಆಹ್ವಾನಿಸಲಾಗಿದೆ. ವಾಣಿಜ್ಯ ಚಟುವಟಿಕೆಗಳಿಗೆ ಅತ್ಯಂತ ಸೂಕ್ತ ಸ್ಥಳವಾಗಿರುವ ಈ ಪ್ರದೇಶವನ್ನು ಸಂಪೂರ್ಣವಾಗಿ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

**ಐತಿಹಾಸಿಕ ಗದಗಕ್ಕೆ ಹೊಸ ವಾಣಿಜ್ಯ ಗುರುತು**

ಗದಗವು ಐತಿಹಾಸಿಕ, ಸಾಂಸ್ಕೃತಿಕ, ಶೈಕ್ಷಣಿಕ ಹಾಗೂ ವಾಣಿಜ್ಯ ಕ್ಷೇತ್ರಗಳಲ್ಲಿ ತನ್ನದೇ ಆದ ಮಹತ್ವ ಹೊಂದಿರುವ ನಗರವಾಗಿದೆ. ಹಿಂದಿನಿಂದಲೂ ಹತ್ತಿ ವಹಿವಾಟು ಸೇರಿದಂತೆ ವಿವಿಧ ವ್ಯಾಪಾರ ಚಟುವಟಿಕೆಗಳಿಗೆ ಗದಗ ಪ್ರಮುಖ ಕೇಂದ್ರವಾಗಿತ್ತು. ಸ್ವಾತಂತ್ರ್ಯ ಹೋರಾಟ ಹಾಗೂ ಕರ್ನಾಟಕ ಏಕೀಕರಣ ಚಳವಳಿಯಲ್ಲಿಯೂ ಗದಗ ಪ್ರಮುಖ ಪಾತ್ರ ವಹಿಸಿದೆ. ಲಕ್ಕುಂಡಿ ಸೇರಿದಂತೆ ಹಲವು ಐತಿಹಾಸಿಕ ಹಾಗೂ ಪ್ರವಾಸಿ ತಾಣಗಳನ್ನು ಹೊಂದಿರುವ ಗದಗ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಮತ್ತು ವಾಣಿಜ್ಯ ಕ್ಷೇತ್ರದಲ್ಲಿ ಹೂಡಿಕೆ ಮಾಡಲು ವಿಪುಲ ಅವಕಾಶಗಳಿವೆ. ಈ ಅವಕಾಶಗಳನ್ನು ಹೂಡಿಕೆದಾರರು ಹಾಗೂ ಸ್ಥಳೀಯ ಉದ್ಯಮಿಗಳು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಕರೆ ನೀಡಿದರು.

**ಏಳು ಸೆಕ್ಟರ್‌ಗಳಲ್ಲಿ ಹಂತಹಂತವಾಗಿ ಅಭಿವೃದ್ಧಿ**

ಬ್ಯುಸಿನೆಸ್ ಸೆಂಟರ್ ಯೋಜನೆಯನ್ನು ಒಟ್ಟು ಏಳು ಸೆಕ್ಟರ್‌ಗಳಾಗಿ ವಿಂಗಡಿಸಿ ಹಂತಹಂತವಾಗಿ ಅನುಷ್ಠಾನಗೊಳಿಸುವ ಉದ್ದೇಶ ಹೊಂದಲಾಗಿದೆ. ಯೋಜನೆಯಡಿ ಪಂಚತಾರಾ ಹೋಟೆಲ್, ಆಧುನಿಕ ವಾಣಿಜ್ಯ ಮಳಿಗೆಗಳು, ಸಭಾಂಗಣ, ಟೆಕ್ಸ್‌ಟೈಲ್ ಕೇಂದ್ರ, ಮಕ್ಕಳ ಮನರಂಜನಾ ಪ್ರದೇಶ, ಗಾಂಧಿ ಭವನ, ಆಕರ್ಷಕ ವೃತ್ತಗಳು, ಅಗಲವಾದ ರಸ್ತೆಗಳು ಹಾಗೂ ವ್ಯವಸ್ಥಿತ ಸಾರಿಗೆ ಸಂಪರ್ಕ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಕಲ್ಪಿಸಲು ಯೋಜಿಸಲಾಗಿದೆ.

ನಗರದ ಜನರಿಗೆ ಹಾಗೂ ಹೊರ ಜಿಲ್ಲೆಗಳಿಂದ ಆಗಮಿಸುವ ವ್ಯಾಪಾರಸ್ಥರು, ಹೂಡಿಕೆದಾರರು ಮತ್ತು ಪ್ರವಾಸಿಗರಿಗೆ ಅನುಕೂಲವಾಗುವ ರೀತಿಯಲ್ಲಿ ಸಮಗ್ರ ಮೂಲಸೌಕರ್ಯ ಅಭಿವೃದ್ಧಿಪಡಿಸುವ ಆಶಯ ಹೊಂದಲಾಗಿದೆ.

ವಿವಿಧ ಕ್ಷೇತ್ರಗಳ ವ್ಯಾಪಾರಸ್ಥರಿಗೆ ಅಗತ್ಯವಿರುವ ಸೌಲಭ್ಯಗಳ ಕುರಿತು ಸಲಹೆ ನೀಡಲು ಅವಕಾಶ ಕಲ್ಪಿಸಲಾಗಿದೆ. ವಿಶೇಷವಾಗಿ ಬಂಗಾರ ವ್ಯಾಪಾರಸ್ಥರು ಸೇರಿದಂತೆ ವಿವಿಧ ವ್ಯಾಪಾರ ವಲಯಗಳ ಪ್ರತಿನಿಧಿಗಳು ತಮ್ಮ ಅಗತ್ಯತೆಗಳನ್ನು ಲಿಖಿತವಾಗಿ ಸಲ್ಲಿಸಿದರೆ, ಅವುಗಳನ್ನು ಯೋಜನೆಯಲ್ಲಿ ಅಳವಡಿಸುವ ಸಾಧ್ಯತೆಗಳ ಕುರಿತು ಪರಿಶೀಲಿಸಲಾಗುವುದು ಎಂದರು.

ಹೂಡಿಕೆದಾರರು ಹಾಗೂ ವ್ಯಾಪಾರಸ್ಥರು ಸೆಪ್ಟೆಂಬರ್ 10ರೊಳಗಾಗಿ ತಮ್ಮ ಅಗತ್ಯತೆಗಳು ಮತ್ತು ಸಲಹೆಗಳನ್ನು ಲಿಖಿತವಾಗಿ ಸಲ್ಲಿಸುವ ಮೂಲಕ ಯೋಜನೆಯ ಅನುಷ್ಠಾನದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಡಾ. ಎಚ್.ಕೆ. ಪಾಟೀಲ ಮನವಿ ಮಾಡಿದರು.

**ಗುಣಮಟ್ಟಕ್ಕೆ ಯಾವುದೇ ರಾಜಿ ಇಲ್ಲ: ಜಿಲ್ಲಾಧಿಕಾರಿ**

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಯೋಜನೆಯ ಅನುಷ್ಠಾನದಲ್ಲಿ ಕಾನೂನು ಪಾಲನೆ ಹಾಗೂ ಗುಣಮಟ್ಟಕ್ಕೆ ಯಾವುದೇ ರಾಜಿ ಮಾಡಿಕೊಳ್ಳಲು ಅವಕಾಶವಿಲ್ಲ. ಯೋಜನೆ ಅಂತಿಮವಾಗಿ ರೂಪುಗೊಳ್ಳುವಾಗ ಈಗಾಗಲೇ ನಿರ್ಧರಿಸಿರುವ ಉದ್ದೇಶ ಹಾಗೂ ಗುಣಮಟ್ಟದ ಮಾನದಂಡಗಳಿಗೆ ಅನುಗುಣವಾಗಿರಬೇಕು ಎಂದರು.

ಸ್ಥಳೀಯ ವ್ಯಾಪಾರಸ್ಥರು ಹಾಗೂ ಹೂಡಿಕೆದಾರರು ಈ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು ಯೋಜನೆಯಲ್ಲಿ ಪಾಲ್ಗೊಳ್ಳಬೇಕು. ಸ್ಥಳೀಯ ಉದ್ಯಮಿಗಳು ಅವಕಾಶವನ್ನು ಕೈಬಿಟ್ಟರೆ ಹೊರಗಿನಿಂದ ದೊಡ್ಡ ಪ್ರಮಾಣದ ಹೂಡಿಕೆದಾರರು ಬಂದು ಇಲ್ಲಿ ವ್ಯಾಪಾರ ಚಟುವಟಿಕೆ ನಡೆಸುವ ಸಾಧ್ಯತೆಯಿದೆ.

ಈಗಾಗಲೇ ಕೆಲವು ವ್ಯಾಪಾರ ಚಟುವಟಿಕೆಗಳಲ್ಲಿ ಇಂತಹ ಅನುಭವವಾಗಿರುವುದನ್ನು ಗಮನದಲ್ಲಿಟ್ಟುಕೊಂಡು ಸ್ಥಳೀಯರು ಯೋಜನೆಯಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದರು.

ಗದಗ ನಗರದ ಭವಿಷ್ಯದ ವಾಣಿಜ್ಯ ಬೆಳವಣಿಗೆಗೆ ಈ ಯೋಜನೆ ಮಹತ್ವದ ಹೆಜ್ಜೆಯಾಗಲಿದ್ದು, ಯೋಜನೆ ಪೂರ್ಣಗೊಂಡ ನಂತರ ವ್ಯಾಪಾರ, ಉದ್ಯೋಗ, ಹೂಡಿಕೆ, ಪ್ರವಾಸೋದ್ಯಮ ಹಾಗೂ ನಗರ ಮೂಲಸೌಕರ್ಯ ಅಭಿವೃದ್ಧಿಗೆ ಮತ್ತಷ್ಟು ವೇಗ ದೊರೆಯುವ ನಿರೀಕ್ಷೆಯಿದೆ ಎಂದರು.

ಸಭೆಯಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ಜಿಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಸಿದ್ದು ಪಾಟೀಲ, ಗ್ಯಾರಂಟಿ ಯೋಜನೆಗಳ ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಡಾ. ಎನ್.ಎಚ್. ನಾಗನೂರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಸಹಾಯಕ ಆಯುಕ್ತ ಗಂಗಪ್ಪ ಎಂ., ಬಸನಗೌಡ ಕೊಟೂರ, ರಾಜಾರಾಮ ಪವಾರ್, ಕೊಟ್ರೇಶ್ ವಿಭೂತಿ, ವಸಂತ ಮಡ್ಲೂರ, ಜಿ.ಜೆ. ರುದ್ರಣ್ಣಗೌಡ, ನಿಜಾಮುದ್ದೀನ್, ಜಂಟಿ ನಿರ್ದೇಶಕ (ಕೈಗಾರಿಕೆ) ಪ್ರಕಾಶ್, ಗೋಪಾಲ್ ಅಗರವಾಲ್, ಆಕಾಶ್ ಅಗರವಾಲ್, ನವೀನ್ ಸೇರಿದಂತೆ ಚೇಂಬರ್ ಆಫ್ ಕಾಮರ್ಸ್ ಪದಾಧಿಕಾರಿಗಳು, ವ್ಯಾಪಾರಸ್ಥರು, ಸಣ್ಣ ಕಟ್ಟಡ ಹಾಗೂ ಬಡಾವಣೆ ನಿರ್ಮಾಣದಾರರು, ಹೂಡಿಕೆದಾರರು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಉಪಸ್ಥಿತರಿದ್ದರು.

> **ಗದಗ ನಗರದ ಹೃದಯ ಭಾಗದಲ್ಲಿರುವ 35 ಎಕರೆ ಪ್ರದೇಶವನ್ನು ಕೇವಲ ವಾಣಿಜ್ಯ ಚಟುವಟಿಕೆಗಳಿಗೆ ಸೀಮಿತಗೊಳಿಸದೆ, ನಗರದ ಭವಿಷ್ಯದ ಬೆಳವಣಿಗೆಗೆ ಪೂರಕವಾಗುವ ಸಮಗ್ರ ಕೇಂದ್ರವಾಗಿ ಅಭಿವೃದ್ಧಿಪಡಿಸುವ ಆಶಯವಿದೆ. ಸ್ಥಳೀಯ ವ್ಯಾಪಾರಸ್ಥರು ಹಾಗೂ ಹೂಡಿಕೆದಾರರು ತಮ್ಮ ಅಗತ್ಯತೆ ಮತ್ತು ಸಲಹೆಗಳನ್ನು ನೀಡುವ ಮೂಲಕ ಈ ಮಹತ್ವದ ಯೋಜನೆಯ ಭಾಗವಾಗಬೇಕು.**
>
> **- ಡಾ. ಎಚ್.ಕೆ. ಪಾಟೀಲ,** ಶಾಸಕ

### ಕೆಪಿಎಂಸಿಯಿಂದ ಯೋಜನೆ ಪ್ರಸ್ತುತಿ

**ಸಭೆಯಲ್ಲಿ ಕೆಪಿಎಂಸಿ ಸಂಸ್ಥೆಯ ಪ್ರತಿನಿಧಿಗಳು ಬ್ಯುಸಿನೆಸ್ ಸೆಂಟರ್ ಅಭಿವೃದ್ಧಿಗೆ ಸಂಬಂಧಿಸಿದಂತೆ ಸಿದ್ಧಪಡಿಸಿರುವ ಯೋಜನೆಯ ಸಮಗ್ರ ರೂಪುರೇಷೆ, ಕಟ್ಟಡ ವಿನ್ಯಾಸ, ಮೂಲಸೌಕರ್ಯ, ವಿವಿಧ ಸೆಕ್ಟರ್‌ಗಳ ಅಭಿವೃದ್ಧಿ ಹಾಗೂ ಹಂತಹಂತವಾಗಿ ಕೈಗೊಳ್ಳಬೇಕಾದ ಕಾಮಗಾರಿಗಳ ಕುರಿತು ಪ್ರಾತ್ಯಕ್ಷಿಕೆಯ ಮೂಲಕ ವಿವರಿಸಿದರು.**

### ವಿದ್ಯಾರ್ಥಿ ಜೀವನದಲ್ಲೇ ಆದರ್ಶ ಬದುಕಿನ ಅಡಿಪಾಯ ಹಾಕಿಕೊಳ್ಳಬೇಕು : ಪ್ರೇಮಲತಾ ಹಿರೇಮಠ

# ಸಿಹಿ ಭೋಜನದ ಜೊತೆ ಮಕ್ಕಳಿಗೆ ಮೌಲ್ಯಗಳ ಸಿಂಚನ

**ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿ ಜೀವನವು ಕೇವಲ ಜ್ಞಾನ ಪಡೆಯುವ ಹಂತವಲ್ಲ. ಉತ್ತಮ ಮೌಲ್ಯಗಳನ್ನು ರೂಢಿಸಿಕೊಂಡು, ವ್ಯಕ್ತಿತ್ವವನ್ನು ಬೆಳೆಸಿಕೊಂಡು ಆದರ್ಶ ಬದುಕಿನತ್ತ ಸಾಗುವ ಪ್ರಮುಖ ಘಟ್ಟವಾಗಿದೆ. ವಿದ್ಯಾರ್ಥಿಗಳು ಉತ್ತಮ ಸಂಸ್ಕಾರ, ಶಿಸ್ತು ಹಾಗೂ ಮೌಲ್ಯಗಳನ್ನು ಮೈಗೂಡಿಸಿಕೊಂಡು ಸಮಾಜದಲ್ಲಿ ಮೌಲ್ಯಾಧಾರಿತ ವ್ಯಕ್ತಿಗಳಾಗಿ ರೂಪುಗೊಳ್ಳಬೇಕು ಎಂದು ಪ್ರೊ. ಪ್ರೇಮಲತಾ ಹಿರೇಮಠ ಹೇಳಿದರು.

ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಗಂಡು ಮಕ್ಕಳ ಶಾಲೆ ನಂ. 2ರಲ್ಲಿ ಗದಗ ಜಿಲ್ಲಾ ಶರಣ ಸಂಕುಲದ ಶರಣೆ ಅಕ್ಕಮಹಾದೇವಿಯ ಕದಳಿಶ್ರೀ ಮಹಿಳಾ ವೇದಿಕೆ ವತಿಯಿಂದ ಶ್ರಾವಣ ಮಾಸದ ಅಂಗವಾಗಿ ಆಯೋಜಿಸಿದ್ದ ಅಮೃತ ಭೋಜನಜ್ಞಾನ ಸಿಂಚನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಲ್ಲಿ ಉತ್ತಮ ಮೌಲ್ಯಗಳನ್ನು ಬೆಳೆಸುವಲ್ಲಿ ಪಾಲಕರು, ಶಿಕ್ಷಕರು ಹಾಗೂ ಸಮುದಾಯದ ಪಾತ್ರ ಮಹತ್ವದ್ದಾಗಿದೆ. ಮಕ್ಕಳ ಉಜ್ವಲ ಭವಿಷ್ಯ ಹಾಗೂ ಮೌಲ್ಯಯುತ ಬದುಕಿಗಾಗಿ ಅವರ ಮನಸ್ಸಿನಲ್ಲಿ ಉತ್ತಮ ಮೌಲ್ಯಗಳ ಬೀಜ ಬಿತ್ತುವ ಕೆಲಸ ನಿರಂತರವಾಗಿ ನಡೆಯಬೇಕು ಎಂದರು.

ಮಕ್ಕಳಿಗೆ ಸಿಹಿ ಭೋಜನ ನೀಡುವುದರ ಜೊತೆಗೆ ನೈತಿಕ ಹಾಗೂ ಮಾನವೀಯ ಮೌಲ್ಯಗಳ ಅರಿವು ಮೂಡಿಸುವ



ಕದಳಿಶ್ರೀ ವೇದಿಕೆಯ ಕಾರ್ಯ ಶ್ಲಾಘನೀಯವಾಗಿದೆ. ಇಂತಹ ಕಾರ್ಯಕ್ರಮಗಳು ಮಕ್ಕಳಲ್ಲಿ ಉತ್ತಮ ಸಂಸ್ಕಾರ ಬೆಳೆಸುವ ಜೊತೆಗೆ ಶಿಕ್ಷಣದ ಬಗ್ಗೆ ಆಸಕ್ತಿ ಮೂಡಿಸಲು ಸಹಕಾರಿಯಾಗುತ್ತವೆ ಎಂದರು.

ಅತಿಥಿಯಾಗಿ ಆಗಮಿಸಿದ್ದ ಖ್ವಾಜಾಮೈನುದ್ದೀನ ಜಾನಿಸಾಬ ಹಣಗಿ ಮಾತನಾಡಿ, ಉತ್ತಮ ಮೌಲ್ಯಗಳು ಉತ್ತಮ ವ್ಯಕ್ತಿತ್ವದ ಅಡಿಪಾಯವಾಗಿದ್ದು, ಉತ್ತಮ ವ್ಯಕ್ತಿತ್ವ ಹೊಂದಿದವರಿಂದಲೇ ಉತ್ತಮ ಸಮಾಜ ನಿರ್ಮಾಣ ಸಾಧ್ಯ ಎಂದರು. ಇನ್ನೋರ್ವ ಅತಿಥಿ ರೇಖಾ ರೊಟ್ಟಿ ಮಾತನಾಡಿ, ವಿದ್ಯಾರ್ಥಿಗಳು ದೇಶದ ಭವಿಷ್ಯದ ನಿರ್ಮಾತೃಗಳಾಗಿದ್ದು, ಅವರ ಜೀವನದಲ್ಲಿ ಮೌಲ್ಯಗಳಿಗೆ ಪ್ರಮುಖ ಸ್ಥಾನವಿದೆ. ಉತ್ತಮ ಶಿಕ್ಷಣದ ಜೊತೆಗೆ ಸರಿಯಾದ ಜೀವನ ಕ್ರಮವನ್ನು ಅನುಸರಿಸುವ ಮೂಲಕ ಯಶಸ್ಸಿನತ್ತ ಸಾಗಬೇಕು ಎಂದರು.

ಕದಳಿಶ್ರೀ ವೇದಿಕೆಯ ಸಂಚಾಲಕಿ ಕವಿತಾ ದಂಡಿನ ಪ್ರಾಸ್ತಾವಿಕವಾಗಿ ಮಾತನಾಡಿ, ಪ್ರತಿವರ್ಷ ಶ್ರಾವಣ ಮಾಸದಲ್ಲಿ ಶಾಲಾ-ಕಾಲೇಜುಗಳಲ್ಲಿ ಉತ್ತಮ ಮೌಲ್ಯಗಳ ಕುರಿತು ಜಾಗೃತಿ ಕಾರ್ಯಕ್ರಮ, ಸಿಹಿ ಭೋಜನ ಹಾಗೂ ಕಲಿಕಾ ಸಾಮಗ್ರಿಗಳ ವಿತರಣೆ ಮಾಡಲಾಗುತ್ತಿದೆ. ಕಳೆದ 15 ವರ್ಷಗಳಿಂದ ಈ ಕಾರ್ಯವನ್ನು ನಿರಂತರವಾಗಿ ಮುನ್ನಡೆಸಲಾಗುತ್ತಿದೆ ಎಂದರು.

ಶಾಲೆಯ ಮುಖ್ಯೋಪಾಧ್ಯಾಯಿನಿ ಎಸ್.ಎನ್. ಕಾಮತ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಕ್ಕಳು ಜ್ಞಾನ ಹಾಗೂ ಕೌಶಲ್ಯಗಳ ಜೊತೆಗೆ ಬದುಕನ್ನು ಸುಂದರವಾಗಿ ರೂಪಿಸಿಕೊಂಡು ಯಶಸ್ಸು ಸಾಧಿಸಬೇಕು. ಕದಳಿಶ್ರೀ ವೇದಿಕೆಯ ಇಂತಹ ಕಾರ್ಯಕ್ರಮಗಳು ಮಕ್ಕಳ ಶಿಕ್ಷಣಕ್ಕೆ ಸ್ಫೂರ್ತಿ ತುಂಬುತ್ತಿವೆ ಎಂದರು. ವಿಜಯ ಪತ್ತಾರ ಹಾಗೂ ಲತೇಶ ಹೆಬಸೂರ ಪ್ರಾರ್ಥಿಸಿದರು. ಎಸ್.ಜಿ. ಕಂಠಿ ಸ್ವಾಗತಿಸಿದರು. ವಿ.ಎಂ. ಚರಂತಿಮಠ ನಿರೂಪಿಸಿದರು. ಅನಿಲ ನಡುವಿನಮನಿ ವಂದಿಸಿದರು. ಸವಿತಾ ಹರದಾಳಮಠ, ಶೈನಜ್ ಕಳಸದ, ಲಲಿತಾ ತಳವಾರ, ಶಿಕ್ಷಕರು ಹಾಗೂ ಶಾಲಾ ಮಕ್ಕಳು ಪಾಲ್ಗೊಂಡಿದ್ದರು.

> ವಿದ್ಯಾರ್ಥಿ ಜೀವನವು ಜ್ಞಾನ ಪಡೆಯುವುದರ ಜೊತೆಗೆ ಉತ್ತಮ ಮೌಲ್ಯಗಳು ಹಾಗೂ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳುವ ಪ್ರಮುಖ ಹಂತ. ಮಕ್ಕಳು ಆದರ್ಶ ಬದುಕನ್ನು ರೂಪಿಸಿಕೊಂಡು ಸಮಾಜದಲ್ಲಿ ಮೌಲ್ಯಾಧಾರಿತ ವ್ಯಕ್ತಿಗಳಾಗಿ ಬೆಳೆಯಬೇಕು. ಮಕ್ಕಳಿಗೆ ಸಿಹಿ ಭೋಜನದ ಜೊತೆಗೆ ನೈತಿಕ ಹಾಗೂ ಮಾನವೀಯ ಮೌಲ್ಯಗಳ ಅರಿವು ಮೂಡಿಸುತ್ತಿರುವ ಕದಳಿಶ್ರೀ ವೇದಿಕೆಯ ಕಾರ್ಯ ಅತ್ಯಂತ ಮಹತ್ವದ್ದಾಗಿದೆ.
>
> – **ಪ್ರೊ. ಪ್ರೇಮಲತಾ ಹಿರೇಮಠ**

### ಸೆ. 15ರವರೆಗೆ ಅಭಿಯಾನ; ಮನೆಮನೆಗೆ ತೆರಳಿ ನೋಂದಣಿ, ನವೀಕರಣ ಮತ್ತು ಇ-ಕೈವೈಸಿ

## ಜಾಬ್‌ಕಾರ್ಡ್‌ಗಾಗಿ ಮನೆ ಬಾಗಿಲಿಗೆ ಅಧಿಕಾರಿಗಳು



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಗ್ರಾಮೀಣ ಕುಟುಂಬಗಳಿಗೆ ಸ್ವಗ್ರಾಮದಲ್ಲಿಯೇ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಅಂಡ್ ಅಜೀವಿಕ ಮಿಷನ್ (ಗ್ರಾಮೀಣ) ಯೋಜನೆಯಡಿ ಶಿರಹಟ್ಟಿ ತಾಲೂಕಿನಾದ್ಯಂತ ಆ. 15ರಿಂದ ಸೆ. 15ರವರೆಗೆ ಜಾಬ್‌ಕಾರ್ಡ್ ಮೇಳ ಹಾಗೂ ವಿಶೇಷ ಜಾಗೃತಿ ಅಭಿಯಾನ ನಡೆಯುತ್ತಿದೆ.

ಅಭಿಯಾನದ ಅಂಗವಾಗಿ ಕಡಕೋಳ, ರಣತೂರ ಹಾಗೂ ಮಜ್ಜೂರು ಗ್ರಾಮಗಳಲ್ಲಿ ಜಾಬ್‌ಕಾರ್ಡ್ ಮೇಳ ಆಯೋಜಿಸಿ ಗ್ರಾಮಸ್ಥರಿಗೆ ಯೋಜನೆಯ ಕುರಿತು ಮಾಹಿತಿ ನೀಡಲಾಯಿತು.

ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ಜಾಬ್‌ಕಾರ್ಡ್ ಮೇಳ ನಡೆಸಲಾಗುತ್ತಿದ್ದು, ಗ್ರಾಮೀಣ ಕುಟುಂಬಗಳಿಗೆ ಹೊಸ ಜಾಬ್ ಕಾರ್ಡ್ ಮಾಡಿಸಿಕೊಡುವುದು, ಹಳೆಯ ಜಾಬ್‌ಕಾರ್ಡ್ ನವೀಕರಿಸುವುದು, ಇ-ಕೈವೈಸಿ ಪೂರ್ಣಗೊಳಿಸುವುದು ಹಾಗೂ ಉದ್ಯೋಗದ ಬೇಡಿಕೆ ಸ್ವೀಕರಿಸುವ ಕಾರ್ಯಕ್ಕೆ ಆದ್ಯತೆ ನೀಡಲಾಗುತ್ತಿದೆ. ಮಾಹಿತಿ, ಶಿಕ್ಷಣ ಹಾಗೂ ಸಂವಹನ ಚಟುವಟಿಕೆಗಳಡಿ ನಿಷ್ಕ್ರಿಯ ಜಾಬ್ ಕಾರ್ಡ್ ಹೊಂದಿರುವ ಕುಟುಂಬಗಳನ್ನು ಗುರುತಿಸಿ ಮನೆಮನೆಗೆ ಭೇಟಿ ನೀಡಲಾಗುತ್ತಿದೆ. ಈ ವೇಳೆ ಯೋಜನೆಯಡಿ ಲಭ್ಯವಿರುವ ಅಕುಶಲ ಉದ್ಯೋಗ ಹಾಗೂ ವೈಯಕ್ತಿಕ ಸವಲತ್ತುಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ.

ಕಾರ್ಮಿಕರ ಹಾಜರಾತಿ, ಕಾಮಗಾರಿಗಳ ಪ್ರಗತಿ ಹಾಗೂ ಸಂಬಂಧಿತ ದಾಖಲೆಗಳನ್ನು ಡಿಜಿಟಲ್ ವ್ಯವಸ್ಥೆಯಲ್ಲಿ ನಿರ್ವಹಿಸುವುದಕ್ಕೂ ಒತ್ತು ನೀಡಲಾಗುತ್ತಿದೆ. ಸ್ವಗ್ರಾಮದಲ್ಲಿಯೇ ಉದ್ಯೋಗ ದೊರೆಯುವುದರಿಂದ ಉದ್ಯೋಗ ಅರಸಿ ಗ್ರಾಮೀಣ ಪ್ರದೇಶದಿಂದ ನಗರಗಳಿಗೆ ವಲಸೆ ಹೋಗುವ ಪರಿಸ್ಥಿತಿ ತಡೆಯುವ ಆಶಯವೂ ಯೋಜನೆಯದ್ದಾಗಿದೆ.

ಜಾಬ್‌ಕಾರ್ಡ್, ಯೋಜನೆಯಡಿ ಲಭ್ಯವಿರುವ ಸೌಲಭ್ಯಗಳು ಹಾಗೂ ಉದ್ಯೋಗದ ಬೇಡಿಕೆ ಸಲ್ಲಿಕೆ ಕುರಿತು ಮಾಹಿತಿ ಅಗತ್ಯವಿರುವವರು ತಮ್ಮ ಗ್ರಾಮ ಪಂಚಾಯಿತಿ ಕಾರ್ಯಾಲಯವನ್ನು ಸಂಪರ್ಕಿಸಬೇಕು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ತಾಂತ್ರಿಕ ಸಿಬ್ಬಂದಿ ಸೇರಿದಂತೆ ಗ್ರಾಮ ಪಂಚಾಯಿತಿ ಸಿಬ್ಬಂದಿ ಉಪಸ್ಥಿತರಿದ್ದರು.

> ಅರ್ಹ ಗ್ರಾಮೀಣ ಕುಟುಂಬಗಳಿಗೆ ಸ್ವಗ್ರಾಮದಲ್ಲಿಯೇ ಉದ್ಯೋಗ ಒದಗಿಸುವುದು ನಮ್ಮ ಮುಖ್ಯ ಉದ್ದೇಶ. ಜಾಬ್‌ಕಾರ್ಡ್ ಮೇಳದ ಮೂಲಕ ಹೆಚ್ಚಿನ ಮಾನವ ದಿನಗಳ ಸೃಷ್ಟಿಗೆ ಯೋಜನೆಯನ್ನು ಪರಿಣಾಮ ಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ. ಅರ್ಹ ಫಲಾನುಭವಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು.
>
> – **ಪಂಚಾಯಿತಿ ಅಭಿವೃದ್ಧಿ ಅಧಿಕಾರಿ**

## ಸಂಕ್ಷಿಪ್ತ ಸುದ್ದಿಗಳು

### ಲಿಂಗಾಯತ ಕುಡುಒಕ್ಕಲಿಗರ ಸಂಘದ ವಾರ್ಷಿಕ ಸಭೆ, ಸನ್ಮಾನ ಸಮಾರಂಭ

**ವಿಜಯಸಾಕ್ಷಿ ಸುದ್ದಿ, ಗದಗ**

ಅಖಿಲ ಕರ್ನಾಟಕ ಲಿಂಗಾಯತ ಕುಡುಒಕ್ಕಲಿಗರ ಸಂಘದ ಕೇಂದ್ರ ಕಚೇರಿ ಗದಗ ವತಿಯಿಂದ ತ್ಯಾಗವೀರ ಶಿರಸಂಗಿ ಲಿಂಗರಾಜರ 120ನೇ ಪುಣ್ಯಸ್ಮರಣೋತ್ಸವ ಹಾಗೂ ಸಂಘದ 14ನೇ ವಾರ್ಷಿಕ ಸರ್ವಸಾಧಾರಣ ಸಭೆ ಆ.23ರಂದು ಬೆಳಿಗ್ಗೆ 10.30ಕ್ಕೆ ನಗರದ ಬಿಂಕದಕಟ್ಟಿ ಪ್ರಾಣಿಸಂಗ್ರಹಾಲಯದ ಬಳಿಯ ಕುಡುಒಕ್ಕಲಿಗರ ಭವನದಲ್ಲಿ ನಡೆಯಲಿದೆ.

ಹೊಸಳ್ಳಿ ಸಂಸ್ಥಾನಮಠದ ಪೂಜ್ಯ ಅಭಿನವ ಬೂದೀಶ್ವರ ಮಹಾಸ್ವಾಮಿಗಳು ಸಾನಿಧ್ಯ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಸಮಾಜದ ಹೆಮ್ಮೆಯ ಮಾಜಿ ಸೈನಿಕರು ಹಾಗೂ ವಿವಿಧ ಕ್ಷೇತ್ರಗಳಲ್ಲಿ ವಿಶೇಷ ಸಾಧನೆ ಮಾಡಿದವರನ್ನು ಸನ್ಮಾನಿಸಲಾಗುವುದು. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಅತ್ಯುನ್ನತ ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು. ಇದೇ ಸಂದರ್ಭದಲ್ಲಿ ಲಾಟರಿ ಡ್ರಾ ಕಾರ್ಯಕ್ರಮವೂ ನಡೆಯಲಿದೆ.

ವಿಜಯಪುರದ ಬಿ.ಎಲ್.ಡಿ. ಸಂಸ್ಥೆಯ ಅಧೀಕ್ಷಕ ಎಸ್.ಎ. ಬಿರಾದಾರ (ಕನಾಲಗೌಡ್ರ), ನಿರ್ದೇಶಕ ಸುರೇಶಗೌಡ ಪಾಟೀಲ, ಅಖಿಲ ಕರ್ನಾಟಕ ಕುಡು ಮಹಾಸಭಾ ಬೆಂಗಳೂರು ಗೌರವ ಕಾರ್ಯದರ್ಶಿ ಎ.ಎಸ್. ಪಾಟೀಲ, ದಾವಣಗೆರೆ ಅಬಕಾರಿ ಇಲಾಖೆಯ ಉಪ ಆಯುಕ್ತ ಸಿ.ಎನ್. ಜನಾಯಿ, ಸಂಘದ ಉಪಾಧ್ಯಕ್ಷ ಈರಪ್ಪ ಬಿಸನಳ್ಳಿ, ಸಮಾಜದ ಹಿರಿಯರಾದ ವಿ.ಜಿ. ಕನಾಜ ಹಾಗೂ ಲಾಟರಿ ಯೋಜನೆಯ ಅಧ್ಯಕ್ಷ ವಿ.ಕೆ. ಬಳಗೇರ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಸಂಘದ ರಾಜ್ಯಾಧ್ಯಕ್ಷ ಶಿವಕುಮಾರಗೌಡ ಎಚ್. ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಸಮಾಜದ ಸಾಧಕರನ್ನು ಗೌರವಿಸುವುದು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿದೆ. ಸಮಾಜಬಾಂಧವರು ಸಕಾಲಕ್ಕೆ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸಂಘದ ಪದಾಧಿಕಾರಿಗಳು ಮನವಿ ಮಾಡಿದ್ದಾರೆ.

### ಸಚಿವ ಬಿ.ನಾಗೇಂದ್ರ, ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಪ್ರತಿಭಟನೆ



**ವಿಜಯಸಾಕ್ಷಿ ಸುದ್ದಿ, ಗದಗ**


ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣದ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಸಚಿವ ಬಿ.ನಾಗೇಂದ್ರ, ಅವರ ರಾಜೀನಾಮೆಗೆ ಆಗ್ರಹಿಸಿ ಭಾರತೀಯ ಜನತಾ ಪಕ್ಷದ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಶಿರಹಟ್ಟಿ ಹಾಗೂ ಮುಂಡರಗಿ ಮಂಡಲಗಳ ವತಿಯಿಂದ ಗದಗ ಜಿಲ್ಲಾ ಅಧಿಕಾರಿಗಳ ಕಚೇರಿ ಎದುರು ಬೃಹತ್ ಧರಣಿ ಹಾಗೂ ಪ್ರತಿಭಟನೆ ನಡೆಯಿತು.

ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಸಚಿವರಾಗಿರುವ ಬಿ.ನಾಗೇಂದ್ರ, ಅವರು ವಾಲ್ಮೀಕಿ ಅಭಿವೃದ್ಧಿ ನಿಗಮದ ಭ್ರಷ್ಟಾಚಾರ ಹಗರಣದಲ್ಲಿ ಆರೋಪಿಯಾಗಿದ್ದು, ನೈತಿಕ ಹೊಣೆ ಹೊತ್ತು ಕೂಡಲೇ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಮಂಡಲ ಅಧ್ಯಕ್ಷರಾದ ಸುನೀಲ ಮಹಾಂತಶೆಟ್ಟರ, ಕುಮಾರಸ್ವಾಮಿ ಹಿರೇಮಠ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಪಕ್ಕಿರೇಶ ರಟ್ಟಿಹಳ್ಳಿ, ಲಿಂಗರಾಜ ಪಾಟೀಲ, ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ಗಂಗಾಧರ ಮೆಣಸಿನಕಾಯಿ, ಬಸವರಾಜ ಬಿಳಿಮಗ್ಗದ, ಪ್ರಶಾಂತ್ ಕುಮಾರ್ ಗುಡದಪ್ಪನವರ ಸೇರಿದಂತೆ ಎಂ.ಎಸ್. ಕರೀಗೌಡ್ರ, ಹೆಮಗಿರಿಶ ಹಾವಿನಾಳ, ಅಜ್ಜಪ್ಪ ಲಿಂಬಿಕಾಯಿ, ನಾಗರಾಜ ಲಕ್ಕುಂಡಿ, ಅನಿಲ ಮುಳಗುಂದ, ಮಾಂತೇಶ ಅಡರಕಟ್ಟಿ, ಶರಣಪ್ಪ ಬಾರಕೇರ್, ನಿಂಗಪ್ಪ ಬನ್ನಿ, ಬಸವರಾಜ ಚಕ್ರಸಾಲಿ, ಅಶೋಕ ಶಿರಹಟ್ಟಿ, ಕೊಟ್ರೇಶಪ್ಪ ಅಂಗಡಿ, ರವೀಂದ್ರ ಗೌಡ ಪಾಟೀಲ್, ಸಂಜೀವ್ ದಾಸಾಯಿ, ವಿರೇಶ ಸಾಸಲವಾಡ, ವಿಜಯಕುಮಾರ್ ಕುಂಬಾರ್, ಪ್ರವೀಣ ಬೊಂಬಲೆ, ಶಿವಕುಮಾರ್ ಗೌಡನಾಯ್ಕರ, ಮೈಲಾರಪ್ಪ ಕಲ್ಕೇರಿ, ಬಸವರಾಜ ಚಿಗಣ್ಣರ್, ಶಿವಕುಮಾರ್ ಕುರಿ, ನಾಗರಾಜ ಹೊರ್ಸೂ, ಪವಿತ್ರ ಕಲ್ಲುಕಟಗರ, ನಾಗೇಶ್ ಹುಬ್ಬಳ್ಳಿ, ಪವನ್ ಮೇಟಿ, ಕವಿತಾ ಉಳ್ಳಾಗಡ್ಡಿ, ಜ್ಯೋತಿ ಹಾನಗಲ್, ಪವನ್ ಲ್ಯಾಂಡ್ವೇ, ಪರಶುರಾಮ್ ಕರಡಿ ಕೊಳ್ಳ, ಸಿದ್ದು ದೇಸಾಯಿ, ದೇವಪ್ಪ ಇಟಗಿ, ಶಿವರಾಜ್ ರಾವಣಕಿ, ದ್ಯಾಮಣ್ಣ ತಳವಾರ, ರಾಮಣ್ಣ ಕಂಬಳಿ, ಅಕ್ಬರಸಾಬ್ ಯಾದಗಿರಿ, ಚೆನ್ನವೀರಗೌಡ ತೆಗ್ಗಿನಮನಿ, ವೀರೇಶ ತಂಗೋಡು, ಮಂಜುನಾಥ ಸಂಕಿನದಾರ್ಸ್, ದೇವರಾಜ ಮೇಟಿ, ಡಿ.ವೈ. ಹುನಗುಂದ, ನೀಲಪ್ಪ ಹತ್ತಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಶ್ರಾವಣದ ಸೊಬಗಿನಲ್ಲಿ ಕಂಗೊಳಿಸಿದ ವರಮಹಾಲಕ್ಷ್ಮೀ ಆರಾಧನೆ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**



ಶ್ರಾವಣ ಮಾಸದ ಎರಡನೇ ಶುಕ್ರವಾರದ ಅಂಗವಾಗಿ ನರೇಗಲ್ಲ ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ವರಮಹಾಲಕ್ಷ್ಮೀ ಪೂಜೆ ಭಕ್ತಿಭಾವ ಹಾಗೂ ಸಂಭ್ರಮದಿಂದ ನೆರವೇರಿತು. ಮನೆಮನೆಗಳಲ್ಲಿ ಲಕ್ಷ್ಮೀ ದೇವಿಯ ಆರಾಧನೆ, ಹೂವಿನ ಅಲಂಕಾರ, ದೀಪಗಳ ಬೆಳಕು, ಮಂಗಳಗೀತೆ ಹಾಗೂ ಸಿಹಿ-ಸವಿಯೂಟದ ವಾತಾವರಣ ಕಳೆಗಟ್ಟಿತ್ತು.

ಕುಟುಂಬದ ಸುಖ-ಶಾಂತಿ, ಆರೋಗ್ಯ, ಆಯುಷ್ಯ, ಐಶ್ವರ್ಯ ಹಾಗೂ ಸಮೃದ್ಧಿಗಾಗಿ ಮಹಿಳೆಯರು ವರಮಹಾಲಕ್ಷ್ಮೀ ವ್ರತ ಆಚರಿಸಿದರು. ಪೂಜೆಗೆ ಮುನ್ನವೇ ಹೂವು, ಹಣ್ಣು, ತೆಂಗಿನಕಾಯಿ, ಬಾಳೆದಿಂಡು, ಮಾವಿನ ತೋರಣ ಸೇರಿದಂತೆ ಅಗತ್ಯ ಸಾಮಗ್ರಿಗಳನ್ನು ಸಿದ್ಧಪಡಿಸಿಕೊಂಡಿದ್ದರು.

ಶುಕ್ರವಾರ ಬೆಳಗ್ಗೆಯೇ ಮನೆಗಳನ್ನು ಸ್ವಚ್ಛಗೊಳಿಸಿ, ಬಾಗಿಲಿಗೆ ಮಾವಿನ ತೋರಣ ಹಾಗೂ ಬಾಳೆಕಂಬಗಳನ್ನು ಕಟ್ಟಿ, ರಂಗೋಲಿ ಬಿಡಿಸಿ ಹಬ್ಬದ ವಾತಾವರಣ ನಿರ್ಮಿಸಿದರು. ಕಳಶ ಪ್ರತಿಷ್ಠಾಪಿಸಿ ಅರಿಶಿಣ, ಕುಂಕುಮ ಹಾಗೂ ಹೂವುಗಳಿಂದ ಅಲಂಕರಿಸಿ, ಲಕ್ಷ್ಮೀ ದೇವಿಯ ಮೂರ್ತಿಗೆ ವಿವಿಧ ಆಭರಣ ಮತ್ತು ಹೂವಿನ ಅಲಂಕಾರ ಮಾಡಿದರು.

ಬಾಳೆಕಂಬ, ಹೂವಿನ ಹಾರ, ಬಣ್ಣಬಣ್ಣದ ತೋರಣ ಹಾಗೂ ದೀಪಗಳಿಂದ ಸಿಂಗರಿಸಿದ ಪೂಜಾ ಮಂಟಪಗಳು ಕಣ್ಮನ ಸೆಳೆದವು. ಹಣ್ಣು, ತೆಂಗಿನಕಾಯಿ ಹಾಗೂ ವಿವಿಧ ನೈವೇದ್ಯಗಳನ್ನು ಅರ್ಪಿಸಿ ಧೂಪ-ದೀಪ ಬೆಳಗಿಸಿ ಭಕ್ತಿಯಿಂದ ಪೂಜೆ ಸಲ್ಲಿಸಲಾಯಿತು.

ಗೃಹಿಣಿಯರು ಹೊಸ ಸೀರೆ ಧರಿಸಿ ಸಾಂಪ್ರದಾಯಿಕ ಅಲಂಕಾರದಲ್ಲಿ ಪಾಲ್ಗೊಂಡು ಪೂಜೆ ನೆರವೇರಿಸಿದರು. ಗೋಧಿಹುಗ್ಗಿ, ಕರ್ಜಿಕಾಯಿ, ಕಡುಬು, ಅನ್ನ-ಸಾರು ಸೇರಿದಂತೆ ವಿವಿಧ ಖಾದ್ಯಗಳನ್ನು ತಯಾರಿಸಿ ನೈವೇದ್ಯ ಅರ್ಪಿಸಿ ಪ್ರಸಾದ ವಿತರಿಸಿದರು.

ಸಂಜೆಯಾಗುತ್ತಿದ್ದಂತೆ ಮಹಿಳೆಯರು ಅಕ್ಕಪಕ್ಕದ ಮನೆಗಳಿಗೆ ತೆರಳಿ ಪರಸ್ಪರ ಅರಿಶಿಣ-ಕುಂಕುಮ, ಹೂವು, ತಾಂಬೂಲ ಹಾಗೂ ಸೌಭಾಗ್ಯದ ಸಾಮಗ್ರಿಗಳನ್ನು ನೀಡಿ ಶುಭಾಶಯ ವಿನಿಮಯ ಮಾಡಿಕೊಂಡರು. ಇದರಿಂದ ಮನೆಮನೆಗಳಲ್ಲಿ ಹಬ್ಬದ ಸಂಭ್ರಮ ಮತ್ತಷ್ಟು ಹೆಚ್ಚಾಯಿತು.

ವರಮಹಾಲಕ್ಷ್ಮೀ ಹಬ್ಬವು ಧಾರ್ಮಿಕ ಆಚರಣೆಯ ಜತೆಗೆ ಕುಟುಂಬ ಸದಸ್ಯರನ್ನು ಒಗ್ಗೂಡಿಸುವ ಹಾಗೂ ಮಹಿಳೆಯರ ನಡುವಿನ ಬಾಂಧವ್ಯವನ್ನು ಗಟ್ಟಿಗೊಳಿಸುವ ಸಾಂಸ್ಕೃತಿಕ ಹಬ್ಬವಾಗಿದೆ. ಶ್ರಾವಣದ ಹಸಿರು ಸೊಬಗಿನ ನಡುವೆ ದೀಪದ ಬೆಳಕು, ಹೂವಿನ ಪರಿಮಳ ಹಾಗೂ ಭಕ್ತಿಯ ವಾತಾವರಣ ಎಲ್ಲೆಡೆ ಮನೆಮಾಡಿತ್ತು.

ಕುಟುಂಬದ ಎಲ್ಲ ಸದಸ್ಯರಿಗೆ ಆರೋಗ್ಯ, ಆಯುಷ್ಯ, ಐಶ್ವರ್ಯ ಹಾಗೂ ನೆಮ್ಮದಿ ದೊರೆಯಲಿ, ಎಲ್ಲರ ಇಷ್ಟಾರ್ಥಗಳು ಈಡೇರಲಿ ಎಂದು ಮಹಿಳೆಯರು ಲಕ್ಷ್ಮೀ ದೇವಿಯಲ್ಲಿ ಪ್ರಾರ್ಥಿಸಿದರು.

ಸಂಭ್ರಮದಲ್ಲಿ ಸ್ನೇಹಾ ರಾಠೋಡ್, ಜ್ಯೋತಿ ವಂಕಲಕುಂಟಿ, ವಿಜಯಲಕ್ಷ್ಮಿ ಹಿರೇಮಠ, ಈರಮ್ಮ ಹುಲ್ಲೂರ, ಸವಿತಾ ಬೇವಿನಕಟ್ಟಿ, ಶೋಭಾ, ಐಶ್ವರ್ಯ, ವಿದ್ಯಾ, ಚನ್ನಮ್ಮ, ಲಕ್ಷ್ಮೀ ಕಲ್ಲೂರ, ಗಂಗಮ್ಮ ಕಲ್ಲೂರ, ರಶ್ಮಿ ಕರಮುಡಿ, ಸಾವಿತ್ರಿ ಕಡೆತೋಟದ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

### ಶೇ. 50ಕ್ಕೂ ಅಧಿಕ ನಷ್ಟದ ಪ್ರದೇಶಗಳ ಗುರುತಿಗೆ ಸಮೀಕ್ಷೆ | ಅರ್ಹ ರೈತರಿಗೆ ಶೇ. 25ರಷ್ಟು ಮುಂಗಡ ಪರಿಹಾರಕ್ಕೆ ಕ್ರಮ

## ಬೆಳೆ ಹಾನಿಗೆ ರೈತರ ಕೈಹಿಡಿಯಲು ಜಿಲ್ಲಾಡಳಿತ ಸಜ್ಜು



**ವಿಜಯಸಾಕ್ಷಿ ಸುದ್ದಿ, ಗದಗ**

ಮುಂಗಾರು ಹಂಗಾಮಿನಲ್ಲಿ ಮಳೆಯ ವ್ಯತ್ಯಯ ಹಾಗೂ ಹವಾಮಾನ ವೈಪರೀತ್ಯದಿಂದ ಬೆಳೆ ಹಾನಿಗೊಳಗಾದ ರೈತರಿಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತ ಮಹತ್ವದ ಹೆಜ್ಜೆ ಇಟ್ಟಿದೆ. ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಮಧ್ಯ ಋತು ಸಂಕಷ್ಟ ನಿಯಮ ಜಾರಿಗೊಳಿಸುವ ಕುರಿತು ಪರಿಶೀಲನೆ ನಡೆಸಲಾಗಿದ್ದು, ಬೆಳೆ ನಷ್ಟದ ನಿಖರ ಅಂದಾಜಿಗಾಗಿ ಉಪಗ್ರಹ ದತ್ತಾಂಶ ಹಾಗೂ ಜಂಟಿ ಕ್ಷೇತ್ರ ಸಮೀಕ್ಷೆ ನಡೆಸಲು ನಿರ್ಧರಿಸಲಾಗಿದೆ.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಮುಂಗಾರು ಹಂಗಾಮಿನ ಬೆಳೆಗಳಿಗೆ ಮಧ್ಯ ಋತು ಸಂಕಷ್ಟ ಜಾರಿ ಕುರಿತು ಜಿಲ್ಲಾ ಮಟ್ಟದ ಉನ್ನತ ಮಟ್ಟದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿದರು.

ಪ್ರಸಕ್ತ ಮುಂಗಾರು ಋತುವಿನಲ್ಲಿ ಪ್ರಕೃತಿ ವಿಕೋಪ ಹಾಗೂ ಬರಗಾಲದಂತಹ ಹವಾಮಾನ ಪರಿಸ್ಥಿತಿಯಿಂದ ರೈತರ ಬೆಳೆಗಳಿಗೆ ತೀವ್ರ ಹಾನಿಯಾಗಿರುವ ಹಿನ್ನೆಲೆಯಲ್ಲಿ, ರೈತರಿಗೆ ಶೀಘ್ರ ಆರ್ಥಿಕ ನೆರವು ಕಲ್ಪಿಸುವುದು ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಮಧ್ಯ ಋತು ಸಂಕಷ್ಟ ನಿಯಮದಡಿ ಪರಿಹಾರ ಕಲ್ಪಿಸುವ ಪ್ರಕ್ರಿಯೆಯನ್ನು ತ್ವರಿತಗೊಳಿಸಬೇಕು ಎಂದರು.

ಬೆಳೆಗಳ ಬೆಳವಣಿಗೆ ಹಾಗೂ ತೇವಾಂಶದ ಕೊರತೆಯನ್ನು ನಿಖರವಾಗಿ ವಿಶ್ಲೇಷಿಸಲು ಎನ್‌ಡಿವಿಐ, ಎನ್‌ಡಬ್ಲ್ಯುಐ ಹಾಗೂ ಕೆಎಸ್‌ಎನ್‌ಎಂಡಿಸಿ ಮಳೆ ಆಧಾರಿತ ಉಪಗ್ರಹ ದತ್ತಾಂಶ ಬಳಸಿಕೊಳ್ಳಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಿಮಾ ಕಂಪನಿ, ಕೃಷಿ ಇಲಾಖೆ ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳನ್ನು ಒಳಗೊಂಡ ಜಂಟಿ ತಂಡವು ಬಾಧಿತ ಕೃಷಿ ಕ್ಷೇತ್ರಗಳಿಗೆ ಭೇಟಿ ನೀಡಿ ಪ್ರತ್ಯಕ್ಷ ಪರಿಶೀಲನೆ ನಡೆಸಿ ಶೀಘ್ರ ವರದಿ ಸಲ್ಲಿಸಲಿದೆ. ಬೆಳೆ ಕೊಯ್ಲು ಮುಕ್ತಾಯಗೊಳ್ಳುವ ಮುನ್ನವೇ ಮಧ್ಯ ಋತು ಸಂಕಷ್ಟ ಪ್ರಕ್ರಿಯೆ ಪೂರ್ಣಗೊಳಿಸಿ ರೈತರಿಗೆ ನ್ಯಾಯಯುತ ಪರಿಹಾರ ದೊರೆಯುವಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಮಾತನಾಡಿ, ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಬಿತ್ತನೆಯಾಗಿರುವ ಮೆಕ್ಕೆಜೋಳ, ಸೂರ್ಯಕಾಂತಿ, ಶೇಂಗಾ ಸೇರಿದಂತೆ ವಿವಿಧ ಬೆಳೆಗಳ ಪ್ರಸ್ತುತ ಸ್ಥಿತಿಗತಿಯನ್ನು ವೈಜ್ಞಾನಿಕವಾಗಿ ಮೌಲ್ಯಮಾಪನ ಮಾಡಲಾಗುತ್ತಿದೆ. ಎನ್‌ಡಿವಿಐ ಹಾಗೂ ತೇವಾಂಶ ಸೂಚ್ಯಂಕ ಆಧಾರಿತ ಮಾಹಿತಿಯನ್ನು ಪರಿಶೀಲಿಸಿ, ಮಧ್ಯ ಋತು ಸಂಕಷ್ಟ ಮಾರ್ಗಸೂಚಿಯಂತೆ ಸಕ್ರಿಯಗೊಳಿಸಬಹುದಾದ ಬೆಳೆ ವಿಮಾ ಘಟಕಗಳನ್ನು ಗುರುತಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಕೃಷಿ ಇಲಾಖೆ ಕಂದಾಯ ಹಾಗೂ ವಿಮಾ ಕಂಪನಿಗಳೊಂದಿಗೆ ಸೇರಿ ಬೆಳೆ ಹಾನಿಯ ಪ್ರಮಾಣವನ್ನು ಸಮರ್ಪಕವಾಗಿ ಸಮೀಕ್ಷೆ ನಡೆಸಲಿದೆ. ಅರ್ಹ ರೈತರಿಗೆ ಯೋಜನೆಯ ಸೌಲಭ್ಯ ತಲುಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು.

ಸಭೆಯಲ್ಲಿ ಮುಂಗಾರು ಬೆಳೆಗಳ ಪ್ರಸ್ತುತ ಸ್ಥಿತಿಗತಿ, ಬೆಳೆ ಹಾನಿಯ ಪ್ರಮಾಣ ಹಾಗೂ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ರೈತರಿಗೆ ತಕ್ಷಣದ ಮಧ್ಯಂತರ ಪರಿಹಾರ ಒದಗಿಸುವ ಕುರಿತು ವಿಸ್ತೃತ ಚರ್ಚೆ ನಡೆಯಿತು.

ಸಭೆಯಲ್ಲಿ ತೋಟಗಾರಿಕೆ ಇಲಾಖೆ ಅಧಿಕಾರಿಗಳು, ಜಿಲ್ಲಾ ಮಟ್ಟದ ಕೃಷಿ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು, ಕೆಎಸ್‌ಎನ್‌ಎಂಡಿಸಿ ಪ್ರತಿನಿಧಿಗಳು ಹಾಗೂ ವಿಮಾ ಕಂಪನಿಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

> ಮಳೆ ಅಭಾವ ಅಥವಾ ದೀರ್ಘಕಾಲದ ಒಣಹವೆಯಿಂದ ಶೇ. 50ಕ್ಕಿಂತ ಹೆಚ್ಚು ಬೆಳೆ ನಷ್ಟವಾಗಿರುವ ಸಾಧ್ಯತೆ ಇರುವ ಪ್ರದೇಶಗಳನ್ನು ನಿಖರವಾಗಿ ಗುರುತಿಸಬೇಕು. ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯ ಮಾರ್ಗಸೂಚಿಯಂತೆ ಅರ್ಹ ರೈತರಿಗೆ ಶೇ. 25ರಷ್ಟು ಮುಂಗಡ ಮಧ್ಯಂತರ ಪರಿಹಾರ ತಲುಪಿಸಲು ಕ್ರಮ ಕೈಗೊಳ್ಳಬೇಕು. ಅಧಿಕಾರಿಗಳು ಹಾಗೂ ವಿಮಾ ಸಂಸ್ಥೆಗಳು ತಕ್ಷಣ ಜಂಟಿ ಕ್ಷೇತ್ರ ಪರಿಶೀಲನೆ ನಡೆಸಿ ವರದಿ ಸಲ್ಲಿಸಬೇಕು.
>
> – **ಸಿ.ಎನ್. ಶ್ರೀಧರ್**, ಜಿಲ್ಲಾಧಿಕಾರಿ

> ಕೃಷಿ ಇಲಾಖೆ ಹಾಗೂ ವಿಮಾ ಕಂಪನಿಯ ಪ್ರತಿನಿಧಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಯಾವುದೇ ಅರ್ಹ ರೈತರು ಯೋಜನೆಯ ಸೌಲಭ್ಯದಿಂದ ವಂಚಿತರಾಗದಂತೆ ಎಚ್ಚರಿಕೆ ವಹಿಸಬೇಕು. ನೋಂದಾಯಿತ ಅರ್ಹ ರೈತರಿಗೆ ನಿಯಮಾನುಸಾರ ವಿಮಾ ಸೌಲಭ್ಯ ದೊರಕಿಸಲು ಇಲಾಖೆ ಬದ್ಧವಾಗಿದೆ.
>
> – **ಚೇತನಾ ಪಾಟೀಲ,** ಜಂಟಿ ಕೃಷಿ ನಿರ್ದೇಶಕಿ

### ಗದಗದಲ್ಲಿ ನೂತನ ಗ್ರಾಹಕ ಸೇವಾ ಕೇಂದ್ರ ಆರಂಭ

## ಮನೆ ಬಾಗಿಲಿಗೆ ಅಂಚೆ ಸೇವೆ




**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಕುಮಾರವ್ಯಾಸ ವ್ಯಾಪಾರ ಮಳಿಗೆ ಸಂಕೀರ್ಣದಲ್ಲಿ ಗುರುವಾರ ನೂತನ ಅಂಚೆ ಗ್ರಾಹಕ ಸೇವಾ ಕೇಂದ್ರಕ್ಕೆ ಗದಗ ವಿಭಾಗೀಯ ಅಂಚೆ ಅಧೀಕ್ಷಕ ಎಸ್.ಎಸ್. ಶಿರಹಟ್ಟಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗ್ರಾಹಕರಿಗೆ ತ್ವರಿತ, ವಿಶ್ವಾಸಾರ್ಹ ಹಾಗೂ ಸುಲಭ ಅಂಚೆ ಸೇವೆಗಳನ್ನು ಒದಗಿಸುವ ಉದ್ದೇಶದಿಂದ ನೂತನ ಸೇವಾ ಕೇಂದ್ರ ಆರಂಭಿಸಲಾಗಿದೆ. ಇದರಿಂದ ನಗರದ ಜನರಿಗೆ ಅಗತ್ಯ ಅಂಚೆ ಸೇವೆಗಳು ಇನ್ನಷ್ಟು ವೇಗವಾಗಿ ಹಾಗೂ ಸುಲಭವಾಗಿ ಲಭ್ಯವಾಗಲಿವೆ ಎಂದರು.

ಗ್ರಾಹಕರ ಅನುಕೂಲಕ್ಕಾಗಿ ಗದಗ ನಗರದ ಹೃದಯ ಭಾಗದಲ್ಲಿ ನೂತನ ಅಂಚೆ ಫ್ರಾಂಚೈಸಿ ಹಾಗೂ ಗ್ರಾಹಕ ಸೇವಾ ಕೇಂದ್ರಗಳಿಗೆ ಅವಕಾಶ ಕಲ್ಪಿಸಲಾಗಿದೆ. ಅಂಚೆ ಇಲಾಖೆ ಇಂದು ಕೇವಲ ಪತ್ರಗಳನ್ನು ತಲುಪಿಸುವ ಸಂಸ್ಥೆಯಾಗಿರದೆ, ಜನರ ಅಗತ್ಯಗಳಿಗೆ ಸ್ಪಂದಿಸುವ ಸಮಗ್ರ ಸೇವಾ ಸಂಸ್ಥೆಯಾಗಿ ರೂಪಾಂತರಗೊಂಡಿದೆ ಎಂದು ಎಸ್.ಎಸ್. ಶಿರಹಟ್ಟಿ ಹೇಳಿದರು.

ತಂತ್ರಜ್ಞಾನ ಹಾಗೂ ನೂತನ ಸೇವಾ ಕೇಂದ್ರಗಳ ಮೂಲಕ ಅಂಚೆ ಸೇವೆಗಳು ಜನರ ಮನೆ ಬಾಗಿಲಿಗೆ ಇನ್ನಷ್ಟು ಹತ್ತಿರವಾಗುತ್ತಿವೆ. ನಗರದ ನಾಗರಿಕರು ಈ ಕೇಂದ್ರದ ಸೌಲಭ್ಯವನ್ನು ಹೆಚ್ಚಿನ ಪ್ರಮಾಣದಲ್ಲಿ ಸದುಪಯೋಗಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು. ಪ್ರಧಾನ ಅಂಚೆ ಪಾಲಕ ಲಕ್ಷ್ಮಣ ಅಸುಂಡಿ, ಅಂಚೆ ಸಹಾಯಕರಾದ ಎಂ.ಟಿ. ಕರಿಗಾರ, ಮಧು ಶಿರೂರ, ವೆಂಕಟೇಶ ಆಕಳವಾಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಚಿವ ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಪ್ರತಿಭಟನೆ



**ವಿಜಯಸಾಕ್ಷಿ ಸುದ್ದಿ, ಗದಗ**

ವಾಲ್ಮೀಕಿ ಅಭಿವೃದ್ಧಿ ನಿಗಮದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಸಚಿವ ಬಿ. ನಾಗೇಂದ್ರ, ಅವರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ನರಗುಂದ ವಿಧಾನಸಭಾ ಕ್ಷೇತ್ರದ ವತಿಯಿಂದ ಗದಗ ಜಿಲ್ಲಾಧಿಕಾರಿ ಕಚೇರಿ ಎದುರು ಬೃಹತ್ ಧರಣಿ ಹಾಗೂ ಪ್ರತಿಭಟನೆ ನಡೆಯಿತು.

ನರಗುಂದ, ಹೊಳೆಆಲೂರು ಹಾಗೂ ಲಕ್ಕುಂಡಿ ಮಂಡಲಗಳ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಬಿಜೆಪಿ ಮುಖಂಡರು, ಪ್ರಕರಣಕ್ಕೆ ಸಂಬಂಧಿಸಿದ ಸಚಿವ ಬಿ. ನಾಗೇಂದ್ರ, ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಕ್ಷೇತ್ರದ ಯುವ ಮುಖಂಡ ಉಮೇಶಗೌಡ ಪಾಟೀಲ, ಮಂಡಲ ಅಧ್ಯಕ್ಷರಾದ ನಾಗನಗೌಡ ತಿಮ್ಮನಗೌಡ್ರ, ಸೋಮಶೇಖರಪ್ಪ ಚರೇದ, ಪ್ರಕಾಶ ಅರಹುಣಸಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ಬಿ.ಎಂ. ಕೊರಿಗಣ್ಣವರ, ಸುರೇಶ ಗಾಣಿಗೇರ ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಪಾಲ್ಗೊಂಡಿದ್ದರು.

ಎಂ.ಎಸ್. ಕರೀಗೌಡ್ರ, ವಸಂತ ಮೇಟಿ, ಈಶಪ್ಪ ನಾಯ್ಕರ, ಪ್ರದೀಪ ನವಲಗುಂದ, ರವಿಕಾಂತ ಅಂಗಡಿ, ಮುತ್ತಣ್ಣ ಜಂಗಣ್ಣವರ, ಚಂದ್ರು ದಂಡಿನ, ಅಶೋಕ ಹೆಬ್ಬಳ್ಳಿ, ಮಹೇಶ ಮುಸ್ಕಿನಭಾವಿ, ಅನೀಲ ದರಿಯಣ್ಣವರ, ಪ್ರವೀಣ ಯಲಿಗಾರ, ಸೋಮನಗೌಡ ಹುಡೇದಮನಿ, ಶರಣು ಬರಶೆಟ್ಟಿ, ಶಿವಕುಮಾರ ನೀಲಗುಂದ, ಶಶಿಧರಗೌಡ ಪಾಟೀಲ, ಬಸವರಾಜ ಚಲವಾದಿ, ಸುರೇಶ ಚಲವಾದಿ, ಅನೀಲ ಅಬ್ಬಿಗೇರಿ, ಸಂತೋಷ ಅಕ್ಕಿ, ಪ್ರಶಾಂತ ನಾಯ್ಕರ, ವಾಯ್.ಪಿ. ಅಡ್ನೂರ, ಡಿ.ವಾಯ್. ಹುನುಗುಂದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ಒಳ ಮೀಸಲಾತಿ ಫಲ: ವೈದ್ಯಕೀಯ ಶಿಕ್ಷಣದತ್ತ ವಿದ್ಯಾರ್ಥಿನಿ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಸುಮಾರು 35 ವರ್ಷಗಳ ಒಳ ಮೀಸಲಾತಿ ಹೋರಾಟದ ಫಲವಾಗಿ ತಾಲೂಕಿನ ಮೋರಗೇರಿ ಗ್ರಾಮದ ಮಾದಿಗ ಸಮಾಜದ ವಿದ್ಯಾರ್ಥಿನಿ ಕುಮಾರಿ ದುರುಗಮ್ಮ ಉತ್ತಂಗಿ ಬೆಂಗಳೂರಿನ ಸಪ್ತಗಿರಿ ವೈದ್ಯಕೀಯ ಕಾಲೇಜಿನಲ್ಲಿ ವೈದ್ಯಕೀಯ ಸೀಟು ಪಡೆದಿದ್ದಾರೆ. ಒಳ ಮೀಸಲಾತಿ ಜಾರಿಯಿಂದ ವಿದ್ಯಾರ್ಥಿಗಳಿಗೆ ತಮ್ಮ ವಿದ್ಯಾರ್ಹತೆಗೆ ಅನುಗುಣವಾಗಿ ಉನ್ನತ ಶಿಕ್ಷಣ ಹಾಗೂ ಸರ್ಕಾರಿ ಉದ್ಯೋಗ ಪಡೆಯಲು ಅವಕಾಶ ದೊರೆತಿದೆ ಎಂದು ಮಹಾಸಭಾ ಅಧ್ಯಕ್ಷ ಪೂಜಾರ್ ಲೋಕಪ್ಪ ಮಾದರ ಹೇಳಿದರು. ಪೋಷಕರು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿ, ಅವರನ್ನು ಉನ್ನತ ಶಿಕ್ಷಣದತ್ತ ಕೊಂಡೊಯ್ಯಬೇಕು. ದುರುಗಮ್ಮ ಅವರ ಮುಂದಿನ ವಿದ್ಯಾಭ್ಯಾಸಕ್ಕೆ ಸಮಾಜ ಸದಾ ಬೆಂಬಲವಾಗಿ ನಿಲ್ಲಲಿದೆ ಎಂದು ಅವರು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಗದ್ದಿಕೇರಿ ಎಚ್. ದೊಡ್ಡಬಸಪ್ಪ, ಬೆಣಕಲ್ ಪ್ರಕಾಶ್, ವರಲಹಳ್ಳಿ ಶಿವು, ಮಂಜುನಾಥ ಬ್ಯಾಲಾಳ, ಬುಳ್ಳಪ್ಪ ಉಪ್ಪಾರಗಟ್ಟಿ, ಅರ್ಜುನ್ ಟಿ., ಕಿತ್ತೂರು ಮಲ್ಲಪ್ಪ ಸೇರಿದಂತೆ ಸಮಾಜದ ಮುಖಂಡರು ಹಾಗೂ ಬಾಂಧವರು ಉಪಸ್ಥಿತರಿದ್ದರು.

### ಶ್ರದ್ಧಾ-ಭಕ್ತಿಯಿಂದ ವರಮಹಾಲಕ್ಷ್ಮೀ ವ್ರತಾಚರಣೆ

**ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ**

ಶ್ರಾವಣ ಶುಕ್ರವಾರದ ಅಂಗವಾಗಿ ಸಂಪತ್ತಿನ ಒಡತಿ ವರಮಹಾಲಕ್ಷ್ಮೀ ವ್ರತವನ್ನು ಲಕ್ಮೇಶ್ವರ ಪಟ್ಟಣ ಸೇರಿದಂತೆ ತಾಲೂಕಿನ ಗ್ರಾಮೀಣ ಪ್ರದೇಶಗಳ ಮನೆಗಳಲ್ಲಿ ಮಹಿಳೆಯರು ಶುಕ್ರವಾರ ಸಡಗರ, ಸಂಭ್ರಮ ಹಾಗೂ ಶ್ರದ್ಧಾ-ಭಕ್ತಿಯಿಂದ ಆಚರಿಸಿದರು. ಬೆಳಗ್ಗೆಯೇ ಮನೆಯ ಮುಂದೆ ರಂಗೋಲಿ ಬಿಡಿಸಿ, ತಳಿರು-ತೋರಣ ಕಟ್ಟಿ, ವಿವಿಧ ಅಲಂಕಾರಿಕ ವಸ್ತುಗಳಿಂದ ಮನೆಗಳನ್ನು ಸಿಂಗರಿಸಲಾಗಿತ್ತು. ದೇವರ ಜಗುಲಿ ಹಾಗೂ ಪ್ರಮುಖ ಸ್ಥಳಗಳಲ್ಲಿ ವರಮಹಾಲಕ್ಷ್ಮೀ ಪೂಜೆಗೆ ಮಂಟಪ ಸಿದ್ಧಪಡಿಸಿ, ಹಳದಿ ಹಿಟ್ಟಿನಿಂದ ಮೂಗು, ಕಣ್ಣು, ಕಿವಿಗಳನ್ನು ರೂಪಿಸಿ, ಆಭರಣಗಳಿಂದ ಅಲಂಕರಿಸಿದ ತೆಂಗಿನಕಾಯಿ ಕಳಸದಲ್ಲಿ ಲಕ್ಷ್ಮೀದೇವಿಯನ್ನು ಪ್ರತಿಷ್ಠಾಪಿಸಿ ವಿಶೇಷ ಪೂಜೆ ಹಾಗೂ ಪ್ರಾರ್ಥನೆ ಸಲ್ಲಿಸಲಾಯಿತು. ಶ್ರಾವಣ ಮಾಸದ ಹಬ್ಬಗಳ ಸರಣಿಯಲ್ಲಿ ವರಮಹಾಲಕ್ಷ್ಮೀ ವ್ರತವು ಮಹಿಳೆಯರಿಗೆ ವಿಶೇಷ ಮಹತ್ವ ಹೊಂದಿದೆ. ಕುಟುಂಬದ ಶ್ರೇಯೋಭಿವೃದ್ಧಿಗಾಗಿ ಪಾರ್ವತಿ ದೇವಿಯು ಶಿವನ ಸೂಚನೆಯಂತೆ ಶ್ರಾವಣ ಮಾಸದ ಎರಡನೇ ಶುಕ್ರವಾರ ವ್ರತಾಚರಣೆ ಮಾಡಿದ್ದರಿಂದ ಈ ವ್ರತವನ್ನು ವರಮಹಾಲಕ್ಷ್ಮೀ ವ್ರತವಾಗಿ ಆಚರಿಸಲಾಗುತ್ತದೆ ಎಂಬ ನಂಬಿಕೆ ಇದೆ.

ಪೂಜೆಯ ಅಂಗವಾಗಿ ಮುತ್ತೈದೆಯರನ್ನು ಆಹ್ವಾನಿಸಿ ಹಣ್ಣು, ಹೂವು, ಅರಿಷಿಣ-ಕುಂಕುಮ ನೀಡಿ, ಹಸಿರು ರವಿಕೆ ಹಾಗೂ ಉಡಿ ತುಂಬಲಾಯಿತು. ಬಳಿಕ ಮುತ್ತೈದೆಯರು ಪ್ರಸಾದ ಸ್ವೀಕರಿಸಿ ಕುಟುಂಬದ ಸುಖ, ಶಾಂತಿ ಮತ್ತು ಸಮೃದ್ಧಿಗಾಗಿ ಶುಭ ಹಾರೈಸಿದರು. ಕಳೆದ ಹಲವು ವರ್ಷಗಳಿಂದ ವ್ರತಾಚರಣೆ ಮಾಡುತ್ತಿರುವ ಲಲಿತಾ ಕೆರಿಮನಿ, ಸರಸ್ವತಿ ಹೊನ್ನೆಗೌಡ್ರ, ನಿರ್ಮಲಾದೇವಿ ಪವಾಡದ, ಹೇಮಾ ಬಾಳಿಕಾಯಿ, ಲೀಲಾ ಸಂಶಿ, ಶ್ರುತಿ ಮೆಣಸಿಕಾಯಿ ಸೇರಿದಂತೆ ಹಲವು ಗೃಹಿಣಿಯರು, ವರಮಹಾಲಕ್ಷ್ಮೀ ಪೂಜೆ ಕೇವಲ ಐಶ್ವರ್ಯ ಪ್ರಾಪ್ತಿಗಷ್ಟೇ ಸೀಮಿತವಲ್ಲ. ಕುಟುಂಬ ಹಾಗೂ ಸಮಾಜದ ಶ್ರೇಯೋಭಿವೃದ್ಧಿ, ಆರೋಗ್ಯ, ಸಂಪತ್ತು, ಸಮೃದ್ಧಿ, ಜ್ಞಾನ, ಸಂತಾನ, ಧೈರ್ಯ, ಜಯ ಹಾಗೂ ಮನದಿಷ್ಟಾರ್ಥಗಳ ಈಡೇರಿಕೆ, ಲೋಕಕಲ್ಯಾಣ, ಶಾಂತಿ, ನೆಮ್ಮದಿ ಮತ್ತು ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ ಶ್ರದ್ಧಾ-ಭಕ್ತಿಯಿಂದ ಪ್ರಾರ್ಥಿಸುವುದೇ ಈ ಹಬ್ಬದ ವಿಶೇಷತೆ ಎಂದು ತಿಳಿಸಿದರು.

### ಆ. 23ರೊಳಗೆ ಮರುಸಮೀಕ್ಷೆ; ಆಕ್ಷೇಪಣೆಗೆ ಆ. 28 ಕೊನೆಯ ದಿನ

### ರೈತರೇ ಗಮನಿಸಿ: ಪಹಣಿಯಲ್ಲಿ ಬೆಳೆ ವಿವರ ಸರಿಯಾಗಿರಲಿ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಬೆಳೆ ಸಮೀಕ್ಷೆಯ ಮಾಹಿತಿ ಹಾಗೂ ಬೆಳೆ ವಿಮೆ ಅರ್ಜಿಯ ವಿವರಗಳಲ್ಲಿ ವ್ಯತ್ಯಾಸ ಕಂಡುಬಂದರೆ ವಿಮೆ ಪರಿಹಾರ ತಿರಸ್ಕೃತಗೊಳ್ಳುವ ಸಾಧ್ಯತೆ ಇರುವುದರಿಂದ ರೈತರು ತಮ್ಮ ಪಹಣಿ ಪತ್ರಿಕೆಯಲ್ಲಿ ಬೆಳೆದಿರುವ ನಿಖರ ಬೆಳೆ ವಿವರಗಳನ್ನು ದಾಖಲಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ತಿಳಿಸಿದ್ದಾರೆ. ಆ. 23ರೊಳಗೆ ಬೆಳೆಗಳ ಮರುಸಮೀಕ್ಷೆ ನಡೆಯಲಿದ್ದು, ಆ. 25ರೊಳಗೆ ಮೇಲ್ವಿಚಾರಕರ ಪರಿಶೀಲನೆ ಪೂರ್ಣಗೊಳ್ಳಲಿದೆ. ಸಮೀಕ್ಷೆ ನಡೆಯದ ತಾಕುಗಳಿಗೆ ಮಾತ್ರ ಆ. 28ರೊಳಗೆ ರೈತರು ಆಕ್ಷೇಪಣೆ ಸಲ್ಲಿಸಬಹುದು. ಆ. 31ರೊಳಗೆ ಆಕ್ಷೇಪಣೆಗಳನ್ನು ಇತ್ಯರ್ಥಪಡಿಸಲಾಗುವುದು.

ನಂತರ ಯಾವುದೇ ವಿಸ್ತರಣೆಗೆ ಅವಕಾಶವಿರುವುದಿಲ್ಲ ಎಂದು ತಿಳಿಸಿದ್ದಾರೆ. ರೈತರು ತಮ್ಮ ಸರ್ವೇ ಸಂಖ್ಯೆಗೆ ಬೆಳೆ ಸಮೀಕ್ಷೆ ದಾಖಲಾಗಿದೆಯೇ ಎಂಬುದನ್ನು ಬೆಳೆ ದರ್ಶಕ ಆ್ಯಪ್‌ನಲ್ಲಿ ಪರಿಶೀಲಿಸಬಹುದು. ಬೆಳೆ ವಿವರ ಅಥವಾ ಛಾಯಾಚಿತ್ರಗಳಲ್ಲಿ ತಪ್ಪಿದ್ದರೆ ಅದೇ ಆ್ಯಪ್ ಮೂಲಕ ಆಕ್ಷೇಪಣೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕಂದಾಯ, ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳನ್ನು ಸಂಪರ್ಕಿಸಬಹುದು. ಸರ್ಕಾರದ ವಿವಿಧ ಸವಲತ್ತು, ಬರ ಪರಿಹಾರ ಹಾಗೂ ಸಹಾಯಧನ ಪಡೆಯಲು ಪ್ರತಿಯೊಂದು ಸರ್ವೇ ಸಂಖ್ಯೆಯನ್ನು ಎಫ್‌ಐಡಿ ಮೂಲಕ ನೋಂದಾಯಿಸಿ ರೈತರ ಗುರುತಿನ ಸಂಖ್ಯೆ ಪಡೆಯುವುದು ಕಡ್ಡಾಯವಾಗಿದೆ. ಆಧಾರ್ ಪ್ರತಿ, ಸಂಪರ್ಕಿತ ಮೊಬೈಲ್ ಸಂಖ್ಯೆ, ಪಹಣಿ, ಬ್ಯಾಂಕ್ ಪಾಸ್‌ಬುಕ್, ಭಾವಚಿತ್ರ ಸೇರಿದಂತೆ ಅಗತ್ಯ ದಾಖಲೆಗಳೊಂದಿಗೆ ಗ್ರಾಮ ಒನ್, ಕರ್ನಾಟಕ ಒನ್, ಸಾಮಾನ್ಯ ಸೇವಾ ಕೇಂದ್ರ, ರೈತ ಸಂಪರ್ಕ ಕೇಂದ್ರ ಅಥವಾ ಸಂಬಂಧಿಸಿದ ಇಲಾಖೆಗಳ ಕಚೇರಿಗಳಲ್ಲಿ ನೋಂದಣಿ ಮಾಡಿಕೊಳ್ಳಬಹುದು ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

### ಪಿಎಂ ಕಿಸಾನ್ ಇ-ಕೆವೈಸಿ ಬಾಕಿ ಇದೆಯೇ? ರೈತರೇ, ಈಗಲೇ ಪೂರ್ಣಗೊಳಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ನೋಂದಾಯಿತ ಫಲಾನುಭವಿ ರೈತರು ಬಾಕಿ ಇರುವ ಇ-ಕೆವೈಸಿ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸುವಂತೆ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ತಿಳಿಸಿದ್ದಾರೆ.

ಆಧಾರ್‌ಗೆ ಜೋಡಣೆಯಾಗಿರುವ ಮೊಬೈಲ್ ಸಂಖ್ಯೆ ಅಥವಾ ಮುಖ ಗುರುತಿಸುವ ಸೌಲಭ್ಯದ ಮೂಲಕ ಇ-ಕೆವೈಸಿ ಪೂರ್ಣಗೊಳಿಸಬಹುದು. ರೈತರು ಪಿಎಂ ಕಿಸಾನ್‌ನ ಅಧಿಕೃತ ಜಾಲತಾಣ ಅಥವಾ ಅಧಿಕೃತ ಮೊಬೈಲ್ ಆ್ಯಪ್ ಮೂಲಕವೇ ಪ್ರಕ್ರಿಯೆ ಕೈಗೊಳ್ಳಬೇಕು.

ಪಿಎಂ ಕಿಸಾನ್ ಇ-ಕೆವೈಸಿ ಹೆಸರಿನಲ್ಲಿ ನಕಲಿ ಎಪಿಕೆ ಕಡತಗಳು ಹಾಗೂ ಅನುಮಾನಾಸ್ಪದ ಕೊಂಡಿಗಳ ಮೂಲಕ ವಂಚಿಸುವ ಸಾಧ್ಯತೆ ಇರುವುದರಿಂದ ರೈತರು ಎಚ್ಚರಿಕೆ ವಹಿಸಬೇಕು. ಅಪರಿಚಿತ ಕಡತಗಳನ್ನು ಅಳವಡಿಸಿಕೊಳ್ಳಬಾರದು.

ಒಟಿಪಿ ಹಾಗೂ ವೈಯಕ್ತಿಕ ಮಾಹಿತಿಯನ್ನು ಯಾರೊಂದಿಗೂ ಹಂಚಿಕೊಳ್ಳಬಾರದು. ಬಯೋಮೆಟ್ರಿಕ್ ಆಧಾರಿತ ಇ-ಕೆವೈಸಿಗಾಗಿ ರೈತರು ಸಮೀಪದ ಸಾಮಾನ್ಯ ಸೇವಾ ಕೇಂದ್ರ, ಗ್ರಾಮ ಒನ್ ಅಥವಾ ಕರ್ನಾಟಕ ಒನ್ ಕೇಂದ್ರಗಳನ್ನು ಸಂಪರ್ಕಿಸಬಹುದು ಎಂದು ಚೇತನಾ ಪಾಟೀಲ ತಿಳಿಸಿದ್ದಾರೆ.

## ಗಾಂಧಿ, ತಿಲಕ, ನೆಹರು ಭೇಟಿ; ಮೈಲಾರ ಮಹಾದೇವರ ಹೋರಾಟ ಬ್ರಿಟಿಷರ ನಿದ್ದೆಗೆಡಿಸಿತ್ತು

# ಸ್ವಾತಂತ್ರ್ಯ ಹೋರಾಟಕ್ಕೆ ಗದಗ ಜಿಲ್ಲೆಯ ಕೊಡುಗೆ ಅಪಾರ




**ವಿಜಯಸಾಕ್ಷಿ ಸುದ್ದಿ, ಗದಗ**

ಸ್ವಾತಂತ್ರ್ಯ ಚಳವಳಿಯ ಸಂದರ್ಭದಲ್ಲಿ ಗದಗ ಪ್ರಮುಖ ಕೇಂದ್ರವಾಗಿ ರೂಪುಗೊಂಡಿತ್ತು. ಮಹಾತ್ಮ ಗಾಂಧೀಜಿ, ಲೋಕಮಾನ್ಯ ತಿಲಕರು ಹಾಗೂ ಜವಾಹರಲಾಲ್ ನೆಹರು ಸೇರಿದಂತೆ ಹಲವು ರಾಷ್ಟ್ರೀಯ ನಾಯಕರು ಗದಗಕ್ಕೆ ಭೇಟಿ ನೀಡುವ ಮೂಲಕ ಸ್ವಾತಂತ್ರ್ಯದ ಕಿಚ್ಚನ್ನು ಮತ್ತಷ್ಟು ಹೆಚ್ಚಿಸಿದ್ದರು. ಜಿಲ್ಲೆಯ ಸಾಮಾನ್ಯ ಜನರೂ ಚಳವಳಿಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು ತಮ್ಮದೇ ಆದ ಕೊಡುಗೆ ನೀಡಿರುವುದು ಮಹತ್ವದ ಸಂಗತಿ ಎಂದು ಸಾಮಾಜಿಕ ಕಾರ್ಯಕರ್ತೆ ರಾಜೇಶ್ವರಿ ಬಡ್ನಿ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಆಯೋಜಿಸಿದ್ದ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ತ್ಯಾಗ ಹಾಗೂ ಬಲಿದಾನಗಳ ಹಿನ್ನೆಲೆಯಲ್ಲಿ ದೊರೆತ ಸ್ವಾತಂತ್ರ್ಯವನ್ನು ಸದುಪಯೋಗಪಡಿಸಿಕೊಂಡು ದೇಶದ ಏಳ್ಗೆಗೆ ಪ್ರತಿಯೊಬ್ಬರೂ ಶ್ರಮಿಸಬೇಕು ಎಂದರು.

ಮಾಜಿ ಸಚಿವ ಎಸ್.ಎಸ್. ಪಾಟೀಲ ಮಾತನಾಡಿ, ಸ್ವಾತಂತ್ರ್ಯ ಚಳವಳಿಗೆ ರೋಣ ಭಾಗದ ಜನರು ಹೆಚ್ಚಿನ ಕೊಡುಗೆ ನೀಡಿದ್ದಾರೆ. ಪ್ರಬಲ ಮಾಧ್ಯಮಗಳಿಲ್ಲದ ಆ ಕಾಲದಲ್ಲಿ ಗಾಂಧೀಜಿಯವರ ಒಂದು ಕರೆ ದೇಶದ ಜನರನ್ನು ಜಾಗೃತಗೊಳಿಸುವ ಶಕ್ತಿ ಹೊಂದಿತ್ತು. ಸ್ವಾತಂತ್ರ್ಯ ಚಳವಳಿ, ಕರ್ನಾಟಕ ಏಕೀಕರಣ ಚಳವಳಿ ಹಾಗೂ ಹೈದರಾಬಾದ್ ವಿಮೋಚನಾ ಚಳವಳಿಯ ಮಹತ್ವ, ಸಂಕಷ್ಟ ಮತ್ತು ನೋವುಗಳನ್ನು ಇಂದಿನ ಪೀಳಿಗೆಗೆ ತಿಳಿಸುವ ಕಾರ್ಯವಾಗಬೇಕು ಎಂದರು.

ಮುಖ್ಯ ಅತಿಥಿ ರುದ್ರಣ್ಣ ಗುಳಗುಳಿ ಮಾತನಾಡಿ, ಸಮಾಜದ ಎಲ್ಲ ವರ್ಗಗಳ ಜನರು ಒಗ್ಗಟ್ಟಾಗಿ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಿದ್ದರು. ಮೈಲಾರ ಮಹಾದೇವರ ಅಪ್ರತಿಮ ಹೋರಾಟಗಳು ಬ್ರಿಟಿಷರ ನಿದ್ದೆಗೆಡಿಸಿದ್ದವು. ಇಂತಹ ಹೋರಾಟಗಾರರ ತ್ಯಾಗ, ಬಲಿದಾನ ಹಾಗೂ ಹೋರಾಟದ ಕಥನಗಳು ಮುಂದಿನ ಪೀಳಿಗೆಗೆ ತಲುಪಬೇಕು ಎಂದರು.

ಬಸವರಾಜ ಬಿಂಗಿ ಮಾತನಾಡಿ, ಇಂದಿನ ಯುವಜನಾಂಗದಲ್ಲಿ ದೇಶಾಭಿಮಾನದ ಭಾವನೆ ಕ್ಷೀಣಿಸುತ್ತಿರುವುದು ಆತಂಕಕಾರಿ ಬೆಳವಣಿಗೆ. ಈ ಹಿನ್ನೆಲೆಯಲ್ಲಿ ಸ್ವಾತಂತ್ರ್ಯ ಹೋರಾಟದ ಇತಿಹಾಸ ಹಾಗೂ ಹೋರಾಟಗಾರರ ತ್ಯಾಗದ ಕಥನಗಳನ್ನು ವಿದ್ಯಾರ್ಥಿಗಳಿಗೆ ತಿಳಿಸುವುದು ಇಂದಿನ ಅಗತ್ಯವಾಗಿದೆ ಎಂದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡಿ, ಸ್ವಾತಂತ್ರ್ಯ ಚಳವಳಿಯಲ್ಲಿ ಸಾಮಾನ್ಯ ಜನರು ಹಾಗೂ ಮಹಿಳೆಯರು ತಮ್ಮದೇ ಆದ ಮಹತ್ವದ ಕೊಡುಗೆ ನೀಡಿದ್ದಾರೆ.

ಹೋರಾಟಗಾರರಿಗೆ ಅನ್ನ, ಆಶ್ರಯ ನೀಡುವ ಮೂಲಕ ದೇಶಪ್ರೇಮ ಮೆರೆದಿದ್ದಾರೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನಪರ ಚಳವಳಿಗಳು ನಿರಂತರವಾಗಿ ರಬೇಕು. ಕಾಲಕ್ಕೆ ತಕ್ಕಂತೆ ಸಮಾಜದಲ್ಲಿ ಉಂಟಾಗುವ ಅಸಮಾನತೆಗಳನ್ನು ಪ್ರಶ್ನಿಸುವ ಮನೋಭಾವವನ್ನು ಯುವಕರು ಬೆಳೆಸಿಕೊಳ್ಳಬೇಕು. ಚಲನಶೀಲ ಸಮಾಜಕ್ಕೆ ಇದು ಅತ್ಯಂತ ಅಗತ್ಯವಾಗಿದೆ ಎಂದರು.

ಷಣ್ಮುಖಪ್ಪ ಬಡ್ನಿ ವೇದಿಕೆಯಲ್ಲಿ ಉಪಸ್ಥಿತರಿದ್ದರು. ರಾಹುಲ ಗಿಡ್ನಂದಿ ನಿರೂಪಿಸಿದರು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಸತೀಶಕುಮಾರ ಚನ್ನಪ್ಪಗೌಡರ ವಂದಿಸಿದರು. ಕಾರ್ಯಕ್ರಮದಲ್ಲಿ ಸುಧಾ ಬಳ್ಳಿ, ರತ್ನಾ ಪುರಂತರ, ಪ್ರೇಮಾ ಬಡ್ನಿ, ಶೈಲಜಾ ಗಿಡ್ನಂದಿ, ಮಲ್ಲಿಕಾರ್ಜುನ ನಿಂಗೋಜಿ, ಗಂಗಾಧರ ಹಕಾರಿ, ಎಚ್.ಎನ್. ಕಾಳೆ, ಬಿ.ಬಿ. ಹೊಳಗುಂದಿ, ಶರಣಪ್ಪ ಹೊಸಂಗಡಿ, ರವಿ ದೇವರಡ್ಡಿ, ಸಾಕ್ಷಿ ದೇವರಡ್ಡಿ, ಕೆ.ಎಸ್. ಗುಗ್ಗರಿ, ಎಂ.ಎಫ್. ಡೋಣಿ, ಪ್ರ.ತೋ. ನಾರಾಯಣಪೂರ, ಪ್ರವೀಣಕುಮಾರ ಬಾವಿ, ಅಶೋಕ ಹಾದಿ, ಎಸ್.ಡಿ. ಗಾಂಜಿ, ಮುಕ್ತಾ ಉಡುಪಿ, ಡಾ. ಜಿ.ಬಿ. ಪಾಟೀಲ, ಎಸ್.ಎಲ್. ಕುಲಕರ್ಣಿ, ಕೆ.ಜೆ. ಮುಲ್ಲಾ, ಚಂದ್ರಕಲಾ ಇಟಗಿಮಠ, ಪುಷ್ಪಾ ನಿಡಗುಂದಿ, ಜೆ.ಎ. ಪಾಟೀಲ, ಅನ್ನದಾನಿ ಹಿರೇಮಠ, ಮಂಜುಳಾ ವೆಂಕಟೇಶಯ್ಯ, ಯು. ಎಸ್. ಕಣವಿ, ರಾಜೇಂದ್ರ ಗಡಾದ, ರೇವಯ್ಯ ಹಿರೇಮಠ, ವಿ.ಎಸ್. ದಲಾಲಿ, ರವೀಂದ್ರ ಜೋಶಿ, ಎಸ್.ಯು. ಸಜ್ಜನಶೆಟ್ಟರ, ಸಿ.ಎಂ. ಮಾರನಬಸರಿ, ಷಡಕ್ಷರಿ ಮೆಣಸಿನಕಾಯಿ, ರಾಮಕೃಷ್ಣ ಪವಾರ, ಪರಶುರಾಮ ಖಟವಟೆ, ವೈ.ಎಸ್. ಪಾಟೀಲ, ಮಹದೇವ ಕುಲಕರ್ಣಿ, ಕಿರಣ ಗುಗ್ಗರಿ, ಶಿವಶಂಕರ ಗದ್ದಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಸ್ವಾತಂತ್ರ್ಯ ಚಳವಳಿಯಲ್ಲಿ ಸಾಮಾನ್ಯ ಜನರು ಹಾಗೂ ಮಹಿಳೆಯರು ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಅನ್ನ, ಆಶ್ರಯ ನೀಡುವ ಮೂಲಕ ದೇಶಪ್ರೇಮ ಮೆರೆದಿದ್ದಾರೆ. ಇಂದಿನ ಯುವಕರು ಸಮಾಜದಲ್ಲಿನ ಅಸಮಾನತೆಗಳನ್ನು ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಚಲನಶೀಲ ಸಮಾಜಕ್ಕೆ ಇಂತಹ ಮನೋಭಾವ ಅತ್ಯಂತ ಅಗತ್ಯ.
>
> **- ವಿವೇಕಾನಂದಗೌಡ ಪಾಟೀಲ,** ಅಧ್ಯಕ್ಷರು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತುರು

## ಖಯುಮ ನವಲೂರ ಪ್ರಥಮ, ಬಾಬು ಛಲವಾದಿ ದ್ವಿತೀಯ, ರೇಷ್ಮಾ ಹಡಪದ ತೃತೀಯ

# ಯೋಗ ಡಿಪ್ಲೊಮಾ ಫಲಿತಾಂಶ ಪ್ರಕಟ







**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡದ ಸಂಯೋಜನೆಯಲ್ಲಿ ಎಸ್.ವೈ.ಬಿ.ಎಂ.ಎಸ್. ಯೋಗ ಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯದಲ್ಲಿ ಕಳೆದ ಮಾರ್ಚ್-ಏಪ್ರಿಲ್‌ನಲ್ಲಿ ನಡೆದ ಸ್ನಾತಕೋತ್ತರ ಯೋಗ ಡಿಪ್ಲೊಮಾ ಅಧ್ಯಯನ (ಪಿ.ಜಿ. ಡಿಪ್ಲೊಮಾ ಇನ್ ಯೋಗ ಸ್ಟಡೀಸ್) 202526ನೇ ಸಾಲಿನ ಮೊದಲ ಸೆಮಿಸ್ಟರ್ ಪರೀಕ್ಷೆಯ ಫಲಿತಾಂಶ ಪ್ರಕಟಗೊಂಡಿದೆ.

ಪರೀಕ್ಷೆ ಬರೆದ ಬಸವ ಯೋಗ ಮಹಾವಿದ್ಯಾಲಯದ ಎಲ್ಲ ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಶೇ.100ರಷ್ಟು ಫಲಿತಾಂಶ ದಾಖಲಿಸಿದ್ದಾರೆ. ವಿದ್ಯಾರ್ಥಿಗಳ ಉತ್ತಮ ಸಾಧನೆಗೆ ಮಹಾವಿದ್ಯಾಲಯದ ಆಡಳಿತ ಮಂಡಳಿ ಹಾಗೂ ಬೋಧಕ ಸಿಬ್ಬಂದಿ ಹರ್ಷ ವ್ಯಕ್ತಪಡಿಸಿದ್ದಾರೆ.

ಪರೀಕ್ಷೆಯಲ್ಲಿ ಖಯುಮ ನವಲೂರ ಹೆಚ್ಚಿನ ಅಂಕ ಗಳಿಸಿ ಪ್ರಥಮ ಸ್ಥಾನ ಪಡೆದರೆ, ಬಾಬು ಛಲವಾದಿ ದ್ವಿತೀಯ ಹಾಗೂ ರೇಷ್ಮಾ ಹಡಪದ ತೃತೀಯ ಸ್ಥಾನ ಪಡೆದು ಮಹಾವಿದ್ಯಾಲಯದ ಕೀರ್ತಿ ಹೆಚ್ಚಿಸಿದ್ದಾರೆ.

> ಎಲ್ಲ ವಿದ್ಯಾರ್ಥಿಗಳು ಉತ್ತೀರ್ಣರಾಗಿ ಉತ್ತಮ ಫಲಿತಾಂಶ ನೀಡಿರುವುದು ಮಹಾವಿದ್ಯಾಲಯಕ್ಕೆ ಹೆಮ್ಮೆಯ ಸಂಗತಿ. ಯೋಗ ಶಿಕ್ಷಣದ ಮೂಲಕ ವಿದ್ಯಾರ್ಥಿಗಳು ಶಿಸ್ತು, ಆರೋಗ್ಯ ಹಾಗೂ ಉತ್ತಮ ಜೀವನಮೌಲ್ಯಗಳನ್ನು ರೂಢಿಸಿಕೊಂಡು ಸಮಾಜಕ್ಕೆ ಕೊಡುಗೆ ನೀಡಲಿ.
>
> **- ಕೆ.ಎಸ್. ಪ್ಲೇದ,** ಪ್ರಾಚಾರ್ಯರು, ಬಸವ ಯೋಗ ಮಹಾವಿದ್ಯಾಲಯ, ಗದಗ

ಸಾಧನೆ ಮಾಡಿದ ವಿದ್ಯಾರ್ಥಿಗಳು ಹಾಗೂ ಉತ್ತೀರ್ಣರಾದ ಎಲ್ಲ ವಿದ್ಯಾರ್ಥಿಗಳು ಮತ್ತು ಬೋಧಕ-ಸಿಬ್ಬಂದಿಗೆ ಬಸವ ಯೋಗ ಮಹಾವಿದ್ಯಾಲಯದ ಮಹಾಪೋಷಕರಾದ ಪೂಜ್ಯ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಚೇರಮನ್ ಪ್ರೊ. ಎಸ್.ವಿ. ಸಂಕನೂರ, ಆಡಳಿತಾಧಿಕಾರಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟಿ, ಪ್ರಾಚಾರ್ಯ ಕೆ.ಎಸ್. ಪ್ಲೇದ ಹಾಗೂ ಸಂಸ್ಥೆಯ ಅಭಿಮಾನಿ ಯೋಗ ಬಂಧುಗಳು ಅಭಿನಂದನೆ ಸಲ್ಲಿಸಿ ಶುಭ ಹಾರೈಸಿದ್ದಾರೆ.

# 31ಕ್ಕೆ ವೀರಭದ್ರೇಶ್ವರ ಜಾತ್ರೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗದ ಬಸವೇಶ್ವರ ನಗರ (ಶಹಪೂರಪೇಟೆ)ದ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಶ್ರೀ ವೀರಭದ್ರೇಶ್ವರ ಸ್ವಾಮಿಯ 74ನೇ ಹಾಗೂ ಶ್ರೀ ಭದ್ರಕಾಳಿದೇವಿ ಸಮೇತ 3ನೇ ವರ್ಷದ ಜಾತ್ರಾ ಮಹೋತ್ಸವ ಆ. 31ರಂದು ಸೋಮವಾರ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ನಡೆಯಲಿದೆ.

ಜಾತ್ರಾ ಮಹೋತ್ಸವದ ಅಂಗವಾಗಿ ಆ. 25ರಂದು ಮಂಗಳವಾರ ಸಂಜೆ 7.30ಕ್ಕೆ ಶ್ರೀ ವೀರಭದ್ರೇಶ್ವರ ಮೂರ್ತಿಗೆ ಫಲಪುಷ್ಪ ಅಲಂಕಾರ ಹಾಗೂ ಪಾಲಕಿ ಉತ್ಸವ ನಡೆಯಲಿದೆ.

ಆ. 27ರಂದು ಗುರುವಾರ ಮಧ್ಯಾಹ್ನ 12.45ಕ್ಕೆ ಶ್ರೀ ವೀರಭದ್ರೇಶ್ವರಭದ್ರಕಾಳಿ ಸಮೇತ ಕಲ್ಯಾಣ ಮಹೋತ್ಸವ ಜರುಗಲಿದ್ದು, ಸಂಜೆ ಕಳಸಾರೋಹಣ, ಗ್ರಾಮದೇವತೆಗಳಿಗೆ ಉಡಿ ತುಂಬುವ ಕಾರ್ಯಕ್ರಮ ಹಾಗೂ ದೀಪಸ್ತಂಭಗಳಿಗೆ ದೀಪೋತ್ಸವ ನಡೆಯಲಿದೆ.

ಆ. 29ರಂದು ಶನಿವಾರ ಬೆಳಗ್ಗೆ 10ಕ್ಕೆ ವೀರಭದ್ರೇಶ್ವರ ಕಲ್ಯಾಣ ಮಂಟಪದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿದೆ.

ಆ. 31ರಂದು ಜಾತ್ರೆಯ ಪ್ರಮುಖ ಆಕರ್ಷಣೆಯಾಗಿ ಬೆಳಗ್ಗೆ ರುದ್ರಾಭಿಷೇಕ ಹಾಗೂ ಸಂಜೆ 6.15ಕ್ಕೆ ಮಹಾರಥೋತ್ಸವ ಜರುಗಲಿದೆ.

ಸೆ. 1ರಂದು ಮಂಗಳವಾರ ಬೆಳಗ್ಗೆ 11ಕ್ಕೆ ಅಗ್ನಿ ಪ್ರವೇಶ ಹಾಗೂ ಸಂಜೆ 6.15ಕ್ಕೆ ಲಘುರಥೋತ್ಸವ ನಡೆಯಲಿದೆ. ಸೆ. 4ರಂದು ಶುಕ್ರವಾರ ಮಧ್ಯಾಹ್ನ 1ಕ್ಕೆ ಮಹಾಪ್ರಸಾದ ವಿತರಣೆ ಹಾಗೂ ಸೆ. 8ರಂದು ಸಂಜೆ 7.30ಕ್ಕೆ ದೀಪಾಲಂಕಾರದೊಂದಿಗೆ ಪಾಲಕಿ ಉತ್ಸವ ನಡೆಯಲಿದೆ.

ದೇವಸ್ಥಾನದ ಮುಂಭಾಗದ ಆವರಣದಲ್ಲಿ ಸುಮಾರು 2 ಕೋಟಿ ರೂ. ವೆಚ್ಚದಲ್ಲಿ ಶಿಲಾ ಮಂಟಪ ನಿರ್ಮಾಣ ಕಾಮಗಾರಿ ಶೀಘ್ರದಲ್ಲೇ ಆರಂಭಿಸಲಾಗುವುದು. ಈ ಧಾರ್ಮಿಕ ಹಾಗೂ ಮಹತ್ವದ ಕಾರ್ಯಕ್ಕೆ ಭಕ್ತರು ಮತ್ತು ದಾನಿಗಳು ಕೈಜೋಡಿಸಬೇಕೆಂದು ದೇವಸ್ಥಾನ ಸಮಿತಿ ಮನವಿ ಮಾಡಿದೆ. ಬಸವೇಶ್ವರ ನಗರದ ವೀರಭದ್ರೇಶ್ವರ ದೇವಸ್ಥಾನ ಟ್ರಸ್ಟ್ ಕಮಿಟಿ, ವೀರಭದ್ರೇಶ್ವರ ಜಾತ್ರಾ ಸಮಿತಿ, ಶಂಕರಲಿಂಗ ದೇವಸ್ಥಾನ ಟ್ರಸ್ಟ್ ಕಮಿಟಿ ಹಾಗೂ ವರದಾನೇಶ್ವರಿ ಮಹಿಳಾ ಮಂಡಳದ ಎಲ್ಲ ಪದಾಧಿಕಾರಿಗಳು ಜಾತ್ರಾ ಮಹೋತ್ಸವಕ್ಕೆ ಸರ್ವ ಭಕ್ತಾಧಿಗಳನ್ನು ಆತ್ಮೀಯವಾಗಿ ಆಹ್ವಾನಿಸಿದ್ದಾರೆ.

ಜಾತ್ರೆಯನ್ನು ಯಶಸ್ವಿಗೊಳಿಸಲು ಯುವಕ ಹಾಗೂ ಮಹಿಳಾ ಮಂಡಳದ ಪದಾಧಿಕಾರಿಗಳು ಸಹಕರಿಸಬೇಕು ಎಂದು ಟ್ರಸ್ಟ್ ಸಮಿತಿ ಮನವಿ ಮಾಡಿದೆ.

### ನೂತನ ಪದಾಧಿಕಾರಿಗಳ ಆಯ್ಕೆ

ಜಾತ್ರಾ ಮಹೋತ್ಸವದ ಯಶಸ್ವಿ ನಿರ್ವಹಣೆಗಾಗಿ ಬಸವೇಶ್ವರ ನಗರದ ಹಿರಿಯರು ಹಾಗೂ ಟ್ರಸ್ಟ್ ಸಮಿತಿಯವರು ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಿದ್ದಾರೆ. ಅಧ್ಯಕ್ಷರಾಗಿ ರಾಚೋಟಿ ಕಾಡಪ್ಪನವರ, ಉಪಾಧ್ಯಕ್ಷರಾಗಿ ರಾಜು ತಡಸದ, ಕಾರ್ಯದರ್ಶಿಯಾಗಿ ನಾಗರಾಜ ಹಳ್ಳಿಕೇರಿ ಹಾಗೂ ಖಜಾಂಚಿಯಾಗಿ ವಿಶ್ವನಾಥ ಕೆರಕಣ್ಣವರ ಆಯ್ಕೆಯಾಗಿದ್ದಾರೆ.

# ಪ್ರಕಲ್ಪ ಶಾಲೆಯಲ್ಲಿ ರಾಖಿ ತಯಾರಿಕೆ ಸ್ಪರ್ಧೆ



**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಕಲ್ಪ ಶಿಕ್ಷಣ ಸಂಸ್ಥೆ(ರಿ)ಯ ಪ್ರಾಥಮಿಕ ಹಾಗೂ ಹಿರಿಯ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ ಹಾಗೂ ಸಹೋದರ-ಸಹೋದರಿಯರ ಬಾಂಧವ್ಯದ ಮಹತ್ವವನ್ನು ಬೆಳೆಸುವ ಉದ್ದೇಶದಿಂದ ರಾಖಿ ತಯಾರಿಕೆ ಸ್ಪರ್ಧೆ ಆಯೋಜಿಸಲಾಗಿತ್ತು.

ಶಾಲೆಯ 3ರಿಂದ 8ನೇ ತರಗತಿಯ ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಉತ್ಸಾಹದಿಂದ ಭಾಗವಹಿಸಿ ವಿವಿಧ ವಿನ್ಯಾಸಗಳ ರಾಖಿಗಳನ್ನು ತಯಾರಿಸಿದರು. ರಾಖಿ ಕೇವಲ ಕೈಗೆ ಕಟ್ಟುವ ದಾರವಲ್ಲ, ಅದು ಪರಸ್ಪರ ಪ್ರೀತಿ, ರಕ್ಷಣೆ, ಗೌರವ ಹಾಗೂ ವಿಶ್ವಾಸದ ಸಂಕೇತ ಎಂಬ ಸಂದೇಶವನ್ನು ವಿದ್ಯಾರ್ಥಿಗಳಿಗೆ ನೀಡಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಕಲ್ಪ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಎಸ್.ವಿ. ಹುಬ್ಬಳ್ಳಿ ವಹಿಸಿದ್ದರು. ಮಾರ್ಗದರ್ಶಕಿ ಎಸ್.ಎನ್. ಹುಬ್ಬಳ್ಳಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದರು. ಶಿಕ್ಷಕಿ ಪುಷ್ಪಾ ಪಿ. ಮೇಗೇರಿ ಕಾರ್ಯಕ್ರಮ ನಿರೂಪಿಸಿದರು. ಶಿಕ್ಷಕಿ ಶೋಭಾ ತದೇವಾಡಿ ಕಾರ್ಯಕ್ರಮದ ಮೇಲ್ವಿಚಾರಣೆ ವಹಿಸಿದ್ದರು.

ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಬೆಳಹೋಡ ಸರ್ಕಾರಿ ಶಾಲೆಯಲ್ಲಿ ಮಕ್ಕಳ ಕಲಿಕಾ ಸಂಭ್ರಮ

# ಸರ್ಕಾರಿ ಶಾಲೆಗಳಲ್ಲಿ ಗುಣಾತ್ಮಕ ಶಿಕ್ಷಣಕ್ಕೆ ಒತ್ತು



**ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರಿ ಶಾಲೆಗಳಲ್ಲಿ ಗುಣಾತ್ಮಕ ಶಿಕ್ಷಣಕ್ಕೆ ಒತ್ತು ನೀಡುತ್ತಿರುವುದರಿಂದ ಪ್ರತಿಭಾನ್ವಿತ ವಿದ್ಯಾರ್ಥಿಗಳು ಹೊರಹೊಮ್ಮುತ್ತಿರುವುದು ಶೈಕ್ಷಣಿಕ ಪ್ರಗತಿಯ ಸಂಕೇತವಾಗಿದೆ ಎಂದು ಗದಗ-ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಡಾ.ಪ್ರದೀಪ ಉಗಲಾಟ ಹೇಳಿದರು.

ತಾಲೂಕಿನ ಬೆಳಹೋಡ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿವಿಧ ಕಲಿಕಾ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಿ ಅಭಿನಂದಿಸಿ ಅವರು ಮಾತನಾಡಿದರು.

ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡುತ್ತಿರುವುದರ ಪರಿಣಾಮ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡುತ್ತಿದ್ದಾರೆ. ಇತ್ತೀಚಿನ ವಾರ್ಷಿಕ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ಪಡೆದಿರುವುದು ಇದಕ್ಕೆ ಸಾಕ್ಷಿಯಾಗಿದೆ. ಮಕ್ಕಳ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಕಾರ್ಯ ನಿರಂತರವಾಗಿ ನಡೆಯಬೇಕು ಎಂದು ಡಾ.ಪ್ರದೀಪ ಉಗಲಾಟ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲೆಯ ಮುಖ್ಯ ಶಿಕ್ಷಕ ಕೆ.ಎಸ್. ದಿಂಡಿ ಮಾತನಾಡಿ, ಸರ್ಕಾರಿ ಶಾಲಾ ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ ಸರ್ಕಾರ ಹಲವು ಯೋಜನೆಗಳನ್ನು ರೂಪಿಸಿ ವಿವಿಧ ಸೌಲಭ್ಯಗಳನ್ನು ಒದಗಿಸುತ್ತಿದೆ. ವಿದ್ಯಾರ್ಥಿಗಳು ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಶೈಕ್ಷಣಿಕವಾಗಿ ಮುನ್ನಡೆಯಬೇಕು ಎಂದರು.

ಡಿಡಿಪಿಐ ಹಾಗೂ ಬಿಇಒ ಅವರ ಮಾರ್ಗದರ್ಶನದಲ್ಲಿ ಶಾಲೆಯಲ್ಲಿ ಗುಣಾತ್ಮಕ ಶಿಕ್ಷಣ ನೀಡಲಾಗುತ್ತಿದೆ. ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಸಮುದಾಯ ಹಾಗೂ ಸಂಘ-ಸಂಸ್ಥೆಗಳ ಸಹಭಾಗಿತ್ವವೂ ಅತ್ಯಂತ ಮುಖ್ಯವಾಗಿದೆ. ರೋಟರಿ ಕ್ಲಬ್ ಪದಾಧಿಕಾರಿಗಳು ಶಾಲೆಗೆ ಆಗಮಿಸಿ ಸಸಿ ನೆಡುವುದರ ಜೊತೆಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಿರುವುದು ಅಭಿನಂದನೀಯ ಎಂದರು.

ಸಚೇತನ ಕಾರ್ಯಕ್ರಮದಲ್ಲಿ ಉತ್ತಮ ಪ್ರದರ್ಶನ ನೀಡಿದ ಹಾಗೂ ವಿವಿಧ ಎಫ್‌ಎಲ್‌ಎನ್ ಕಲಿಕಾ ಸ್ಪರ್ಧೆಗಳಲ್ಲಿ ಮೊದಲ ಮೂರು ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹದಾಯಕವಾಗಿ ನೋಟ್‌ಬುಕ್ ಹಾಗೂ ಪೆನ್ಸಿಲ್‌ಗಳನ್ನು ವಿತರಿಸಿ ಕಲಿಕೆಗೆ ಉತ್ತೇಜನ ನೀಡಲಾಯಿತು.

ಕನ್ನಡ ಶಬ್ದಗಳನ್ನು ಬಿಡಿಸುವ ಸ್ಪರ್ಧೆಯಲ್ಲಿ ರೋಹಿತ ಹುಲಕೋಟಿ, ಕಿರಣ ಶಿಶುವಿನಹಳ್ಳಿ ಹಾಗೂ ಸ್ಫೂರ್ತಿ ಪಕ್ಕೀರಗೌಡ್ರ ವಿಜೇತರಾದರು. ಮೂಲಕ್ರಿಯೆಗಳ ಲೆಕ್ಕ ಬಿಡಿಸುವ ಸ್ಪರ್ಧೆಯಲ್ಲಿ ನಿವೇದಿತಾ ನರಗುಂದ, ಸ್ನೇಹಾ ನೀರಲಗಿ ಹಾಗೂ ಸಾನ್ವಿ ಮಡಿವಾಳರ ಸ್ಥಾನ ಪಡೆದರು.

ಮಗ್ಗಿ ಹೇಳುವ ಸ್ಪರ್ಧೆಯಲ್ಲಿ ಶಾಂಭವಿ ಹುಲಕೋಟಿ, ತನ್ವೀರ್ ನದಾಫ್ ಹಾಗೂ ರೋಹಿತ ಭರಮನಗೌಡ್ರ, ವಿಜೇತರಾದರು. ನಾಲ್ಕನೇ ತರಗತಿಯ ಕನ್ನಡ ಉಕ್ತಲೇಖನ ಸ್ಪರ್ಧೆಯಲ್ಲಿ ವೇದಾ ದೊಡ್ಡಗೌಡ್ರ, ಸಾನ್ವಿ ಚಲವಾದಿ ಹಾಗೂ ಕೀರ್ತಿ ಉಪ್ಪಾರ ಉತ್ತಮ ಸಾಧನೆ ಮಾಡಿದರು.

ಐದನೇ ತರಗತಿಯ ಉಕ್ತಲೇಖನ ಸ್ಪರ್ಧೆಯಲ್ಲಿ ಅನುಪಮ ಹುಲಕೋಟಿ, ದೇವೇಂದ್ರಗೌಡ ಮುದಿಗೌಡ್ರ ಹಾಗೂ ತೇಜಸ್ವಿನಿ ಚಲವಾದಿ ವಿಜೇತರಾದರು. ಮೂಲಕ್ರಿಯೆಗಳ ಲೆಕ್ಕ ಬಿಡಿಸುವ ಸ್ಪರ್ಧೆಯಲ್ಲಿ ಸಾಬಣ್ಣಸಾಬ ಹೊಂಬಳ, ಪಲ್ಲವಿ ಪಕ್ಕಿರಗೌಡ್ರ ಹಾಗೂ ಪಲ್ಲವಿ ಹುಲಕೋಟಿ ಸಾಧನೆ ಮಾಡಿದರು. ಚಿತ್ರಕಲಾ ಸ್ಪರ್ಧೆಯಲ್ಲಿ ನೀಲಾ ಲಿಂಗನಾಯ್ಕರ, ಬಸಮ್ಮ ಕತ್ತಿ ಹಾಗೂ ಅನಿಸಾ ನದಾಫ್ ಸ್ಥಾನ ಪಡೆದರು. ಸಚೇತನ ಕಾರ್ಯಕ್ರಮದಲ್ಲಿ ಉತ್ತಮ ಪ್ರದರ್ಶನ ನೀಡಿದ ನೀಲಾ ಲಿಂಗನಾಯ್ಕರ ಸೇರಿದಂತೆ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲಾಯಿತು.

ವೇದಿಕೆಯಲ್ಲಿ ರೋಟರಿ ಕ್ಲಬ್ ಉಪಾಧ್ಯಕ್ಷ ಸುರೇಶ ಕುಂಬಾರ, ಕಾರ್ಯದರ್ಶಿ ಅಕ್ಷಯ್ ಶೆಟ್ಟಿ, ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಪತ್ತೇಸಾಬ ದೊಡ್ಡಮನಿ, ಸದಸ್ಯ ಪರಸಪ್ಪ ಹುಲಕೋಟಿ ಉಪಸ್ಥಿತರಿದ್ದರು.

ಶಾಲೆಯ ಶಿಕ್ಷಕರಾದ ಬಿ.ಎಂ. ಸೈಯದ್, ಮಂಜುನಾಥ ಜಕ್ಕಲಿ, ರುಕ್ಮಿಣಿ ಗುಳಗಂದಿ, ಸುಜಾತಾ ಧೋಳ, ಸುಮಾ ತಿಪ್ಪರಡ್ಡಿ, ಲಲಿತಾ ಚನ್ನಪ್ಪಗೌಡರ ಸೇರಿದಂತೆ ಶಿಕ್ಷಕ-ಶಿಕ್ಷಕಿಯರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ದ್ಯಾಮವ್ವ-ದುರುಗಮ್ಮ ದೇವಿಯರ ಹರಿ ಜಾತ್ರೋತ್ಸವದ 4ನೇ ದಿನದ ಕಾರ್ಯಕ್ರಮದಲ್ಲಿ ಮಾನವೀಯ ಮೌಲ್ಯಗಳಿಗೆ ಶ್ರೀಗಳ ಕರೆ

# ದೇವಿಯರ ಜಾತ್ರೆ ಸಂಭ್ರಮ, ಸೌಹಾರ್ದದ ಹಬ್ಬ



**ವಿಜಯಸಾಕ್ಷಿ ಸುದ್ದಿ, ಗದಗ**

ಜಾತ್ರೆಗಳು ಪರಸ್ಪರ ಪ್ರೀತಿ, ಸೌಹಾರ್ದತೆ ಹಾಗೂ ಏಕತೆಯನ್ನು ಬೆಸೆಯುವ ಹಬ್ಬಗಳಾಗಿದ್ದು, ವಿಶೇಷವಾಗಿ ಗ್ರಾಮ ದೇವತೆಗಳ ಜಾತ್ರೆಗಳು ಸಡಗರಸಂಭ್ರಮದ ಪ್ರತೀಕವಾಗಿವೆ. ಸದ್ಗುಣಗಳ ಬೆಳವಣಿಗೆ ಹಾಗೂ ದುರ್ಗುಣಗಳ ಅವನತಿಯೇ ಜಾತ್ರೆಗಳ ಪ್ರಮುಖ ಉದ್ದೇಶವಾಗಿದ್ದು, ಭಕ್ತರು ಜಾತ್ರೆಯ ನಿಜವಾದ ಮೌಲ್ಯಗಳನ್ನು ಅರಿತು ಭಾಗವಹಿಸಬೇಕು ಎಂದು ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ನಗರದ ಒಕ್ಕಲಗೇರಿ ಓಣಿಯ ಉಸುಗಿನಕಟ್ಟಿ ಬಳಿ ಗದಗ-ಬೆಟಗೇರಿ ಗ್ರಾಮ ದೇವತೆಗಳಾದ ಶ್ರೀ ದ್ಯಾಮವ್ವ ಹಾಗೂ ಶ್ರೀ ದುರುಗಮ್ಮ ದೇವಿಯರ ಹರಿ ಜಾತ್ರೋತ್ಸವದ ನಾಲ್ಕನೇ ದಿನದ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಗ್ರಾಮಗಳ ರಕ್ಷಣೆ, ಕಳ್ಳಕಾಕರ ಹಾವಳಿ ತಡೆ ಹಾಗೂ ರೋಗ-ರುಜಿನಗಳಿಂದ ಜನರನ್ನು ರಕ್ಷಿಸುವ ಉದ್ದೇಶದಿಂದ ಹಿಂದಿನ ಕಾಲದಲ್ಲಿ ಜಾತ್ರೆಗಳು ಆರಂಭಗೊಂಡಿದ್ದವು. ಆಧುನಿಕ ಕಾಲ ಘಟ್ಟದಲ್ಲಿ ಅವುಗಳಿಗೆ ವೈಚಾರಿಕ ಹಾಗೂ ವೈಜ್ಞಾನಿಕ ದೃಷ್ಟಿಕೋನ ದೊರೆತಿದ್ದು, ಜಾತ್ರೆಗಳು ಹೊಸ ಸ್ವರೂಪ ಪಡೆದುಕೊಂಡಿವೆ ಎಂದರು.

ಹಿಂದೆ ಗ್ರಾಮ ದೇವತೆಗಳನ್ನು ವಿವಿಧ ಕುತಂತ್ರ ವಿದ್ಯೆಗಳ ಮೂಲಕ ಉಗ್ರ ಸ್ವರೂಪಕ್ಕೆ ತರುವ ಆಚರಣೆಗಳಿದ್ದವು. ಮಧುರೈ ಮೀನಾಕ್ಷಿ ಹಾಗೂ ಕೊಲ್ಲೂರು ಮೂಕಾಂಬಿಕೆ ದೇವಿಯರು ಉಗ್ರ ಸ್ವರೂಪದಲ್ಲಿದ್ದ ಸಂದರ್ಭದಲ್ಲಿ ಶ್ರೀ ಶಂಕರಾಚಾರ್ಯರು ಭಕ್ತಿ ಹಾಗೂ ಜ್ಞಾನದ ಮೂಲಕ ದೇವಿಯರನ್ನು ಸಮಾಧಾನಗೊಳಿಸಿ ಭಕ್ತರನ್ನು ಭಯಮುಕ್ತರನ್ನಾಗಿಸಿದ ಸಂಗತಿಗಳು ಹಲವು ಗ್ರಂಥಗಳಲ್ಲಿ ಉಲ್ಲೇಖವಾಗಿವೆ ಎಂದು ಹೇಳಿದರು.

ಜಾತ್ರೆಗಳು ಭಕ್ತಿ, ಸಡಗರ, ಸಂಭ್ರಮದ ಜೊತೆಗೆ ಮಾನವೀಯ ಮೌಲ್ಯಗಳನ್ನು ಬೆಳೆಸುವ ವೇದಿಕೆಗಳಾಗಿವೆ. ಎಲ್ಲರ ಒಗ್ಗೂಡುವಿಕೆ ಹಾಗೂ ಒಕ್ಕಟ್ಟೇ ಜಾತ್ರೆಗಳ ಯಶಸ್ಸಿಗೆ ಪ್ರಮುಖ ಕಾರಣ. ಆದ್ದರಿಂದ ಸದ್ಭಕ್ತರು ಜಾತ್ರೆಗಳ ಹಿಂದಿರುವ ಮಹತ್ವವನ್ನು ಅರಿತು ಅದರಂತೆ ನಡೆದುಕೊಳ್ಳಬೇಕು ಎಂದರು.

ಬದುಕಿನಲ್ಲಿ ದೇವಾಲಯ ಸಂಸ್ಕೃತಿ ಹಾಗೂ ಮಠದ ಸಂಸ್ಕೃತಿ ಎಂಬ ಎರಡು ಪ್ರಮುಖ ಪರಂಪರೆಗಳಿವೆ. ದೇವಾಲಯ ಸಂಸ್ಕೃತಿಯಲ್ಲಿ ನಮಗೆ ಇಷ್ಟವಾದ ದೇವರನ್ನು ಪ್ರತಿಷ್ಠಾಪಿಸಿ ಆರಾಧಿಸುತ್ತೇವೆ. ಮಠದ ಸಂಸ್ಕೃತಿಯಲ್ಲಿ ಮಠಾಧೀಶರ ಜ್ಞಾನ ಹಾಗೂ ಅವರು ನಡೆಸಿಕೊಂಡು ಬರುವ ಪರಂಪರೆಗೆ ಅನುಗುಣವಾಗಿ ನಡೆಯುತ್ತೇವೆ. ಈ ಎರಡೂ ಸಂಸ್ಕೃತಿಗಳು ಬದುಕನ್ನು ಸುಧಾರಿಸಿ ಉನ್ನತಿಗೆ ಕೊಂಡೊಯ್ಯುವ ಮಾರ್ಗಗಳಾಗಿವೆ ಎಂದು ಶ್ರೀಗಳು ವಿವರಿಸಿದರು.

ಜಾತ್ರಾ ಸಮಿತಿ ಕಾರ್ಯಾಧ್ಯಕ್ಷ ಫಕ್ಕೀರಪ್ಪ ಹೆಬಸೂರ ಮಾತನಾಡಿ, ಸುಮಾರು ಎಂಟು ದಿನಗಳ ಕಾಲ ನಡೆಯುವ ಹರಿ ಜಾತ್ರೆಯಲ್ಲಿ ಸದ್ಭಕ್ತರ ಸಹಭಾಗಿತ್ವ, ಮಹಿಳೆಯರ ಸಮರ್ಪಣೆ ಹಾಗೂ ಒಗ್ಗಟ್ಟು ವಿಶೇಷವಾಗಿದೆ. ಮುಂದಿನ ದಿನಗಳಲ್ಲಿ ಜಾತ್ರೆಯನ್ನು ಮತ್ತಷ್ಟು ವಿಜೃಂಭಣೆಯಿಂದ ನಡೆಸಲು ಎಲ್ಲರ ಸಹಕಾರ ಅಗತ್ಯ ಎಂದರು. ಶ್ರೀ ಫಕ್ಕೀರೇಶ್ವರ ಮಹಾಸ್ವಾಮಿಗಳು ವೇದಿಕೆಯಲ್ಲಿ ಉಪಸ್ಥಿತರಿದ್ದರು. ಲೆಕ್ಕ ಪರಿಶೋಧಕ ಶಂಕ್ರಪ್ಪ ಕನೋಜ, ಐ.ಎಸ್. ಪೂಜಾರ, ವಸಂತ ಪಡಗದ, ಕೃಷ್ಣಾಪುರ, ಅಬ್ದುಲ್ ಮುನಾಫ ಮುಲ್ಲಾ, ನಗರಸಭಾ ಸದಸ್ಯ ಮಹಾಂತೇಶ ನಲವಡಿ ಸೇರಿದಂತೆ ಹಲವು ಗಣ್ಯರು ಮಾತನಾಡಿ, ಶ್ರೀ ದ್ಯಾಮವ್ವ ಹಾಗೂ ಶ್ರೀ ದುರುಗಮ್ಮ ದೇವಿಯರ ಹರಿ ಜಾತ್ರೋತ್ಸವದಿಂದ ಗದುಗಿನ ಕೀರ್ತಿ ಹೆಚ್ಚಿದೆ. ಈ ಭಾಗದ ಒಗ್ಗಟ್ಟು ಪ್ರೇರಣಾದಾಯಕವಾಗಿದ್ದು, ರಚನಾತ್ಮಕ ಕಾರ್ಯಗಳಿಗೆ ದಾನಿಗಳು ಸಹಕಾರ ನೀಡುವ ಸಂದೇಶವನ್ನು ಜಾತ್ರೆ ಸಾರುತ್ತಿದೆ. ಇಂತಹ ಚಟುವಟಿಕೆಗಳು ನಿರಂತರವಾಗಿ ನಡೆದರೆ ಯುವ ಪೀಳಿಗೆಗೆ ಸೂಕ್ತ ಮಾರ್ಗದರ್ಶನ ದೊರೆಯಲಿದೆ ಎಂದರು. ಗದಗ ಆಧ್ಯಾತ್ಮ ವಿದ್ಯಾಶ್ರಮದ ಶ್ರೀ ನೀಲಮ್ಮತಾಯಿ ಅಸುಂಡಿ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಟ್ರಸ್ಟ್ ಕಮಿಟಿ ಅಧ್ಯಕ್ಷ ಕೊಟ್ರಪ್ಪ ಕಮತರ ಅಧ್ಯಕ್ಷತೆ ವಹಿಸಿದ್ದರು.

> ಜಾತ್ರೆಯ ಸಂಭ್ರಮ ಕೇವಲ ಆಚರಣೆಗೆ ಸೀಮಿತವಾಗದೆ, ನಮ್ಮೊಳಗಿನ ಸದ್ಗುಣಗಳನ್ನು ಬೆಳೆಸುವ ಹಾಗೂ ದುರ್ಗುಣಗಳನ್ನು ದೂರ ಮಾಡುವ ಸಂಕಲ್ಪವಾಗಬೇಕು. ಎಲ್ಲರ ಒಗ್ಗಟ್ಟು, ಪ್ರೀತಿ ಮತ್ತು ಸೌಹಾರ್ದತೆಯೇ ಜಾತ್ರೆಯ ನಿಜವಾದ ಯಶಸ್ಸು.
> – ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ

ಪ್ರೀತಿ ವಿಶ್ವನಾಥಯ್ಯ ಶಿವಪ್ಪಯ್ಯನಮಠ, ಎಚ್.ಕೆ. ಮುಲ್ಲಾ, ಎಫ್.ವಿ. ಮರಿಗೌಡ್ರ, ಚಿದಾನಂದ ಕ್ಷತ್ರಿಯ, ವಿನೋದ ಮರಬದ, ಪ್ರಭು ಕಲಬಂಡಿ, ಬಸವರಾಜ ಗೂಳಪ್ಪ ಹೆರಕಲ್, ಸಂತೋಷ ಕಬಾಡಿ, ಶಂಕರ ಶಿದ್ದಿಂಗ, ಸೀತಾರಾಮ ಕದಾಂಪೂರ, ರಾಮಣ್ಣ ಬರಬಣ್ಣವರ, ಅಶ್ವಿನಿ ಅಭಿಷೇಕ ಕುಂದಗೋಳ, ಅಭಿಷೇಕ ಕುಂದಗೋಳ, ವಿರುಪಾಕ್ಷಪ್ಪ ಅಕ್ಕಿ, ಈಶ್ವರಪ್ಪ ಖ್ಯಾಡದ, ಮುತ್ತು ರೋಣದ, ಶೈಲಾ ತುಪ್ಪದ, ಶಿವಾನಂದ ಹೂಗಾರ, ನವೀನ ನಾಲ್ವಾಡ ಸೇರಿದಂತೆ ಹಲವಾರು ಗಣ್ಯರು, ದಾನಿಗಳು, ಯುವಕರು ಹಾಗೂ ಹಿರಿಯರು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ಇಂದು ಉಚಿತ ಆರೋಗ್ಯ ಶಿಬಿರ

**ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ದ್ಯಾಮವ್ವ ಮತ್ತು ದುರಗಮ್ಮ ದೇವತೆಗಳ ಹರಿ ಜಾತ್ರೋತ್ಸವದ ಅಂಗವಾಗಿ ಆ.23ರಂದು ಭಾನುವಾರ ನಗರದ ಶ್ರೀ ರಾಚೋಟಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ಉಚಿತ ಆರೋಗ್ಯ ತಪಾಸಣಾ ಹಾಗೂ ಔಷಧಿ ವಿತರಣೆ ಶಿಬಿರ ಆಯೋಜಿಸಲಾಗಿದೆ. ಬೆಳಗ್ಗೆ 10ರಿಂದ ಮಧ್ಯಾಹ್ನ 3ರವರೆಗೆ ನಡೆಯುವ ಶಿಬಿರದಲ್ಲಿ ನುರಿತ ಹಾಗೂ ಅನುಭವಿ ತಜ್ಞ ವೈದ್ಯರಿಂದ ಸಾರ್ವಜನಿಕರಿಗೆ ಉಚಿತ ಆರೋಗ್ಯ ತಪಾಸಣೆ ಮತ್ತು ಔಷಧಿ ವಿತರಣೆ ಮಾಡಲಾಗುವುದು. ಹಿಮೋಗ್ಲೋಬಿನ್, ರಕ್ತದಲ್ಲಿನ ಸಕ್ಕರೆ ಪ್ರಮಾಣ ಹಾಗೂ ರಕ್ತದೊತ್ತಡದ ಪ್ರಾಥಮಿಕ ಪರೀಕ್ಷೆಗಳನ್ನು ನಡೆಸಲಾಗುತ್ತದೆ. ಶಿಬಿರದಲ್ಲಿ ವಿವಿಧ ಶಸ್ತ್ರಚಿಕಿತ್ಸಾ ವಿಭಾಗಗಳ ತಜ್ಞರು, ಜನರಲ್ ಮೆಡಿಸಿನ್, ಸ್ತ್ರೀರೋಗ, ಎಲುಬು ಮತ್ತು ಕೀಲು, ನೇತ್ರ, ಮಕ್ಕಳ, ದಂತ, ಕಿವಿ-ಮೂಗು-ಗಂಟಲು, ಪೈಲ್ಸ್ ಹಾಗೂ ಕ್ಷಾರಸೂತ್ರ, ಪಂಚಕರ್ಮ ಚಿಕಿತ್ಸಾ ತಜ್ಞರು ಸೇರಿದಂತೆ ವಿವಿಧ ವಿಭಾಗಗಳ ವೈದ್ಯರು ಪಾಲ್ಗೊಳ್ಳಲಿದ್ದಾರೆ. ಗದಗ-ಬೆಟಗೇರಿ ನಗರದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹರಿ ಜಾತ್ರೋತ್ಸವ ಸಮಿತಿ ಮನವಿ ಮಾಡಿದೆ. ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದು, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಐಎಂಎ ಅಧ್ಯಕ್ಷ ಡಾ. ಶ್ರೀಧರ ಕುರಡಗಿ, ಯುವ ಮುಖಂಡ ವೀರಣ್ಣ ಎಸ್. ಮೇಟಿ, ಬಿಜೆಪಿ ಮುಖಂಡ ವಿಜಯಕುಮಾರ ಗಡ್ಡಿ ಹಾಗೂ ಎನ್ಐಎಂಎ ಅಧ್ಯಕ್ಷ ಡಾ. ಜಯಕುಮಾರ ಬ್ಯಾಳಿ ಅತಿಥಿಗಳಾಗಿ ಭಾಗವಹಿಸುವರು. ಹರಿ ಜಾತ್ರೋತ್ಸವ ಸಮಿತಿ ಅಧ್ಯಕ್ಷ ಕಮತರ ಕೊಟ್ರಪ್ಪ ಅಧ್ಯಕ್ಷತೆ ವಹಿಸುವರು. ಸಮಿತಿ ಕಾರ್ಯಾಧ್ಯಕ್ಷ ಫಕ್ಕೀರಪ್ಪ ವಿ. ಹೆಬಸೂರು ಉಪಸ್ಥಿತರಿರುವರು.

### ನಾಳೆ ಗಣೇಶ-ಆಂಜನೇಯ ಮೂರ್ತಿ ಪ್ರತಿಷ್ಠಾಪನೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಹುಬ್ಬಳ್ಳಿ ರಸ್ತೆಯ ಶ್ರೀ ಮೂಕ ಬಸವೇಶ್ವರ ದೇವಸ್ಥಾನದಲ್ಲಿ ಶ್ರೀ ಗಣೇಶ ಹಾಗೂ ಶ್ರೀ ಆಂಜನೇಯ ಮೂರ್ತಿ ಪ್ರತಿಷ್ಠಾಪನೆ ಮತ್ತು ದೇವಸ್ಥಾನದ ಕಳಸಾರೋಹಣ ಸಮಾರಂಭ ಆ.24ರಂದು ಬೆಳಗ್ಗೆ 10 ಗಂಟೆಗೆ ನಡೆಯಲಿದೆ.

ಶ್ರೀ ಮಳೆಮಲ್ಲಿಕಾರ್ಜುನ ಸ್ವಾಮೀಜಿ ಸಾನಿಧ್ಯದಲ್ಲಿ, ಶ್ರೀ ವೈಜನಾಥ ಸ್ವಾಮೀಜಿ ಹಾಗೂ ಶ್ರೀ ಚನ್ನವೀರ ಸ್ವಾಮೀಜಿ ಅವರ ನೇತೃತ್ವದಲ್ಲಿ ಹೋಮನವಗ್ರಹ ಪೂಜೆಯೊಂದಿಗೆ ಕಾರ್ಯಕ್ರಮ ಜರುಗಲಿದೆ. ಶಾಸಕ ಡಾ. ಚಂದ್ರು ಲಮಾಣಿ ದ್ವಾರಬಾಗಿಲು ಉದ್ಘಾಟಿಸಲಿದ್ದು, ಮಾಜಿ ಶಾಸಕರಾದ ಜಿ.ಎಂ. ಮಹಾಂತಶೆಟ್ಟರ ಹಾಗೂ ಜಿ.ಎಸ್. ಗಡ್ಡದೇವರಮಠ ಕಾರ್ಯಕ್ರಮ ಉದ್ಘಾಟಿಸುವರು. ಶಿವಪ್ರಕಾಶ ಅಂಬಯ್ಯನವರು ಅಧ್ಯಕ್ಷತೆ ವಹಿಸುವರು. ಮಾಜಿ ಶಾಸಕರಾದ ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಟಿ. ಈಶ್ವರ, ಶಂಕರ ರಾಗಿ, ವಿರುಪಾಕ್ಷಪ್ಪ ಪಡಿಗೇರಿ, ನಿಂಗಪ್ಪ ಬನ್ನಿ ಹಾಗೂ ಬಿ.ಕೆ. ನಾಗಲಾಂಬಿಕಾ ಸೇರಿದಂತೆ ಮತ್ತಿತರರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ದೇವಸ್ಥಾನ ಸಮಿತಿಯ ಪ್ರಮುಖ ಎಂ.ಎನ್. ನರಸಮ್ಮನವರ ಮನವಿ ಮಾಡಿದ್ದಾರೆ.

ಹಗರಿಬೊಮ್ಮನಹಳ್ಳಿ ಪೊಲೀಸ್ ಠಾಣೆಯಲ್ಲಿ ನಡೆದ ಶಾಂತಿಸಭೆಯಲ್ಲಿ ಸಿಪಿಐ ವಿಕಾಸ್ ಲಮಾಣಿ

### ಸೌಹಾರ್ದತೆಯೊಂದಿಗೆ ಈದ್ ಮಿಲಾದ್ ಆಚರಿಸಿ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಈದ್ ಮಿಲಾದ್ ಹಬ್ಬವನ್ನು ಶಾಂತಿ, ಸೌಹಾರ್ದತೆ ಹಾಗೂ ಸಹಬಾಳ್ವೆಯ ವಾತಾವರಣದಲ್ಲಿ ಆಚರಿಸಬೇಕು. ಹಬ್ಬದ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡದೆ, ಎಲ್ಲ ಸಮುದಾಯಗಳ ಜನರು ಪರಸ್ಪರ ಗೌರವ ಹಾಗೂ ಸಹಕಾರದೊಂದಿಗೆ ಹಬ್ಬವನ್ನು ಸಂಭ್ರಮದಿಂದ ಆಚರಿಸಬೇಕು ಎಂದು ಸಿಪಿಐ ವಿಕಾಸ್ ಲಮಾಣಿ ಹೇಳಿದರು. ಹಗರಿಬೊಮ್ಮನಹಳ್ಳಿ ಪೊಲೀಸ್ ಠಾಣೆಯಲ್ಲಿ ಈದ್ ಮಿಲಾದ್ ಹಿನ್ನೆಲೆಯಲ್ಲಿ ನಡೆದ ಶಾಂತಿಸಭೆಯಲ್ಲಿ ಮಾತನಾಡಿದ ಅವರು, ಹಬ್ಬದ ಸಂದರ್ಭದಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಯಾವುದೇ ರೀತಿಯ ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ ಸಾರ್ವಜನಿಕರು ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಬೇಕು ಎಂದರು. ಡಿವೈಎಸ್ಪಿ ಮಲ್ಲೇಶ್ ನಾಯ್ಕ್ ದೊಡ್ಮನಿ ಮಾತನಾಡಿ, ಪಟ್ಟಣದಲ್ಲಿ ಶಾಂತಿ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವುದು ಪೊಲೀಸ್ ಇಲಾಖೆಯೊಂದಿಗೆ ಸಾರ್ವಜನಿಕರ ಜವಾಬ್ದಾರಿಯೂ ಆಗಿದೆ. ಯಾವುದೇ ಅನುಮಾನಾಸ್ಪದ ಚಟುವಟಿಕೆ ಕಂಡುಬಂದಲ್ಲಿ ಕೂಡಲೇ ಪೊಲೀಸರ ಗಮನಕ್ಕೆ ತರಬೇಕು ಎಂದು ಮನವಿ ಮಾಡಿದರು. ಈದ್ ಮಿಲಾದ್ ಕುರಿತು ಮಾತನಾಡಿದ ಸಂಪಾದಕ ಎಂ. ಶಿವಮೂರ್ತಿ, ಎಲ್ಲರೂ ಪರಸ್ಪರ ಪ್ರೀತಿ, ಗೌರವ ಹಾಗೂ ಸೌಹಾರ್ದತೆಯಿಂದ ಬದುಕುವ ಮೂಲಕ ಸಮಾಜದಲ್ಲಿ ಶಾಂತಿ ನೆಲೆಸಲು ಸಹಕರಿಸಬೇಕು ಎಂದರು.

ಸಭೆಯಲ್ಲಿ ಪಿಎಸ್ಐ ನಾಗರತ್ನಮ್ಮ, ಕ್ರೈಂ ಪಿಎಸ್ಐ ಉಮಾಪತಿ ನಾಯ್ಕ, ಪುರಸಭೆ ಸದಸ್ಯರಾದ ತೆಲಿಗಿ ನೆಲ್ಲು ಇಸ್ಮಾಯಿಲ್ ಸಾಹೇಬ್, ಜೋಗಿ ಹನುಮಂತಪ್ಪ, ಕೆಜಿಎನ್ ಅಲ್ಲಾಭಕ್ಷಿ, ರಾಜೇಶ್ ಬ್ಯಾಡಗಿ, ದೀಪಕ್ ಕಠಾರಿ, ಸಿಖಂದರ್, ಗ್ಯಾರಂಟಿ ತಾಲೂಕು ಅಧ್ಯಕ್ಷ ಸೊನ್ನದ ಗುರು ಬಸವರಾಜ್, ತತ್ತಿ ಕಾಸಿಂ ಸಾಹೇಬ್, ಯಮನೂರು ಸಾಬ್, ದಾದಾಪೀರ್, ಎಣ್ಣೆ ಬಾಷಾ, ಬುಡೆನ್ ಸಾಬ್ ಅರಳಿಹಳ್ಳಿ, ಕರೀಂ ಸಾಬ್ ಬಲಹುಣಿಸಿ, ಬಾಬು ಪೇಂಟರ್, ಬ್ರೆಡ್ ನಜೀರ್ ಸಾಬ್, ವರದಿಗಾರ ಸರ್ದಾರ್ ಯಮನೂರಪ್ಪ ಸೇರಿದಂತೆ ವಿವಿಧ ಸಮುದಾಯಗಳ ಮುಖಂಡರು ಹಾಗೂ ಯುವಕರು ಉಪಸ್ಥಿತರಿದ್ದರು.

## ಛಾಯಾಗ್ರಾಹಕ ನಾಗರಾಜ ಸೂರಣಗಿಗೆ ಕೆಪಿಎ ಛಾಯಾಭೂಷಣ ಪ್ರಶಸ್ತಿ




**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಯುವ ಛಾಯಾಗ್ರಾಹಕ ಹಾಗೂ ಕಲಾವಿದ ನಾಗರಾಜ ಟಿ. ಸೂರಣಗಿ ಅವರು ಛಾಯಾಗ್ರಹಣ ಕ್ಷೇತ್ರ ಹಾಗೂ ಛಾಯಾಗ್ರಾಹಕರ ಸಂಘಟನೆಗಳಲ್ಲಿ ಸಲ್ಲಿಸಿದ ನಿಸ್ವಾರ್ಥ ಸೇವೆಯನ್ನು ಗುರುತಿಸಿ, ಕರ್ನಾಟಕ ಛಾಯಾಚಿತ್ರಗ್ರಾಹಕರ ಸಂಘದ ವತಿಯಿಂದ ನೀಡಲಾಗುವ ರಾಜ್ಯಮಟ್ಟದ ಕೆಪಿಎ ಛಾಯಾಭೂಷಣ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಬೆಂಗಳೂರಿನ ಚಾಮರಾಜಪೇಟೆಯ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಬುಧವಾರ ಆಯೋಜಿಸಿದ್ದ 187ನೇ ವಿಶ್ವ ಛಾಯಾಗ್ರಹಣ ದಿನಾಚರಣೆ ಕಾರ್ಯಕ್ರಮದಲ್ಲಿ ನಾಗರಾಜ ಸೂರಣಗಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ನಾಗರಾಜ ಸೂರಣಗಿ ಅವರು ಪ್ರಶಸ್ತಿಗೆ ಭಾಜನರಾಗಿರುವುದಕ್ಕೆ ಗದಗ ಜಿಲ್ಲೆಯ ಛಾಯಾಗ್ರಾಹಕರು ಹಾಗೂ ಜಿಲ್ಲಾ ಮತ್ತು ತಾಲೂಕು ಛಾಯಾಗ್ರಾಹಕರ ಸಂಘದ ಪದಾಧಿಕಾರಿಗಳು, ಸದಸ್ಯರು ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ.

## ಶಿಸ್ತು, ಪರಿಶ್ರಮದಿಂದ ವಿದ್ಯಾರ್ಥಿಗಳಿಗೆ ಉಜ್ವಲ ಭವಿಷ್ಯ



**ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾಲಯವೆಂದರೆ ಕೇವಲ ಪಾಠ ಕಲಿಸುವ ಕೇಂದ್ರವಲ್ಲ; ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನ, ಪ್ರತಿಭಾ ಅನಾವರಣ ಹಾಗೂ ಭವಿಷ್ಯ ನಿರ್ಮಾಣಕ್ಕೆ ದಾರಿದೀಪವಾಗಿರುವ ಜ್ಞಾನದೇಗುಲ. ವಿದ್ಯಾರ್ಥಿಗಳು ಮತ್ತು ವಿದ್ಯಾಲಯದ ನಡುವಿನ ಆತ್ಮೀಯ ಹಾಗೂ ವಿಶ್ವಾಸಪೂರ್ಣ ಸಂಬಂಧವು ಶೈಕ್ಷಣಿಕ ಪ್ರಗತಿಯ ಜೊತೆಗೆ ಉತ್ತಮ ನಾಗರಿಕರನ್ನು ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ಪ್ರಾಂಶುಪಾಲ ಡಾ. ಅಪ್ಪಣ್ಣ ಹಂಜೆ ಹೇಳಿದರು.

ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 202627ನೇ ಸಾಲಿನಲ್ಲಿ ಪ್ರವೇಶ ಪಡೆದ ಪ್ರಥಮ ವರ್ಷದ ವಿದ್ಯಾರ್ಥಿಗಳಿಗಾಗಿ ವಿವೇಕಾನಂದ ಪದವಿಪೂರ್ವ ಕಾಲೇಜಿನ ಸಭಾಂಗಣದಲ್ಲಿ ಆಯೋಜಿಸಿದ್ದ ದಿಕ್ಸೂಚಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳ ಸಮಸ್ಯೆಗಳನ್ನು ಆಲಿಸಿ, ಅವರ ಪ್ರತಿಭೆ ಹಾಗೂ ಆಸಕ್ತಿಗಳನ್ನು ಗುರುತಿಸಿ ಸೂಕ್ತ ಮಾರ್ಗದರ್ಶನ ನೀಡುವುದು ವಿದ್ಯಾಲಯದ ಪ್ರಮುಖ ಜವಾಬ್ದಾರಿಯಾಗಿದೆ ಎಂದರು.

ಕಾರ್ಯಕ್ರಮದ ಸಂಘಟಕ ಹಾಗೂ ಸಾಂಸ್ಕೃತಿಕ ವಿಭಾಗದ ಸಂಯೋಜಕ ರಮೇಶ ಹುಲಕುಂದ ಮಾತನಾಡಿ, ವಿದ್ಯಾರ್ಥಿಗಳು ವಿದ್ಯಾಲಯವನ್ನು ತಮ್ಮದೇ ಕುಟುಂಬವೆಂದು ಭಾವಿಸಿ ಶಿಸ್ತು, ಸಮಯಪಾಲನೆ, ಉತ್ತಮ ನಡತೆ ಹಾಗೂ ಸಾಮಾಜಿಕ ಹೊಣೆಗಾರಿಕೆಯನ್ನು ಬೆಳೆಸಿಕೊಳ್ಳಬೇಕು ಎಂದರು.

ಕುಮಾರಿ ಪ್ರಜ್ಞಾ ವರ್ಣೇಕರ ಪ್ರಾರ್ಥಿಸಿದರು. ಕಲಾ ವಿಭಾಗದ ಮುಖ್ಯಸ್ಥ ಮಹಾನಂದ ಹಿರೇಮಠ ಸ್ವಾಗತಿಸಿದರು. ಐಕ್ಯುಎಸಿ ಸಹ ಸಂಯೋಜಕ ಡಾ. ಮಂಜುನಾಥ ತ್ಯಾಲಗಡಿ, ಉದ್ಯೋಗ ಮಾಹಿತಿ ಕೋಶದ ಸಂಯೋಜಕ ಡಾ. ಶ್ರೀಶವಿಠ್ಠಲ ಡಿ., ಎನ್ಎಸ್ಎಸ್ ಘಟಕದ ಸಂಯೋಜಕ ವಿಜಯಕುಮಾರ ಎಸ್., ಹೊಸ ದಿಗಂತ ಕಾರ್ಯಕ್ರಮದ ಸಂಯೋಜಕ ಹುಸೇನಭಾಷಾ, ಶಿಸ್ತು ಸಮಿತಿ ಸಂಯೋಜಕ ಮಹಾಂತೇಶ ಹಾಗೂ ರೆಡ್ ಕ್ರಾಸ್ ಸಂಯೋಜಕ ಭೀಮೇಶ ಕಾಲೇಜಿನ ವಿವಿಧ ಶೈಕ್ಷಣಿಕ ಹಾಗೂ ಸಹಪಠ್ಯ ಘಟಕಗಳ ಕುರಿತು ಪರಿಚಯಿಸಿದರು.

ಆಂತರಿಕ ಪರೀಕ್ಷಾ ವಿಭಾಗದ ಸಂಯೋಜಕ ಮನೋಜಕುಮಾರ ಜೋತಾವರ ವಂದಿಸಿದರು. ರೋವರ್ಸ್‌ರೇಂಜರ್ಸ್ ಸಂಯೋಜಕಿ ಸಾವಿತ್ರಿ ಟಿ. ಕಾರ್ಯಕ್ರಮ ನಿರ್ವಹಿಸಿದರು.

## ಜಾತ್ರೆ ಯಶಸ್ಸಿಗೆ ಹಿರಿಯರ ಶ್ರಮ: ವಸಂತ ಪಡಗದ




**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಗ್ರಾಮ ದೇವಿಯರ ಜಾತ್ರಾ ಮಹೋತ್ಸವವು ಅತ್ಯಂತ ಸಂಭ್ರಮದಿಂದ ನಡೆಯುತ್ತಿದ್ದು, ಇದರ ಯಶಸ್ಸಿಗಾಗಿ ಹಿರಿಯರು ಹಾಗೂ ಮಾರ್ಗದರ್ಶಕರು ಅಪಾರ ಶ್ರಮ ವಹಿಸುತ್ತಿದ್ದಾರೆ ಎಂದು ಬಿಜೆಪಿ ಯುವ ಮುಖಂಡ ವಸಂತ ಪಡಗದ ಹೇಳಿದರು.ನಗರದ ಒಕ್ಕಲಗೇರಿ ಓಣಿಯ ಶ್ರೀ ದ್ಯಾಮವ್ವ ಹಾಗೂ ದುರ್ಗಮ್ಮ ದೇವಿಯರ ಹರಿ ಜಾತ್ರೋತ್ಸವದ ನಾಲ್ಕನೇ ದಿನದ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಮಹಾಪ್ರಸಾದಕ್ಕೆ ಭಕ್ತಿಸೇವೆಯಾಗಿ ಅಕ್ಕಿ ಸಮರ್ಪಿಸಿದ ಹಿನ್ನೆಲೆಯಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಸುಮಾರು 18 ವರ್ಷಗಳ ಸುದೀರ್ಘ ಅವಧಿಯ ಬಳಿಕ ನಡೆಯುತ್ತಿರುವ ಈ ಐತಿಹಾಸಿಕ ಜಾತ್ರೆಯ ಯಶಸ್ಸಿಗಾಗಿ ಗುರುಹಿರಿಯರು ತಮ್ಮ ವೈಯಕ್ತಿಕ ಕೆಲಸ-ಕಾರ್ಯಗಳನ್ನು ಬದಿಗೊತ್ತಿ ಹಗಲಿರುಳು ಶ್ರಮಿಸುತ್ತಿದ್ದಾರೆ. ವಿಶೇಷವಾಗಿ ಒಕ್ಕಲಗೇರಿ ಓಣಿಯ ಜಾತ್ರಾ ಮಹೋತ್ಸವವು ರಾಜ್ಯಾದ್ಯಂತ ಅಪಾರ ಪ್ರಸಿದ್ಧಿ ಪಡೆದಿದೆ ಎಂದರು.


> 18 ವರ್ಷಗಳ ಬಳಿಕ ನಡೆಯುತ್ತಿರುವ ಈ ಐತಿಹಾಸಿಕ ಜಾತ್ರೆ ಹಿರಿಯರ ಪರಿಶ್ರಮ ಹಾಗೂ ಎಲ್ಲರ ಒಗ್ಗಟ್ಟಿನ ಫಲವಾಗಿದೆ. ಈ ಪವಿತ್ರ ವಾತಾವರಣಕ್ಕೆ ಯಾವುದೇ ರೀತಿಯ ಮನಸ್ತಾಪ ಅಥವಾ ಭಿನ್ನಾಭಿಪ್ರಾಯ ಧಕ್ಕೆ ತರದಂತೆ ಪ್ರತಿಯೊಬ್ಬರೂ ಜವಾಬ್ದಾರಿಯಿಂದ ನಡೆದುಕೊಳ್ಳಬೇಕು.
> – **ವಸಂತ ಪಡಗದ,** ಬಿಜೆಪಿ ಯುವ ಮುಖಂಡ

ಇಂತಹ ಪವಿತ್ರ ಧಾರ್ಮಿಕ ಕಾರ್ಯಕ್ರಮಗಳ ಸಂದರ್ಭದಲ್ಲಿ ಉಂಟಾಗುವ ಸಣ್ಣಪುಟ್ಟ ಮನಸ್ತಾಪಗಳು ಹಾಗೂ ವೈಯಕ್ತಿಕ ಭಿನ್ನಾಭಿಪ್ರಾಯಗಳು ಹಿರಿಯರ ನಿಸ್ವಾರ್ಥ ಶ್ರಮಕ್ಕೆ ಕೆಟ್ಟ ಹೆಸರು ತರುತ್ತವೆ. ಆದ್ದರಿಂದ ಎಲ್ಲರೂ ಒಗ್ಗಟ್ಟಿನಿಂದ ಜಾತ್ರೆಯ ಯಶಸ್ಸಿಗೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಪ್ರಸ್ತುತ ನಡೆಯುತ್ತಿರುವ 10 ದಿನಗಳ ಗ್ರಾಮ ದೇವಿಯರ ಜಾತ್ರಾ ಮಹೋತ್ಸವ ಜಿಲ್ಲೆಯಷ್ಟೇ ಅಲ್ಲದೆ ರಾಜ್ಯಾದ್ಯಂತ ಗಮನ ಸೆಳೆಯುತ್ತಿದೆ. ಪ್ರತಿನಿತ್ಯ ಸಾವಿರಾರು ಭಕ್ತರು ಆಗಮಿಸಿ ಅನ್ನಪ್ರಸಾದ ಸ್ವೀಕರಿಸುತ್ತಿದ್ದು, ಮಹಾಪ್ರಸಾದ ಸೇವೆಯ ಅಚ್ಚುಕಟ್ಟುತನ ಹಾಗೂ ಸಂಘಟನೆಗೆ ಸಾರ್ವಜನಿಕರು ಮತ್ತು ವಿವಿಧೆಡೆಯಿಂದ ಆಗಮಿಸಿದ ಭಕ್ತರಿಂದ ಮೆಚ್ಚುಗೆ ವ್ಯಕ್ತವಾಗುತ್ತಿದೆ ಎಂದರು.

ಇಂತಹ ಅದ್ಭುತ ಧಾರ್ಮಿಕ ವಾತಾವರಣವನ್ನು ಮುಂದುವರಿಸಿಕೊಂಡು ಹೋಗುವುದು ಎಲ್ಲರ ಹೊಣೆ. ಜಾತ್ರೆಯ ಮೂಲಕ ಸೌಹಾರ್ದತೆ, ಭಕ್ತಿ ಹಾಗೂ ಒಗ್ಗಟ್ಟಿನ ಸಂದೇಶ ಮತ್ತಷ್ಟು ಬಲಗೊಳ್ಳಬೇಕು ಎಂದು ವಸಂತ ಪಡಗದ ಹೇಳಿದರು.ನರೇಗಲ್ಲದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ, ಓಂಕಾರೇಶ್ವರ ಮಠದ ಫಕೀರೇಶ್ವರ ಸ್ವಾಮೀಜಿ ಹಾಗೂ ನೀಲಮ್ಮತಾಯಿ ಅಸುಂಡಿ ಸಾನ್ನಿಧ್ಯ ವಹಿಸಿದ್ದರು. ಕೊಟ್ರಪ್ಪ ಕಮತರ ಅಧ್ಯಕ್ಷತೆ ವಹಿಸಿದ್ದರು.ಫಕೀರಪ್ಪ ಹೆಬಸೂರ, ಶಂಕ್ರಪ್ಪ ಖನೋಜ, ಐ.ಎಸ್. ಪೂಜಾರ, ಸದಾಶಿವಯ್ಯ ಮದರಿಮಠ, ಪ್ರೀತಿ ಶಿವಪ್ಪಯ್ಯನಮಠ, ಕೃಷ್ಣಾ ಪರಾಪುರ, ಮಹಾಂತೇಶ ನೆಲವಡಿ, ವಿನೋದ ಮೊರಬದ, ಎಚ್.ಕೆ. ಮುಲ್ಲಾ, ಅಬ್ದುಲ್ ಮುನಾಫ್ ಮುಲ್ಲಾ, ಎಫ್.ಪಿ. ಮರಿಗೌಡರ, ರಾಮಣ್ಣ ಭರಮಣ್ಣವರ ಸೇರಿದಂತೆ ಹಲವರು ಉಪಸ್ಥಿತರಿದ್ದರು. ವಾಣಿ ಅಸುಂಡಿ ಸ್ವಾಗತಿಸಿದರು. ಬಾಹುಬಲಿ ಜೈನರ್ ನಿರೂಪಿಸಿದರು.

## ನಿಧನ
### ಎಂ.ಪಿ. ಕಾತೂರ



**ಲಕ್ಷ್ಮೇಶ್ವರ:** ಪಟ್ಟಣದ ಬಸ್ತಿಬಣದ ನಿವಾಸಿ, ಆಧ್ಯಾತ್ಮಿಕ ಜೀವಿ ಹಾಗೂ ನಿವೃತ್ತ ಉಪ ತಹಸೀಲ್ದಾರ್ ಎಂ.ಪಿ. ಕಾತೂರ (85) ಅವರು ಶನಿವಾರ ನಿಧನರಾದರು.

ಮೃತರು ಇಬ್ಬರು ಪುತ್ರರನ್ನು ಅಗಲಿದ್ದಾರೆ. ಅವರ ನಿಧನಕ್ಕೆ ಕುಟುಂಬಸ್ಥರು, ಬಂಧುಗಳು ಹಾಗೂ ಆತ್ಮೀಯರು ಸಂತಾಪ ಸೂಚಿಸಿದ್ದಾರೆ.

ಬೆಳಹೋಡ ಶಾಲೆಯ ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿ ವಿತರಣೆ

## ಸರ್ಕಾರಿ ಶಾಲಾ ಮಕ್ಕಳ ಕಲಿಕೆಗೆ ರೋಟರಿ ಸಾಥ್



**ವಿಜಯಸಾಕ್ಷಿ ಸುದ್ದಿ, ಗದಗ**

ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳ ಶೈಕ್ಷಣಿಕ ಚಟುವಟಿಕೆಗಳಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಗದಗ-ಬೆಟಗೇರಿ ರೋಟರಿ ಕ್ಲಬ್ ವತಿಯಿಂದ ಗದಗ ತಾಲೂಕಿನ ಬೆಳಹೋಡ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು.

ಗದಗ-ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಡಾ. ಪ್ರದೀಪ ಉಗಲಾಟ ಅವರ ನೇತೃತ್ವದಲ್ಲಿ ಶಾಲೆಗೆ ಭೇಟಿ ನೀಡಿದ ರೋಟರಿ ತಂಡವು, ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆಗಳು ಶಿಕ್ಷಣ ಕ್ಷೇತ್ರಕ್ಕೆ ನೀಡುತ್ತಿರುವ ಮಹತ್ವದ ಕೊಡುಗೆಯನ್ನು ಶ್ಲಾಘಿಸಿತು.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ಪ್ರದೀಪ ಉಗಲಾಟ, ಸರ್ಕಾರಿ ಶಾಲೆಗಳ ಶೈಕ್ಷಣಿಕ ಅಭಿವೃದ್ಧಿಗೆ ಅಗತ್ಯವಿರುವ ವಿವಿಧ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ರೋಟರಿ ಕ್ಲಬ್ ವತಿಯಿಂದ ಸಾಧ್ಯವಿರುವ ಎಲ್ಲ ರೀತಿಯ ಪ್ರಯತ್ನಗಳನ್ನು ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಕಲಿಕಾ ಸಾಮಗ್ರಿಗಳನ್ನು ಸ್ವೀಕರಿಸಿ ಮಾತನಾಡಿದ ಶಾಲೆಯ ಮುಖ್ಯ ಶಿಕ್ಷಕ ಕೆ.ಎಸ್. ದಿಂಡಿ, ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸಮುದಾಯದ ಸಹಭಾಗಿತ್ವ ಅತ್ಯಂತ ಅಗತ್ಯವಾಗಿದೆ. ರೋಟರಿ ಕ್ಲಬ್‌ನ ಪದಾಧಿಕಾರಿಗಳು ಶಾಲೆಗೆ ಭೇಟಿ ನೀಡಿ ವಿದ್ಯಾರ್ಥಿಗಳ ಕಲಿಕೆಗೆ ಉತ್ತೇಜನ ಹಾಗೂ ಪ್ರೋತ್ಸಾಹ ನೀಡುವುದರ ಜೊತೆಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಿರುವುದು ಅಭಿನಂದನೀಯ ಎಂದರು.

> ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸಮುದಾಯದ ಸಹಭಾಗಿತ್ವ ಅತ್ಯಂತ ಅಗತ್ಯ. ರೋಟರಿ ಕ್ಲಬ್‌ನ ಪದಾಧಿಕಾರಿಗಳು ಶಾಲೆಗೆ ಆಗಮಿಸಿ ಮಕ್ಕಳ ಕಲಿಕೆಗೆ ಉತ್ತೇಜನ ನೀಡುವುದರ ಜೊತೆಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಿರುವುದು ಶ್ಲಾಘನೀಯ. ಇಂತಹ ಸಹಕಾರದಿಂದ ಗ್ರಾಮೀಣ ಶಾಲೆಗಳ ಶೈಕ್ಷಣಿಕ ಚಟುವಟಿಕೆಗಳಿಗೆ ಮತ್ತಷ್ಟು ಬಲ ಸಿಗಲಿದೆ.
> – **ಕೆ.ಎಸ್. ದಿಂಡಿ,** ಮುಖ್ಯ ಶಿಕ್ಷಕರು, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಬೆಳಹೋಡ

ಈ ಸಂದರ್ಭದಲ್ಲಿ ಕ್ಲಬ್ ಉಪಾಧ್ಯಕ್ಷ ಸುರೇಶ ಕುಂಬಾರ, ಕಾರ್ಯದರ್ಶಿ ಅಕ್ಷಯ್ ಶೆಟ್ಟಿ, ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಪತ್ತೇಸಾಬ ದೊಡ್ಡಮನಿ, ಸದಸ್ಯ ಪರಸಪ್ಪ ಹುಲಕೋಟಿ, ಶಿಕ್ಷಕರಾದ ಬಿ.ಎಂ. ಸೈಯದ್, ಮಂಜುನಾಥ ಜಕ್ಕಲಿ, ರುಕ್ಮಿಣಿ ಗುಳಗಂದಿ, ಸುಜಾತಾ ಧೋಳ, ಸುಮಾ ತಿಪ್ಪರಡ್ಡಿ, ಲಲಿತಾ ಚನ್ನಪ್ಪಗೌಡರ, ಸರ್ಕಾರಿ ಕಿರಿಯ ಪ್ರಾಥಮಿಕ ಉರ್ದು ಶಾಲೆಯ ಮುಖ್ಯ ಶಿಕ್ಷಕ ಮದನಿಬಾದಷಾ ಸರ್ವರ, ರಮೇಶ ಮೇಡಿ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಹತ್ತು ವರ್ಷ ಕೊಡಿ; ಕರ್ನಾಟಕ ಬದಲಿಸುತ್ತೇನೆ



**ವಿಜಯಸಾಕ್ಷಿ ಸುದ್ದಿ, ಗದಗ**

ಉತ್ತರ ಕರ್ನಾಟಕದ ಎಲ್ಲ ಜಿಲ್ಲೆಗಳಲ್ಲಿ ಉಚಿತ ಆಸ್ಪತ್ರೆ ನಿರ್ಮಿಸುವ ಯೋಜನೆ ಹಂತ ಹಂತವಾಗಿ ಜಾರಿಗೊಳ್ಳಲಿದೆ. ಇದಕ್ಕೆ ಮೂರ್ನಾಲ್ಕು ವರ್ಷಗಳ ಕಾಲಾವಕಾಶ ಬೇಕಾಗಬಹುದು. ಆದರೆ ಹತ್ತು ವರ್ಷಗಳ ಸಮಯ ನೀಡಿದರೆ ಕರ್ನಾಟಕದಲ್ಲಿ ಮಹತ್ವದ ಬದಲಾವಣೆ ತರುವ ಸೇವಾ ಪರ್ವ ರೂಪಿಸುವುದಾಗಿ ಒನ್ ವರ್ಲ್ಡ್ ಒನ್ ಫ್ಯಾಮಿಲಿ ಮಿಷನ್ ಸಂಸ್ಥಾಪಕ ಸದ್ಗುರು ಶ್ರೀ ಮಧುಸೂದನ ಸಾಯಿ ಹೇಳಿದರು.

ನಗರದಲ್ಲಿ ಶುಕ್ರವಾರ ನಡೆದ ದಿವ್ಯ ಸಂಜೆ ಸಂವಾದ ಕಾರ್ಯಕ್ರಮದಲ್ಲಿ ವಿದುಷಿ ಸಂಗೀತಾ ಕಟ್ಟಿ ಅವರ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಮೊದಲ ಹಂತದಲ್ಲಿ ವೆಲ್‌ನೆಸ್ ಕೇಂದ್ರಗಳನ್ನು ಆರಂಭಿಸಿ, ಬಳಿಕ 50 ಹಾಸಿಗೆಗಳ ಆಸ್ಪತ್ರೆಗಳನ್ನು ಸ್ಥಾಪಿಸಲಾಗುವುದು. ಪ್ರತಿ ತಾಲೂಕಿನಲ್ಲಿ ಇಂತಹ ಆರೋಗ್ಯ ಕೇಂದ್ರಗಳನ್ನು ನಿರ್ಮಿಸುವ ಆಶಯವಿದೆ ಎಂದರು.

ತಂತ್ರಜ್ಞಾನ ಮಾಹಿತಿ ಮತ್ತು ಜ್ಞಾನ ನೀಡಬಲ್ಲುದೇ ಹೊರತು ವ್ಯಕ್ತಿಯಲ್ಲಿ ನೈಜ ಪರಿವರ್ತನೆ ತರಲು ಸಾಧ್ಯವಿಲ್ಲ. ಶಿಕ್ಷಣದಲ್ಲಿ ಗುರುವಿನ ಮಾರ್ಗದರ್ಶನ ಹಾಗೂ ಸಾನ್ನಿಧ್ಯ ಅತ್ಯಂತ ಮುಖ್ಯ. ಸಂಗೀತದಲ್ಲಿಯೂ ಪ್ರೇಮ, ಭಕ್ತಿ ಹಾಗೂ ಅರ್ಪಣಾಭಾವವಿದ್ದಾಗ ಅದು ಹೃದಯವನ್ನು ತಲುಪುತ್ತದೆ ಎಂದರು.

> ಹತ್ತು ವರ್ಷಗಳ ಸಮಯ ನೀಡಿ; ಕರ್ನಾಟಕದಲ್ಲಿ ಮಹತ್ವದ ಬದಲಾವಣೆ ತರುವ ಸೇವಾ ಪರ್ವವನ್ನು ರೂಪಿಸುತ್ತೇನೆ. ಪ್ರತಿ ತಾಲೂಕಿನಲ್ಲಿ ಆರೋಗ್ಯ ಕೇಂದ್ರ ಸ್ಥಾಪಿಸುವ ಆಶಯವಿದೆ.
> – ಸದ್ಗುರು ಶ್ರೀ ಮಧುಸೂದನ ಸಾಯಿ

ಪ್ರಶಾಂತಿ ಬಾಲಮಂದಿರ ಟ್ರಸ್ಟ್ ಅಧ್ಯಕ್ಷ ಡಾ. ಬಿ.ಎನ್. ನರಸಿಂಹಮೂರ್ತಿ, ವಿದ್ಯಾರ್ಥಿನಿ ಸೃಷ್ಟಿ ಪಲ್ಲೆ ಹಾಗೂ ಬಿ.ಎಸ್. ಗೋಣಿ ಮಾತನಾಡಿದರು. ಕಾರ್ಯಕ್ರಮದಲ್ಲಿ ವೇದಪಾರಾಯಣ ಹಾಗೂ ಸಾಯಿ ಸಿಂಫನಿ ಆರ್ಕೆಸ್ಟ್ರಾ ಕಾರ್ಯಕ್ರಮ ನಡೆಯಿತು.

**ರಾಜಕಾರಣಿಗಳ ಮನಸ್ಸು ಬದಲಾಗಬೇಕು: ಡಿ.ಆರ್. ಪಾಟೀಲ:** ರಾಜಕಾರಣಿಗಳು ನಿಸ್ವಾರ್ಥ ಸೇವೆಗೆ ಮುಂದಾದರೆ ಸಮಾಜದಲ್ಲಿ ದೊಡ್ಡ ಬದಲಾವಣೆ ತರಲು ಸಾಧ್ಯ. ರಾಜಕೀಯ ಕ್ಷೇತ್ರದಲ್ಲಿರುವವರ ಮನಸ್ಸು ಬದಲಾಗಬೇಕು ಎಂದು ಮಾಜಿ ಶಾಸಕ ಡಿ.ಆರ್. ಪಾಟೀಲ ಹೇಳಿದರು. ಸದ್ಗುರು ಶ್ರೀ ಮಧುಸೂದನ ಸಾಯಿ ಅವರಿಂದ ಕರ್ನಾಟಕ ಪರಿವರ್ತಕ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಅವರು, ರಾಜಕಾರಣಿಗಳು ಮಾದರಿ ವ್ಯಕ್ತಿತ್ವ ರೂಪಿಸಿಕೊಳ್ಳಲು ಮಾರ್ಗದರ್ಶನ ಹಾಗೂ ತರಬೇತಿ ಅಗತ್ಯ ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka